₹ 4 ಪುಟ: 4 ಸಂಪುಟ: 4 ಸಂಚಿಕೆ 86 newsbelagavi@gmail.com 9900332089 9900332089



# ಬೆಳಗಾವಿ ವರದಿ

ಪ್ರಧಾನ ಸಂಪಾದಕರು: ಸತೀಶ್.ಬಿ.ಜಿ
BELAGAVI VARADI KANNADA DAILY
ಕನ್ನಡ ದಿನಪತ್ರಿಕೆ
Volume : 4 Issue: 86 Thursday, 18, MAY, 2023 RNI: KARKAN/2020/79084 Regn,No:G-2/PMG/KA/NK/BM/139/2021-23 24

## ಸಿಎಂ ಆಯ್ಕೆ ಬಗ್ಗೆ ಯಾವುದೇ ಅಂತಿಮ ನಿರ್ಧಾರವಾಗಿಲ್ಲ

### 48 ರಿಂದ 72 ಗಂಟೆಯೊಳಗೆ ಅಧಿಕೃತ ಘೋಷಣೆ: ಸುರ್ಜೇವಾಲಾ

ಬೆಂಗಳೂರು: ಕರ್ನಾಟಕ ಸಿಎಂ ಆಯ್ಕೆ ಬಗ್ಗೆ ಯಾವುದೇ ಅಂತಿಮ ನಿರ್ಧಾರವಾಗಿಲ್ಲ.. 48ರಿಂದ 72 ಗಂಟೆಯೊಳಗೆ ಅಧಿಕೃತ ಘೋಷಣೆ ಹೊರಡಿಸುತ್ತೇವೆ ಎಂದು ಕರ್ನಾಟಕ ಉಸ್ತುವಾರಿ ರಣದೀಪ್ ಸಿಂಗ್ ಸುರ್ಜೇವಾಲ ಹೇಳಿದ್ದಾರೆ.



ದೆಹಲಿಯಲ್ಲಿ ಮಾತನಾಡಿದ ಅವರು, ಸಿದ್ದರಾಮಯ್ಯ ಮತ್ತು ಡಿಕೆ ಶಿವಕುಮಾರ್ ಇಬ್ಬರೂ ರಾಹುಲ್ ಗಾಂಧಿ ಅವರನ್ನು ಭೇಟಿಯಾಗಿದ್ದಾರೆ. ಸಿಎಂ ಆಯ್ಕೆ ಬಗ್ಗೆ ಯಾವುದೇ ಅಂತಿಮವಾಗಿಲ್ಲ ಎಂದು ರಣದೀಪ್ ಸಿಂಗ್ ಸುರ್ಜೇವಾಲ ಹೇಳಿದರು. ನಾಳೆ ಅಥವಾ ನಾಡಿದ್ದು ನೂತನ ಸಿಎಂ ಘೋಷಣೆ ಸಾಧ್ಯತೆ ಇದೆ ಎಂದು ಹೇಳಿದರು.

ಸದ್ಯ ಪಕ್ಷದ ಅಧ್ಯಕ್ಷ ಮಲ್ಲಿಕಾರ್ಜುನ ಖರ್ಗೆ ಅವರ ನೇತೃತ್ವದಲ್ಲಿ ಸಮಾಲೋಚನೆ ನಡೆಯುತ್ತಿದೆ. ಕಾಂಗ್ರೆಸ್ ನಿರ್ಧಾರ ಕೈಗೊಂಡಾಗ ನಾವು ನಿಮಗೆ ತಿಳಿಸುತ್ತೇವೆ. ಮುಂದಿನ 48–72 ಗಂಟೆಗಳಲ್ಲಿ ಕರ್ನಾಟಕದಲ್ಲಿ ಹೊಸ ಸಚಿವ ಸಂಪುಟ ರಚನೆಯಾಗಲಿದೆ ಎಂದು ಸುರ್ಜೇವಾಲಾ ಹೇಳಿದರು.

## ಹೈಕಮಾಂಡ್ ಮನವೊಲಿಕೆಗೆ ಒಪ್ಪದ ಡಿ.ಕೆ.ಶಿ: ಸಿಎಂ ಹುದ್ದೆಗಾಗಿ ಬಿಗಿಪಟ್ಟು

ನವದೆಹಲಿ; ಕರ್ನಾಟಕ ರಾಜ್ಯ ಮುಖ್ಯಮಂತ್ರಿ ಆಯ್ಕೆ ಕಸರತ್ತು ಕ್ಷಣ–ಕ್ಕೊಂದು ತಿರುವು ಪಡೆಯುತ್ತಿದ್ದು, ಇನ್ನೇನು ಸಿಎಂ ಆಯ್ಕೆ ಫೈನಲ್ ಎನ್ನುವಷ್ಟರಲ್ಲಿ ಕೊನೇ ಕ್ಷಣದಲ್ಲಿ ರಾಜಕೀಯ ಚಿತ್ರಣವೇ ಬದಲಾಗುತ್ತಿದೆ.

ಒಂದೆಡೆ ಸಿಎಂ ಹುದ್ದೆಗಾಗಿ ಕೆಪಿಸಿಸಿ ಅಧ್ಯಕ್ಷ ಡಿ.ಕೆ.ಶಿವಕುಮಾರ್ ಬಿಗಿ ಪಟ್ಟು ಹಿಡಿದಿದ್ದರೆ, ಮಾಜಿ ಸಿಎಂ ಸಿದ್ದರಾಮಯ್ಯ ಕೂಡ ತಮಗೆ ಸಿಎಂ ಸ್ಥಾನ ಬೇಕು ಎಂದು ಹಠ ಸಾಧಿಸಿದ್ದಾರೆ.



ಅಧಿಕಾರ ಹಂಚಿಕೆ ನಿಟ್ಟಿನಲ್ಲಿ ಹೈಮಾಂಡ್ ಹೆಣೆದ ಸೂತ್ರಕ್ಕೆ ಡಿ.ಕೆ.ಶಿವಕುಮಾರ್ ಒಪ್ಪಿಲ್ಲ. ಕಾಂಗ್ರೆಸ್ ನಾಯಕ ರಾಹುಲ್ ಗಾಂಧಿ, ಸೋನಿಯಾ ಗಾಂಧಿ ಅವರ ಮನವೊಲಿಕೆಗೂ ಬಗ್ಗುತ್ತಿಲ್ಲ ಎಂದು ತಿಳಿದುಬಂದಿದೆ.

ಎರಡು ವರ್ಷ ಸಿದ್ದರಾಮಯ್ಯ ಮುಖ್ಯಮಂತ್ರಿಯಾಗಲಿ, ಬಳಿಕ ಮೂರು ವರ್ಷ ಸಿಎಂ ಹುದ್ದೆ ನೀಡುವುದಾಗಿ ಡಿ.ಕೆ.ಶಿವಕುಮಾರ್ ಗೆ ಮನವೊಲಿಕೆಗೆ ಯತ್ನಿಸಿದ್ದಾರೆ.

ಅಲ್ಲದೇ ಉಪಮುಖ್ಯಮಂತ್ರಿ ಹುದ್ದೆ, ಎರಡು ಸಚಿವ ಸ್ಥಾನಗಳ ಬಗ್ಗೆಯೂ ಮನವರಿಕೆ ಮಾಡುವ ಯತ್ನ ನಡೆದಿತ್ತು. ಆದರೆ ಹೈಕಮಾಂಡ್ ನ ಯಾವುದೇ ಷರತ್ತು, ಮನವೊಲಿಕೆಗೆ ಒಪ್ಪದ ಡಿ.ಕೆ.ಶಿವಕುಮಾರ್ ಮುಖ್ಯಮಂತ್ರಿ ಹುದ್ದೆಗಾಗಿ ಪಟ್ಟು ಹಿಡಿದಿದ್ದಾರೆ.

ಸಿಎಂ ಸ್ಥಾನ ನೀಡದಿದ್ದರೆ ಸರ್ಕಾರದಿಂದಲೇ ಹೊರಗಿರುವುದಾಗಿ ಹೇಳಿದ್ದಾರೆ ಎಂದು ತಿಳಿದುಬಂದಿದೆ.

ಒಟ್ಟಾರೆ ನೂತನ ಮುಖ್ಯಮಂತ್ರಿ ಆಯ್ಕೆ ಕಸರತ್ತು ಇನ್ನು ಮುಂದುವರೆದಿದ್ದು, ಸಧ್ಯಕ್ಕೆ ಹಗ್ಗಜಗ್ಗಾಟ ಮುಗಿಯುವ ಲಕ್ಷಣಗಳು ಗೋಚರಿಸುತ್ತಿಲ್ಲ.

## ಡಿಸಿಎಂ ಹುದ್ದೆ ಸೃಷ್ಟಿ ಮಾಡಿದರೆ ಕೋರ್ಟ್‌ಗೆ ಮೊರೆ: ಭೀಮಪ್ಪ ಗಡಾದ ಎಚ್ಚರಿಕೆ

ಮೂಡಲಗಿ: 'ಸಂವಿಧಾನದಲ್ಲಿ ಎಲ್ಲಿಯೂ ಉಲ್ಲೇಖವಿರದ ಉಪ ಮುಖ್ಯಮಂತ್ರಿಗಳ ಸ್ಥಾನ ಸೃಷ್ಟಿಸಲು ಯಾವುದೇ ಕಾರಣಕ್ಕೂ ಅವಕಾಶವಿಲ್ಲ. ಈ ಹಿಂದೆ ಅಧಿಕಾರದಲ್ಲಿದ್ದ ಕೆಲವು ಸರ್ಕಾರಗಳು ಆ ಸ್ಥಾನ ಸೃಷ್ಟಿಸಿರುವುದು ಸಂವಿಧಾನಕ್ಕೆ ವಿರುದ್ಧವಾಗಿದೆ.



ಈಗ ಅಧಿಕಾರಕ್ಕೇರಿದ ಕಾಂಗ್ರೆಸ್ ಸರ್ಕಾರ ಉಪಮುಖ್ಯಮಂತ್ರಿ ಸ್ಥಾನಗಳನ್ನು ಸೃಷ್ಟಿಸಿದರೆ, ಹೈಕೋರ್ಟ್‌ನಲ್ಲಿ ಸಾರ್ವಜನಿಕ ಹಿತಾಸಕ್ತಿ ಅರ್ಜಿ ಸಲ್ಲಿಸುತ್ತೇನೆ' ಎಂದು ಮಾಹಿತಿ ಹಕ್ಕು ಕಾರ್ಯಕರ್ತ ಭೀಮಪ್ಪ ಗಡಾದ ಎಚ್ಚರಿಕೆ ನೀಡಿದ್ದಾರೆ.

ಪ್ರಸಕ್ತ ವಿಧಾನಸಭೆ ಚುನಾವಣೆಯಲ್ಲಿ ಸ್ಪಷ್ಟ ಬಹುಮತ ಪಡೆದಿರುವ ಕಾಂಗ್ರೆಸ್ ಪಕ್ಷವು ಸರ್ಕಾರ ರಚಿಸಲು ಸಿದ್ಧತೆ ನಡೆಸಿದೆ.

ನಾಲ್ಕರಿಂದ ಐದು ಉಪಮುಖ್ಯಮಂತ್ರಿ ಸ್ಥಾನಗಳನ್ನು ಸೃಷ್ಟಿಸಲಿದೆ ಎಂದು ಚರ್ಚೆಯಾಗುತ್ತಿದೆ.ಹಾಗಾಗಿ ಉಪಮುಖ್ಯಮಂತ್ರಿ ಸ್ಥಾನ ಸೃಷ್ಟಿಸದಂತೆ ಸರ್ಕಾರದ ಮುಖ್ಯ ಕಾರ್ಯದರ್ಶಿಗೆ ಕೂಡ ಪತ್ರ ಬರೆದಿದ್ದೇನೆ' ಎಂದು ತಿಳಿಸಿದ್ದಾರೆ.

## ಲಿಂಗಾಯತರಿಗೆ ಮುಖ್ಯಮಂತ್ರಿಸ್ಥಾನ ನೀಡಲು ಶಾಮನೂರು ಶಿವಶಂಕರಪ್ಪ ಒತ್ತಾಯ



ಬೆಂಗಳೂರು: ರಾಜ್ಯದಲ್ಲಿ ಕಾಂಗ್ರೆಸ್ ಪಕ್ಷ ಸರಕಾರ ರಚನೆಗೆ ಮುಂದಾಗಿದ್ದು ಸಿದ್ದರಾಮಯ್ಯ ಮತ್ತು ಡಿ.ಕೆ.ಶಿವಕುಮಾರ್ ಮಧ್ಯದ ತೀವ್ರ ಪೈಪೋಟಿ ನಡುವೆ ಲಿಂಗಾಯತರಿಗೆ ಮುಖ್ಯಮಂತ್ರಿ ಸ್ಥಾನ ನೀಡಬೇಕು ಎಂಬ ಹೊಸ ಡಿಮ್ಯಾಂಡನ್ನು ಶಾಮನೂರು ಶಿವಶಂಕರಪ್ಪ ಇರಿಸಿದ್ದಾರೆ.

ಸಣ್ಣ ಸಮುದಾಯಗಳ 50 ಅಭ್ಯರ್ಥಿಗಳು ರಾಜ್ಯದ ನಾನಾ ಕ್ಷೇತ್ರಗಳಲ್ಲಿ ಗೆಲುವು ಸಾಧಿಸುವಲ್ಲಿ ಲಿಂಗಾಯತರು ಪ್ರಮುಖ ಪಾತ್ರ ವಹಿಸಿದ್ದಾರೆ. ಹೀಗಾಗಿ ಲಿಂಗಾಯತ ಸಮುದಾಯದವರಿಗೆ ಮುಖ್ಯಮಂತ್ರಿ ಸ್ಥಾನ ನೀಡಬೇಕು, ಜೊತೆಗೆ ಸಚಿವ ಸಂಪುಟದಲ್ಲಿ ಲಿಂಗಾಯತರಿಗೆ ಹೆಚ್ಚಿನ ಸ್ಥಾನಮಾನ ನೀಡಬೇಕು ಎಂದು ಒತ್ತಾಯಿಸಿ ಶಾಮನೂರು ಶಿವಶಂಕರಪ್ಪ ಅವರು ಎಐಸಿಸಿ ಅಧ್ಯಕ್ಷ ಮಲ್ಲಿಕಾರ್ಜುನ ಖರ್ಗೆ ಅವ–ರಿಗೆ ಪತ್ರ ಬರೆದಿದ್ದಾರೆ.

ದಶಕಗಳಿಂದ ಲಿಂಗಾಯತ ಸಮುದಾಯ ಹೆಚ್ಚಿನ ಪ್ರಮಾಣದಲ್ಲಿ ಕಾಂಗ್ರೆಸ್ ಗೆ ಬೆಂಬಲ ನೀಡಿದ್ದರಿಂದ 135 ಸೀಟುಗಳನ್ನು ಗೆಲ್ಲಲು ಸಾಧ್ಯವಾಗಿದೆ. ಮುಂಬರುವ ಲೋಕಸಭೆ ಚುನಾವಣೆಯಲ್ಲೂ ಕಾಂಗ್ರೆಸ್ ಗೆಲುವು ಸಾಧಿಸುವಂತಾಗಲು ಲಿಂಗಾಯತರಿಗೆ ಸಚಿವ ಸಂಪುಟದಲ್ಲಿ ಗರಿಷ್ಠ ಪ್ರಾತಿನಿಧ್ಯ ನೀಡಬೇಕು ಎಂದು ಅವರು ಒತ್ತಾಯಿಸಿದ್ದಾರೆ.

## ಡಿಕೆ ಶಿವಕುಮಾರ್ ಗೆ ಸುಪ್ರೀಂಕೋರ್ಟ್ ಬಿಗ್ ರಿಲೀಫ್



ನವದೆಹಲಿ: ಸಿಎಂ ಹುದ್ದೆಗೆ ಪೈಪೋಟಿ ನಡೆಸುತ್ತಿರುವ ಡಿಕೆ ಶಿವಕುಮಾರ್ ಗೆ ಸುಪ್ರೀಂಕೋರ್ಟ್ ಬಿಗ್ ರಿಲೀಫ್ ನೀಡಿದೆ. ಡಿಕೆ ಶಿವಕುಮಾರ್ ವಿರುದ್ಧದ ಸಿಬಿಐ ತನಿಖೆಗೆ ಹೈಕೋರ್ಟ್ ತಡೆಯಾಜ್ಞೆ ತೆರವು ಕೋರಿ ಸಿಬಿಐ ಸಲ್ಲಿಸಿದ್ದ ಮೇಲ್ಮನವಿ ಅರ್ಜಿಯನ್ನು ಸುಪ್ರೀಂಕೋರ್ಟ್ ವಿಚಾರಣೆ ನಡೆಸಿ ವಿಚಾರಣೆಯನ್ನು ಮುಂದೂಡಿದೆ.

ತಡೆಯಾಜ್ಞೆ ತೆರವಿಗೆ ಹೈಕೋರ್ಟ್ ನಲ್ಲೇ ಅರ್ಜಿ ಸಲ್ಲಿಸಬಹುದು ಎಂದು ಹೇಳಿದ ಸುಪ್ರೀಂಕೋರ್ಟ್ ಮುಂದಿನ ವಿಚಾರಣೆಯನ್ನು ಜುಲೈ ತಿಂಗಳಿಗೆ ಮುಂದೂಡಿದೆ.

ಡಿಕೆ ಶಿವಕುಮಾರ್ ವಿರುದ್ಧ ಪ್ರಕರಣದ ಸಿಬಿಐ ತನಿಖೆಗೆ ಕರ್ನಾಟಕ ಹೈಕೋರ್ಟ್ ಮಧ್ಯಂತರ ತಡೆಯಾಜ್ಞೆ ನೀಡಿತ್ತು.

ಈ ತಡೆಯಾಜ್ಞೆ ತೆರವು ಮಾಡುವಂತೆ ಸಿಬಿಐ ಸುಪ್ರೀಂಕೋರ್ಟ್ ನಲ್ಲಿ ಮೇಲ್ಮನವಿ ಅರ್ಜಿ ಸಲ್ಲಿಸಿತ್ತು, ಸಿಬಿಐ ಸಲ್ಲಿಸಿದ್ದ ಮೇಲ್ಮನವಿ ಅರ್ಜಿಯನ್ನು ಸುಪ್ರೀಂಕೋರ್ಟ್ ವಿಚಾರಣೆ ನಡೆಸಿ ವಿಚಾರಣೆಯನ್ನು ಮುಂದೂಡಿದೆ.

ಕರ್ನಾಟಕದ ಸಿಎಂ ಸ್ಥಾನಕ್ಕೆ ಸಿದ್ದರಾಮಯ್ಯ, ಉಪಮುಖ್ಯಮಂತ್ರಿ ಸ್ಥಾನಕ್ಕೆ ಡಿ.ಕೆ. ಶಿವಕುಮಾರ್ ಅವರ ಹೆಸರು ಬಹುತೇಕ ಫಿಕ್ಸ್ ಆಗಿದ್ದು, ಕಾಂಗ್ರೆಸ್ ಹೈಕಮಾಂಡ್ ನಿಂದ ಅಧಿಕೃತ ಘೋಷಣೆಯೊಂದೇ ಬಾಕಿ ಇದೆ ಎನ್ನಲಾಗಿದೆ.

## ನಕಲಿ ಅಂಕಪಟ್ಟಿ: 51 ವಿದ್ಯಾರ್ಥಿಗಳಿಗೆ ಪ್ರವೇಶ ನಿರಾಕರಿಸಿದ ವಿಟಿಯು

ಬೆಳಗಾವಿ: ಇಲ್ಲಿನ ವಿಶ್ವೇಶ್ವರಯ್ಯ ತಾಂತ್ರಿಕ ವಿಶ್ವವಿದ್ಯಾಲಯವು (ವಿಟಿಯು) ನಕಲಿ ಅಂಕಪಟ್ಟಿಗಳ ಕಾರಣ ನೀಡಿ 51 ವಿದ್ಯಾರ್ಥಿಗಳಿಗೆ ಪ್ರವೇಶ ನಿರಾಕರಿಸಿದೆ.

ವಿಟಿಯು ಮೊದಲ ವರ್ಷದ ಎಂಜಿನಿಯರಿಂಗ್ ಕೋರ್ಸ್‌ಗೆ ಈ ವಿದ್ಯಾರ್ಥಿಗಳು ಅರ್ಜಿ ಹಾಕಿದ್ದರು. ಆದರೆ, 'ನ್ಯಾಷನಲ್ ಇನ್‌ಸ್ಟಿಟ್ಯೂಟ್ ಆಫ್ ಓಪನ್ ಸ್ಕೂಲಿಂಗ್ (ಎನ್‌ಐಒ–ಎಸ್) ನೀಡಿದ ಪ್ರಮಾಣಪತ್ರಗಳು ನಕಲಿ ಎಂದು ಸಾಬೀತಾದ ಕಾರಣ, ಪ್ರವೇಶ ಪಡೆಯಲು ಅವಕಾಶ ನೀಡಿಲ್ಲ' ಎಂದು ವಿಟಿಯು ಮೂಲಗಳು ಖಚಿತಪಡಿಸಿವೆ.

ಇದಕ್ಕೂ ಮುನ್ನ ತಾಂತ್ರಿಕ ಶಿಕ್ಷಣ ಇಲಾಖೆ ಈ ಎಲ್ಲ ಅಂಕಪಟ್ಟಿಗಳನ್ನೂ ಮಾನ್ಯ ಮಾಡಿದೆ. ಆದರೆ, ವಿಟಿಯು ಕಾಲೇಜುವಾರು ಅನುಮೋದನೆ ನೀಡುವಾಗ ಅಮಾನ್ಯ ಮಾಡಿದೆ.

ಈ ನಕಲಿ ಅಂಕಪಟ್ಟಿಗಳ ಹಿಂದೆ ದೊಡ್ಡ ಹಗರಣ ನಡೆದಿರುವ ಶಂಕೆ ಇದೆ. ಹಾಗಾಗಿ ಎಲ್ಲ ವಿದ್ಯಾರ್ಥಿಗಳ ಈವರೆಗಿನ ಪ್ರಮಾಣಪತ್ರಗಳು, ದಾಖಲೆಗಳ




ಬಗ್ಗೆಯೂ ಪರಿಶೀಲನೆ ಮಾಡುವುದು ಅಗತ್ಯ. ಈ ಬಗ್ಗೆ ರಾಜ್ಯ ಸರ್ಕಾರ ಮತ್ತು ಎನ್‌ಐಒಎಸ್‌ಗೂ ಪತ್ರ ಬರೆಯಲು ಉದ್ದೇಶಿಸಲಾಗಿದೆ' ಎಂದೂ ವಿಟಿಯು ಮೂಲಗಳು ಹೇಳಿವೆ.

ಎನ್‌ಐಒಎಸ್‌ನಿಂದ ಈ ವಿದ್ಯಾರ್ಥಿಗಳು ಪಡೆದ ಪಿಯು ದ್ವಿತೀಯ ವರ್ಷದ ತರಗತಿಯ ಅಂಕಗಳ ಕಾರ್ಡ್‌ಗಳಲ್ಲಿ ಮುದ್ರಿಸಲಾದ ಕ್ಯುಆರ್ ಕೋಡ್ ಅನ್ನು ಸ್ಕ್ಯಾನ್ ಮಾಡಲಾಯಿತು. ಅಂಕಪಟ್ಟಿಗಳು ನಕಲಿ ಎಂಬುದನ್ನು ವೆಬ್‌ಸೈಟ್ ದೃಢಪಡಿಸಿದೆ' ಎಂದು ತಿಳಿದು ಬಂದಿದೆ.

ಈ ವಿದ್ಯಾರ್ಥಿಗಳು ಮ್ಯಾನೇಜ್‌ಮೆಂಟ್ ಕೋಟಾದಡಿಯಲ್ಲಿ ಸೀಟುಗಳನ್ನು ಪಡೆದಿದ್ದಾರೆ. ಅವರಲ್ಲಿ ಹೆಚ್ಚಿನವರು ತುಮಕೂರು ಮತ್ತು ಚಿಕ್ಕಬಳ್ಳಾಪುರದವರು.

ಬೆಂಗಳೂರಿನ ಬಿಎಂಎಸ್ ಕಾಲೇಜ್ ಆಫ್ ಎಂಜಿನಿಯರಿಂಗ್, ದಯಾನಂದ ಸಾಗರ ಕಾಲೇಜ್ ಆಫ್ ಎಂಜಿನಿಯ–ರಿಂಗ್, ಸಿಟಿ ಎಂಜಿನಿಯರಿಂಗ್ ಕಾಲೇಜು, ಈಸ್ಟ್ ವೆಸ್ಟ್ ಇನ್‌ಸ್ಟಿಟ್ಯೂಟ್ ಆಫ್ ಟೆಕ್ನಾಲಜಿ, ಗೋಪಾಲನ್ ಕಾಲೇಜ್ ಆಫ್ ಎಂಜಿನಿಯರಿಂಗ್ ಮತ್ತು ಮ್ಯಾನೇಜ್‌ಮೆಂಟ್, ಕೆ–ಎಸ್ ಇನ್‌ಸ್ಟಿಟ್ಯೂಟ್ ಆಫ್ ಟೆಕ್ನಾಲಜಿ ಮತ್ತು ಎಎಂಸಿ ಇಂಜಿನಿಯರಿಂಗ್ ಕಾಲೇಜುಗಳಲ್ಲಿ ಈ ವಿದ್ಯಾರ್ಥಿಗಳು ಪ್ರವೇಶ ಪಡೆದಿದ್ದರು ಎಂದು ಗೊತ್ತಾಗಿದೆ.

## ಲಕ್ಷ್ಮಣ ಸವದಿಗೆ ಉಪಮುಖ್ಯಮಂತ್ರಿ ಹಾಗೂ ನೀರಾವರಿ ಮಂತ್ರಿ ಸ್ಥಾನ ನೀಡಬೇಕೆಂದು ಆಗ್ರಹ



ಕಾಗವಾಡ: ವಿಧಾನಸಭಾ ಚುನಾವಣೆಯಲ್ಲಿ ಉತ್ತರ ಕರ್ನಾಟಕದಲ್ಲಿ ಕಾಂಗ್ರೆಸ ಅಭ್ಯರ್ಥಿ ಹೆಚ್ಚು ಆಯ್ಕೆಯಾಗಲು ಮಾಜಿ ಉಪಮುಖ್ಯಮಂತ್ರಿ ಲಕ್ಷ್ಮಣ ಸವದಿ ಅವರ ಕಾರ್ಯ ಮಹತ್ವ ಆಗಿದ್ದು ಅವರಿಗೆ ರಾಜ್ಯದ ಉಪಮುಖ್ಯಮಂತ್ರಿ ಹಾಗೂ ನೀರಾವರಿ ಮಂತ್ರಿ ಸ್ಥಾನ ನೀಡಬೇಕೆಂದು ಗಡಿ ಭಾಗದ ಅಲ್ಪ ಸಂಖ್ಯಾತ ಘಟಕದ ಮುಖಂಡ ಹಾಗೂ ಅನಂತಪುರ ಬ್ಲಾಕ್ ಕಾಂಗ್ರೆಸ ಮುಖಂಡ ಆಸಿಪಕ್ ಘಟನಟ್ಟಿ ಆಗ್ರಹಿಸಿದ್ದಾರೆ.

ಮಲಾಬಾದ ಗ್ರಾಮದ ಪಕ್ಷ ಕಾರ್ಯಾಲಯದಲ್ಲಿ ಬುಧವಾರ ಸುದ್ದಿಗಾರರೊಂದಿಗೆ ಮಾತನಾಡಿ ಅವರು ಲಕ್ಷ್ಮಣ ಸವದಿಯವರು ಕಾಂಗ್ರೆಸ್ ಪಕ್ಷಕ್ಕೆ ಬಂದ ನಂತರ ಆನೆ ಬಲ ಬಂದಿದ್ದು.

ವಿಧಾನಸಭಾ ಚುನಾವಣೆಯಲ್ಲಿ ಹೆಚ್ಚು ಅಭ್ಯರ್ಥಿ ಆಯ್ಕೆ, ಆಗಲು ಹೆಚ್ಚು ಶ್ರಮ ಪಟ್ಟಿದ್ದಾರೆ. ಅವರಿಗೆ ನೀರಾವರಿ ಖಾತೆ ನೀಡಿ ನೆನಗುದಿಗೆ ಬಿದ್ದಿರುವ ನೀರಾವರಿ ಯೋಜನೆ ಪೂರ್ಣಗೊಂಡು ನೀರು ಹರಿಸಲು ಸಾದ್ಯವಿದೆ, ಅವರಿಗೆ ಕ್ಯಾಬಿನೆಟ ದರ್ಜೆಯ ಒಳ್ಳೆಯ ಸ್ಥಾನ ನೀಡಬೇಕು.

ಅವರಿಂದ ಜಿಲ್ಲೆಯಲ್ಲಿ ಹಾಗೂ ಉತ್ತರ ಕರ್ನಾಟಕದಲ್ಲಿ ಪಕ್ಷ ಬಲಿಷ್ಠ ಆಗುತ್ತದೆ ಎಂದರು. ಈ ವೇಳೆ ರಾಜು ಕುಳ್ಳೊಳ್ಳಿ ಶಿವಾನಂದ ಕುಳ್ಳೊಳ್ಳಿ ಕಾಮಾಣ್ಣಾ ಹೊನಖಂಡೆ ಇತರರು ಇದ್ದರು.

## ನಾವು ಕಾಂಗ್ರೆಸ್ ತೊರೆಯಲು ಸಿದ್ದರಾಮಯ್ಯ ಕಾರಣ: ಡಾ. ಕೆ. ಸುಧಾಕರ



ಬೆಂಗಳೂರು: 2019ರಲ್ಲಿ ತಾವು ಕಾಂಗ್ರೆಸ್ ತೊರೆಯಲು ಸಿದ್ದರಾಮಯ್ಯ ಕಾರಣ ಎಂದು ರಾಜ್ಯದ ಮಾಜಿ ಆರೋಗ್ಯ ಸಚಿವ ಡಾ. ಕೆ. ಸುಧಾಕರ ಹೇಳಿದ್ದಾರೆ.

ನಮ್ಮ ಕ್ಷೇತ್ರಗಳಲ್ಲಿ ನಮ್ಮನ್ನು ನಂಬಿದ ಕಾರ್ಯಕರ್ತರನ್ನ, ಮುಖಂಡರನ್ನು ಉಳಿಸಿಕೊಳ್ಳಲು ದೊಡ್ಡ ರಿಸ್ಕ್ ತೆಗೆದುಕೊಂಡು ರಾಜೀನಾಮೆ ಕೊಟ್ಟು ಮತ್ತೊಮ್ಮೆ ಜನರಿಂದ ಆರಿಸಿ ಬಂದು ಮಂತ್ರಿಗಳಾದೆವು. ನಮ್ಮ ನಡೆಯಲ್ಲಿ ಮಾನ್ಯ ಸಿದ್ದರಾಮಯ್ಯನವರ ಪ್ರೇರಣೆ, ಪರೋಕ್ಷ ಅಥವಾ ಅಪರೋಕ್ಷ ಪಾತ್ರ ಇಲ್ಲವೆಂದು ಸಿದ್ದರಾಮಯ್ಯನವರು ನಿರಾಕರಿಸಲು ಸಾಧ್ಯವೇ? ಎಂದು ಸುಧಾಕರ ಟ್ವೀಟ್ ನಲ್ಲಿ ಬರೆದುಕೊಂಡಿದ್ದಾರೆ.

2018ರಲ್ಲಿ ಅಂದಿನ ಜೆಡಿಎಸ್–ಕಾಂಗ್ರೆಸ್ ಸಮ್ಮಿಶ್ರ ಸರ್ಕಾರದಲ್ಲಿ ನಮಗಾಗುತ್ತಿದ್ದ ಅನ್ಯಾಯದ ಬಗ್ಗೆ ಹೇಳಿಕೊಳ್ಳಲು ಶಾಸಕರು ಸಮನ್ವಯ ಸಮಿತಿ ಅಧ್ಯಕ್ಷರಾಗಿದ್ದ ಸಿದ್ದರಾಮಯ್ಯನವರ ಬಳಿ ಹೋದಾಗಲೆಲ್ಲ ಈ ಸರ್ಕಾರದಲ್ಲಿ ನನ್ನದೇ ಏನು ನಡೆಯುತ್ತಿಲ್ಲ, ನನ್ನ ಕ್ಷೇತ್ರದ, ನನ್ನ ಜಿಲ್ಲೆಯ ಕೆಲಸಗಳೇ ಆಗುತ್ತಿಲ್ಲ ಎಂದು ಹೇಳುತ್ತಿದ್ದರು." ಎಂದು ಸುಧಾಕರ ಹೇಳಿಕೊಂಡಿದ್ದಾರೆ. 2019ರ ಲೋಕಸಭೆ ಚುನಾವಣೆವರೆಗೂ ಸಹಿಸಿಕೊಳ್ಳಿ, ಲೋಕಸಭೆ ಚುನಾವಣೆ ಮುಗಿದ ನಂತರ ಯಾವುದೇ ಕಾರಣಕ್ಕೂ ಒಂದು ದಿನವೂ ಕುಮಾರಸ್ವಾಮಿ ನೇತೃತ್ವದ ಈ ಸಮ್ಮಿಶ್ರ ಸರ್ಕಾರ ಇರಲು ಬಿಡುವುದಿಲ್ಲ ಎಂದು ಶಾಸಕರಿಗೆ ಸಿದ್ದರಾಮಯ್ಯ ಹೇಳುತ್ತಿದ್ದರು ಎಂದು ಡಾ. ಸುಧಾಕರ್ ಅಂದಿನ ರಾಜಕೀಯದ ಒಳಮರ್ಮ ಹೊರಗೆಡವಿದ್ದಾರೆ.


## ದಿ ಕೇರಳ ಸ್ಟೋರಿ ಉಚಿತ ಶೋಗೆ ಶಾಸಕ ಯತ್ನಾಳ್ ವ್ಯವಸ್ಥೆ

ವಿಜಯಪುರ: ವಿಧಾನಸಭೆ ಚುನಾವಣೆ ಬಿಟ್ಟರೆ ತಿಂಗಳಿಂದ ಸದ್ದು ಮಾಡುತ್ತಿರುವ ವಿಷಯ ದಿ ಕೇರಳ ಸ್ಟೋರಿ ಸಿನಿಮಾ. ಅದಾ ಶರ್ಮಾ ನಟನೆಯ ಚಿತ್ರ ಭಾರತದಲ್ಲಿ ಮಾತ್ರವಲ್ಲ, ವಿದೇಶದಲ್ಲೂ ತನ್ನ ಹವಾ ಮುಂದುವರಿಸುತ್ತಿದೆ.

ಕೇರಳ ಸ್ಟೋರಿ ನೋಡಲು ವಿಜಯಪುರ ನಗರ ಶಾಸಕ ಬಸನಗೌಡ ಪಾಟೀಲ್ ಯತ್ನಾಳ್ ಉಚಿತ ವ್ಯವಸ್ಥೆ ಮಾಡಿದ್ದಾರೆ.

ವಿಜಯಪುರ ನಗರದ ಅಪ್ಸರಾ ಚಿತ್ರಮಂದಿರದಲ್ಲಿ 12 ಗಂಟೆಯ ಶೋವನ್ನು ಪ್ರೇಕ್ಷಕರು ಉಚಿತವಾಗಿ ನೋಡಬಹುದಾಗಿದೆ. ಮಂಗಳವಾರ, ಬುಧವಾರ ಹಾಗೂ ಶುಕ್ರವಾರ 3 ದಿನಗಳ ಕಾಲ ಉಚಿತವಾಗಿ ಪ್ರೇಕ್ಷಕರು ವೀಕ್ಷಿಸಲು ಅನುವು ಮಾಡಿ ಕೊಡಲಾಗಿದೆ.


ಇದರಿಂದ ಪ್ರೇಕ್ಷಕರು ಖುಷ್ ಆಗಿದ್ದಾರೆ. ಸೋಮವಾರ ಉಡುಪಿಯ ಕೊಲ್ಲೂರು ಮೂಕಾಂಬಿಕಾ ಕ್ಷೇತ್ರದಲ್ಲಿ ಕೇರಳ ಸ್ಟೋರಿ ಚಿತ್ರದ ಪ್ರಚಾರ ಕಾರ್ಯ ಭಿನ್ನವಾಗಿ ನಡೆದಿದೆ. ಕೊಲ್ಲೂರು ಮೂಕಾಂಬಿಕಾ ದೇಗುಲಕ್ಕೆ ಕೇರಳದ ಭಕ್ತರೇ ಹೆಚ್ಚು.




ನಿಮ್ಮ ಮುಂದಿನ ಜನಾಂಗ ಕೊಲ್ಲೂರು ಮೂಕಾಂಬಿಕೆ ದರ್ಶನಕ್ಕೆ ಬರಬೇಕೆಂದರೆ ಕೇರಳ ಸ್ಟೋರಿ ಚಿತ್ರ ನೋಡಿ ಎಂದು ಬರೆಯಲಾದ ಬೋರ್ಡ್ ಪ್ರವಾಸಿಗರ ಗಮನ ಸೆಳೆದಿದೆ.

ಪಶ್ಚಿಮ ಬಂಗಾಳ ಸೇರಿದಂತೆ ಹಲವು ರಾಜ್ಯಗಳಲ್ಲಿ ಚಿತ್ರಕ್ಕೆ ಅಡೆತಡೆ ಮಾಡಿದ್ದರೂ, ಇತರ ರಾಜ್ಯಗಳು ದಿ ಕೇರಳ ಸ್ಟೋರಿ ಕೈ ಹಿಡಿದಿವೆ. ಈಗಾಗಲೇ ನೂರಾರು ಕೋಟಿ ಗಳಿಕೆ ಮಾಡಿ, ಹಲವು ಕಡೆ ಇನ್ನೂ ತುಂಬಿದ ಪ್ರದರ್ಶನ ಕಾಣುತ್ತಿದೆ.

## ಕಾಂಗ್ರೆಸ್ ಬಿಡಲು ಸಿದ್ದರಾಮಯ್ಯ ಪ್ರೇರಣೆ



ಬೆಂಗಳೂರು: ಜೆಡಿಎಸ್–ಕಾಂಗ್ರೆಸ್ ಸಮ್ಮಿಶ್ರ ಸರ್ಕಾರ ಪತನದ ನಮ್ಮ ನಡೆಯಲ್ಲಿ ಸಿದ್ದರಾಮಯ್ಯ ಪ್ರೇರಣೆ ಇಲ್ಲವೆಂದು ಅವರು ನಿರಾಕರಿಸುವರೇ? ಎಂದು ಮಾಜಿ ಸಚಿವ ಸುಧಾಕರ್ ಹೇಳಿಕೆಯನ್ನು ಮಾಜಿ ಸಚಿವ ಎಸ್.ಟಿ ಸೋಮಶೇಖರ್ ಸಮರ್ಥಿಸಿಕೊಂಡಿದ್ದಾರೆ.

ಸಿದ್ದರಾಮಯ್ಯನವರು ಸಮ್ಮಿಶ್ರ ಸರ್ಕಾರದ ದಿನಗಳಲ್ಲಿ ಶಾಸಕರಲ್ಲಿ ತೋಡಿಕೊಳ್ಳುತ್ತಿದ್ದ ಅಸಹಾಯಕತೆ, ಕೊಡುತ್ತಿದ್ದ ಆಶ್ವಾಸನೆ ಇದೇ ಎಂಬುದು ಸತ್ಯ. ಸಿದ್ದರಾಮಯ್ಯನವರ ಅಸಹಾಯಕತೆ ಸಹ ನಾವು ಪಕ್ಷ ಬಿಡಲು ಒಂದು ಪ್ರೇರಣೆಯಾಯಿತು ಎಂದರೆ ಅದು ತಪ್ಪಾಗಲಾರದು ಎಂದು ಸೋಮಶೇಖರ್ ಬರೆದುಕೊಂಡಿದ್ದಾರೆ.

## ಸಿದ್ದರಾಮಯ್ಯರಿಗೆ ಆಡಳಿತದ ಅನುಭವ ಹೆಚ್ಚು: ಸತೀಶ್ ಜಾರಕಿಹೊಳಿ

ಬೆಂಗಳೂರು: ಕರ್ನಾಟಕ ಸಿಎಂ ಸ್ಥಾನಕ್ಕೆ ಸಿದ್ದರಾಮಯ್ಯ ಅವರ ಹೆಸರು ಬಹುತೇಕ ಅಂತಿಮವಾಗುತ್ತಿದ್ದಂತೆಯೇ, ಅವರಿಗೆ ಸತೀಶ್ ಜಾರಕಿಹೊಳಿ ಪರೋಕ್ಷ ಬೆಂಬಲ ಸೂಚಿಸಿದ್ದಾರೆ.

ಈ ಬಗ್ಗೆ ಬೆಂಗಳೂರಿನಲ್ಲಿ ಪ್ರತಿಕ್ರಿಯೆ ನೀಡಿರುವ ಸತೀಶ್ ಜಾರಕಿಹೊಳಿ, ಸಿದ್ದರಾಮಯ್ಯ ಅವರಿಗೆ ಆಡಳಿತ ಅನುಭವ ಇದೆ. ಕಳೆದ ಬಾರಿಯಂತೆ ಈ ಬಾರಿಯೂ ಸರಾಗವಾಗಿ ಆಡಳಿತ ನಡೆಯಲಿದೆ. ಅವರ ಕಾರ್ಯಕ್ರಮ ಕಾರ್ಯವೈಖ–ರಿಯೇ ಮತ್ತೆ ರಿಪೀಟ್ ಆಗಲಿದೆ ಎಂದರು.

ಅಂತೆಯೇ ಜನರಿಗೂ ಪಕ್ಷಕ್ಕೆ ಅನುಕೂಲ ಆಗುವ ವಿಶ್ವಾಸವಿದೆ. ಸೀಕ್ರೆಟ್ ಬ್ಯಾಲೆಟ್ ಮಾನದಂಡದ ಮೇಲೆ ಸಿದ್ದರಾಮಯ್ಯ ಆಯ್ಕೆ ನಡೆದಿದೆ. ಡಿಕೆ ಶಿವಕುಮಾರ್



ಡಿಸಿಎಂ ಆಗಬಹುದೂ ಅಥವಾ ಇಲ್ಲದೇ ಇರಬಹುದು. ನಾವೆಲ್ಲ ಅಧಿಕಾರ ಇರಲಿ ಇಲ್ಲದೇ ಇರಲಿ ಪಕ್ಷಕ್ಕಾಗಿ ದುಡಿಯುತ್ತೇವೆ. ಅಂತೆಯೇ ಲೋಕಸಭೆ ಚುನಾವಣೆ ಕೂಡ ಮಾಡ್ತೇವೆ ಎಂದರು.

**ಡಿಸಿಎಂ ಹುದ್ದೆಗೆ ಸತೀಶ್ ಪಟ್ಟು**

ಇದೇ ವೇಳೆ ನಾನೂ ಕೂಡ ಡಿಸಿಎಂ ಸ್ಥಾನಕ್ಕಾಗಿ ಒತ್ತಾಯಿಸುತ್ತೇನೆ ಎಂದ ಸತೀಶ್ ಜಾರಕಿಹೊಳಿ, ಬೇರೆ ಸಮುದಾಯಕ್ಕೆ ಡಿಸಿಎಂ ಹುದ್ದೆ ಕೊಟ್ಟರೆ ನಾನು ಕೂಡ ಪಕ್ಷವನ್ನು ಕೇಳುತ್ತೇನೆ. ವೈಯಕ್ತಿಕವಾಗಿ ಡಿಸಿಎಂ ಬೇಡ, ಸಚಿವನಾಗಿಯೇ ಇರ್ತೀನಿ. ಡಿಕೆ ಶಿವಕುಮಾರ್ ಕೆಲಸ ಕೊಡುಗೆ ಬಹಳ ಇದೆ. ಅವರ ಮಧ್ಯೆ ಸಮಾಧಾನಕರ ರೀತಿಯಲ್ಲೇ ಸಂಧಾನ ಆಗಿದೆ. ಒಬ್ಬರೇ ಸಿಎಂ–ಡಿಸಿಎಂ ಇದ್ದರೆ ಒಳ್ಳೆಯದು ಎಂದು ಸತೀಶ್ ಹೇಳಿದರು.

ಇನ್ನು ಮೂಲಗಳ ಪ್ರಕಾರ ನಾಳೆ ಮಧ್ಯಾಹ್ನ 3.30ಕ್ಕೆ ಬೆಂಗಳೂ–ರಿನ ಕಂಠೀರವ ಕ್ರೀಡಾಂಗಣದಲ್ಲಿ ಸಿಎಂ ಆಗಿ ಸಿದ್ದರಾಮಯ್ಯ ಪ್ರಮಾಣವಚನ ಸ್ವೀಕರಿಸಲಿದ್ದಾರೆ ಎಂದು ಹೇಳಲಾಗಿದೆ. ಈಗಾಗಲೇ ಇದಕ್ಕಾಗಿ ಭರದ ಸಿದ್ಧತೆಗಳು ನಡೆಯುತ್ತಿವೆ. ಅಧಿಕಾ–ರಿಗಳು, ಪೊಲೀಸರು ಕಂಠೀರವ ಕ್ರೀಡಾಂಗಣಕ್ಕೆ ಭೇಟಿ ನೀಡಿ ಪರಿಶೀಲನೆ ನಡೆಸುತ್ತಿದ್ದಾರೆ.

## ಮುಖ್ಯಮಂತ್ರಿ ಪ್ರಮಾಣ ವಚನಕ್ಕೆ ಭರದ ಸಿದ್ಧತೆ

ಬೆಂಗಳೂರು: ಸದ್ಯ ಸಿದ್ದರಾಮಯ್ಯ ಮತ್ತು ಡಿ.ಕೆ. ಶಿವಕುಮಾರ್ ನಡುವಿನ ಕುರ್ಚಿ ಕದನ ಬಹುತೇಕ ಅಂತ್ಯವಾಗಿದ್ದು, ಮೂಲಗಳ ಪ್ರಕಾರ ಸಿದ್ದರಾಮಯ್ಯ ಅವರಿಗೆ ಮುಖ್ಯಮಂತ್ರಿ ಸ್ಥಾನ, ಡಿ.ಕೆ. ಶಿವಕುಮಾರ್ ಅವರಿಗೆ ಪ್ರಬಲವಾದ ಎರಡು ಖಾತೆಗಳೊಂದಿಗೆ ಡಿಸಿಎಂ ಸ್ಥಾನ ನೀಡಲು ಎಐಸಿಸಿ ಮುಂದಾಗಿದೆ. ಅಷ್ಟೇ ಅಲ್ಲದೇ ಕೆಪಿಸಿಸಿ ಅಧ್ಯಕ್ಷರಾಗಿಯೇ ಡಿಕೆ ಶಿವಕುಮಾರ್ ಅವರೇ ಮುಂದುವರಿಯುವ ಸಾಧ್ಯತೆಯಿದೆ.

ಅಧಿಕೃತವಾಗಿ ಸಿಎಂ ಯಾರು ಎನ್ನುವುದೇ ಘೋಷಣೆ ಮಾಡಿಲ್ಲ. ಆಗಲೇ ಮುಖ್ಯಮಂತ್ರಿ ಪ್ರಮಾಣವಚನಕ್ಕೆ ತಯಾ–ರಿಗಳು ಆರಂಭವಾಗಿವೆ. ಹಲವು ವರ್ಷಗಳ ಬಳಿಕ ಕಾಂಗ್ರೆಸ್ಗೆ ಇಷ್ಟೊಂದು ದೊಡ್ಡ ಮಟ್ಟದಲ್ಲಿ ಸೀಟು ಬಂದಿವೆ. ಹೀಗಾಗಿ ಸಿಎಂ ಪ್ರಮಾಣವಚನ ಸಮಾರಂಭವನ್ನು ಅದ್ಧೂರಿಯಾಗಿ ಮಾಡಲು ಕಾಂಗ್ರೆಸ್ ಪ್ಲ್ಯಾನ್ ಮಾಡಿದೆ. ಹೀಗಾಗಿ ವಿಧಾನಸೌಧ



ಮುಂಭಾಗ ಅಥವಾ ಕಂಠೀರವ ಸ್ಟೇಡಿಯಂನಲ್ಲಿ ಕಾರ್ಯಕ್ರಮ ಮಾಡಲು ಚಿಂತನೆಗಳು ನಡೆದಿವೆ.

ಇಂದು(ಮೇ 18) ಮಧ್ಯಾಹ್ನ 3.30ಕ್ಕೆ ಪ್ರಮಾಣ ವಚನ ಕಾರ್ಯಕ್ರಮಕ್ಕೆ ತಯಾರಿ ನಡೆದಿದೆ. ಒಂದು ವೇಳೆ ನಾಳೆ ತಪ್ಪಿದರೆ ಶನಿವಾರ ಅಂದರೆ ಮೇ 20ರಂದು ಕಾರ್ಯಕ್ರಮ ನಿಗದಿ ಮಾಡುವ ಬಗ್ಗೆ ಕಾಂಗ್ರೆಸ್ನಲ್ಲಿ ಚರ್ಚೆ ನಡೆದಿದೆ. ಶುಕ್ರವಾರ(ಮೇ 19) ಅಮಾವಾಸ್ಯೆ ಇರುವ ಹಿನ್ನಲೆ ಪ್ರಮಾಣ ವಚನ ಬೇಡ ಎಂಬ ಬಗ್ಗೆ ಕೆಲವರ ಸಲಹೆ ನೀಡಿದ್ದಾರೆ. ಹೀಗಾಗಿ ಮೇ 18 ಇಲ್ಲ ಮೇ 20ರಂದು ಪ್ರಮಾಣ ವಚನ ಸ್ವೀಕಾರವಾಗಲಿದೆ ಎಂದು ಹೇಳಿದ್ದಾರೆ. ಹೀಗಾಗಿ ಬಹುತೇಕ ನಾಳೆಯೇ ಪ್ರಮಾಣವಚನ ಕಾರ್ಯಕ್ರಮ ನಡೆಯುಸ ಸಾಧ್ಯತೆಗಳು ಹೆಚ್ಚಿವೆ.

ನಾಳೆಯೇ ಸಿಎಂ ಆಗಿ ಸಿದ್ದರಾಮಯ್ಯ ಪ್ರಮಾಣವಚನ ಸಾಧ್ಯತೆ:

ಇದೀಗ ಬಂದ ಸುದ್ದಿ ಪ್ರಕಾರ ಸಿದ್ದರಾಮಯ್ಯ ಅವರಿಗೆ ಮುಖ್ಯಮಂತ್ರಿ ಸ್ಥಾನ ಬಹುತೇಕ ಪಕ್ಕಾ ಎನ್ನಲಾಗುತ್ತಿದ್ದು, ರಾಹುಲ್ ಗಾಂಧಿ ಸಭೆ ಬಳಿಕ ಅಧಿಕೃತ ಘೋಷಣೆ ಮಾಡುವ ಸಾಧ್ಯತೆ ಇದೆ. ಒಮದು ವೇಳೆ ಅದು ಹಾಗೇ ಆದರೆ ಸಿದ್ದರಾಮಯ್ಯ ಅವರು ಎರಡನೇ ಬಾರಿ ಮುಖ್ಯಮಂತ್ರಿಯಾಗಿ ನಾಳೆ(ಮೇ 18) ಮಧ್ಯಾಹ್ನ 3:30ಕ್ಕೆ ಪ್ರಮಾಣವಚನ ಸ್ವೀಕಾರ ಮಾಡಲಿದ್ದಾರೆ ಎನ್ನಲಾಗಿದೆ.

ಆದರೆ ವಿಧಾನಸೌಧ ಬಳಿ ಇನ್ನು ಅಧಿಕೃತವಾಗಿ ಸಿದ್ದರಾಮಯ್ಯ ಅವರನ್ನು ಸಿಎಂ ಎಂದು ಘೋಷಣೆಯಾದರೆ ಅವರ ನಿವಾಸದ ಬಳಿ ಅಭಿಮಾನಿಗಳು ನಬರುವ ಮುನ್ಸೂಚನೆ ಹಿನ್ನಲೆ ಪೊಲೀಸ್ ಭದ್ರತೆ ಒದಗಿಸಲಾಗಿದೆ. ಶಿವಾನಂದ ಸರ್ಕಲ್ ಸಮೀಪ ಇರುವ ಸಿದ್ದರಾಮಯ್ಯನವರ ಸರ್ಕಾರಿ ನಿವಾಸದ ಬಳಿ ಒಂದು ಕೆ–ಎಸ್‌ಆರ್ ಪಿ ವ್ಯಾನ್, 70ಕ್ಕೂ ಹೆಚ್ಚು ಪೊಲೀಸರನ್ನು ನಿಯೋಜನೆ ಮಾಡಲಾಗಿದೆ.

ಡಿಕೆ ಶಿವಕುಮಾರ್ಗೆ ಉಪಮುಖ್ಯಮಂತ್ರಿ ಪಟ್ಟ? ಇನ್ನು ಸಿಎಂ ಸ್ಥಾನಕ್ಕೆ ಭಾರೀ ಪೈಪೋಟಿ ನಡೆಸಿದ ಡಿಕೆ ಶಿವಕುಮಾರ್ ಅವರಿಗೆ ಉಪ ಮುಖ್ಯಮಂತ್ರಿ ಸ್ಥಾನ ನೀಡುವ ಸಾಧ್ಯತೆ ಇದೆ. ಜೊತೆ ಎರಡು ಪ್ರಮುಖ ಖಾತೆಗಳನ್ನು ನೀಡಲಾಗುತ್ತದೆ. ಇನ್ನು ಕೆಪಿಸಿಸಿ ಅಧ್ಯಕ್ಷರಾಗಿಯೂ ಮುಂದುವರಿಯಲಿದ್ದಾರೆ ಎನ್ನಲಾಗಿದ್ದು, ನಾಳೆಯೇ ಸಿದ್ದರಾಮಯ್ಯನವರ ಜೊತೆಗೆ ಉಪಮುಖ್ಯಮಂತ್ರಿಯಾಗಿ ಡಿಕೆ ಶಿವಕುಮಾರ್ ಪ್ರಮಾಣವಚನ ಸ್ವೀಕ–ರಿಸಲಿದ್ದಾರೆ. ಬಳಿಕ ಸಚಿವ ಸಂಪುಟ ರಚನೆ ಮಾಡಲಾಗ್ತಿತೆ ಎನ್ನುವ ಮಾಹಿತಿ ಲಭ್ಯವಾಗಿದೆ.

# ಸಾರ್ವಜನಿಕರ ಮೂಲಭೂತ ಸಮಸ್ಯೆಗಳಿಗೆ ಶೀಘ್ರವೇ ಸ್ಪಂದಿಸಿ: ಅಧಿಕಾರಿಗಳಿಗೆ ಬಾಲಚಂದ್ರ ಜಾರಕಿಹೊಳಿ ಸೂಚನೆ

ಮೂಡಲಗಿ: ಸಾರ್ವಜನಿಕರ ಮೂಲಭೂತ ಸಮಸ್ಯೆಗಳಿಗೆ ತತ್ಕ್ಷಣವೇ ಸ್ಪಂದಿಸಬೇಕು, ಸಾರ್ವಜನಿಕರಿಗೆ ಶೌಚಾಲಯ, ಒಳಚರಂಡಿ ಹಾಗೂ ಕುಡಿಯುವ ನೀರು ಸೇರಿದಂತೆ ಅಗತ್ಯವಿರುವ ಎಲ್ಲ ಮೂಲ ಸೌಕರ್ಯಗಳನ್ನು ಒದಗಿಸುವಂತೆ ಅರಭಾವಿ ಶಾಸಕ ಹಾಗೂ ಕೆ–ಎಮ್‌ಎಫ್ ಅಧ್ಯಕ್ಷ ಬಾಲಚಂದ್ರ ಜಾರಕಿಹೊಳಿ ಅವರು ಅಧಿಕಾರಿಗಳಿಗೆ ಸೂಚನೆ ನೀಡಿದರು.

ಬುಧವಾರದಂದು ಇಲ್ಲಿನ ತಹಶೀಲದಾರರ ಕಛೇರಿಯಲ್ಲಿ ಜರುಗಿದ ಗೋಕಾಕ–ಮೂಡಲಗಿ ತಾಲೂಕು ಮಟ್ಟದ ಅಧಿಕಾರಿಗಳ ಸಭೆಯ ಅಧ್ಯಕ್ಷತೆ ವಹಿಸಿ ಮಾತನಾಡಿದ ಅವರು, ಅರಭಾವಿ ಕ್ಷೇತ್ರದ ಪ್ರತಿ ಗ್ರಾ.ಪಂ ವ್ಯಾಪ್ತಿಯ ಹಳ್ಳಿಗಳಿಗೆ ಭೇಟಿ ನೀಡಿ ಅಲ್ಲಿರುವ ಸಮಸ್ಯೆಗಳ ಪಟ್ಟಿಯನ್ನು ಜೂನ್ ತಿಂಗಳಲ್ಲಿ ಸಲ್ಲಿಸುವಂತೆ ಅಧಿಕಾರಿಗಳಿಗೆ ಖಡಕ್ಕಾಗಿ ಸೂಚಿಸಿದರು.

ಮೂಡಲಗಿ ತಾಲೂಕಿನ ಬಹುತೇಕ ಗ್ರಾಮಗಳಲ್ಲಿ ಇನ್ನೂ ಶೌಚಾಲಯಗಳ ಸಮಸ್ಯೆಗಳು ಮುಂದುವರಿದಿವೆ. ಇದರಿಂದ ಮಹಿಳೆಯರಿಗೆ ತುಂಬಾ ತೊಂದರೆಯಾಗುತ್ತಿದೆ. ಮಹಿಳೆಯರ ಗೌರವ ಕಾಪಾಡುವ ಜವಾಬ್ದಾರಿಯನ್ನು ಅಧಿಕಾರಿಗಳು ಅರಿಯಬೇಕು. ಜೊತೆಗೆ ಒಳಚರಂಡಿಗಳ ವ್ಯವಸ್ಥೆಗಳು ಸಹ ಸಮರ್ಪಕವಾಗಿಲ್ಲ. ಸ್ಥಳೀಯ ಅಧಿಕಾರಿಗಳು ಮಾಡುತ್ತಿರುವ ತಪ್ಪಿನಿಂದ ಕೆಲವರು ನಮ್ಮನ್ನೇ ದೂರುತ್ತಿದ್ದಾರೆ. ಕೇವಲ ಕಛೇರಿಯಲ್ಲಿ ಕುಳಿತರೇ ಸಾಲದು. ಎಲ್ಲೆಲ್ಲಿ ಸಾರ್ವಜನಿಕರ ಸಮಸ್ಯೆಗಳು ಇವೆಯೋ ಅಲ್ಲಿ ಅಧಿಕಾರಿಗಳು ಖುದ್ದಾಗಿ ಭೇಟಿ ನೀಡಿ ಜನಸ್ಪಂದನ ಮಾಡುವ ಕೆಲಸ ನಡೆಯಬೇಕು. ಕರ್ತವ್ಯದಲ್ಲಿ ಬೇಜವಾಬ್ದಾರಿ ತೋರಿದರೇ ಅಂತವರ ವಿರುದ್ಧ ನಿರ್ದಾಕ್ಷೀಣ ಕ್ರಮವನ್ನು ಕೈಗೊಳ್ಳುವುದಾಗಿ ಅವರು ಎಚ್ಚರಿಕೆಯನ್ನು ನೀಡಿದರು.



ಗ್ರಾಮ ಪಂಚಾಯತಿ ಅಧಿಕಾರಿಗಳು ಸಾರ್ವಜನಿಕ ಸಮಸ್ಯೆಗಳಿಗೆ ಸ್ಪಂದಿಸುತ್ತಿಲ್ಲ. ಮನೆಯ ಉತಾರಗಳನ್ನು ಸಹ ಸಾರ್ವಜನಿಕರಿಗೆ ಕೊಡುತ್ತಿಲ್ಲ. ಉತಾರಗಳಿಗಾಗಿಯೇ ತಿಂಗಳುಗಟ್ಟಲೇ ಪಂಚಾಯತಿಗಳಿಗೆ ಅಲೆದಾಡಿಸುತ್ತಿದ್ದಾರೆ. ಇದು ಯಾವ ನ್ಯಾಯ? ಎಂದು ಪ್ರಶ್ನಿಸಿದ ಅವರು, ಇನ್ನಾದರೂ ಎಚ್ಚೆತ್ತುಕೊಂಡು ಕೆಲಸ ಮಾಡುವಂತೆ ಸೂಚನೆ ನೀಡಿದರು.

ಪ್ರವಾಹ ಸಂದರ್ಭದಲ್ಲಿ ನೆರೆ ಸಂತ್ರಸ್ತರಿಗೆ ಇನ್ನೂ ಕೆಲವು ಮನೆಗಳ ಬಾಕಿ ಇವೆ. ಈಗಲೂ ದಿನನಿತ್ಯ ಸಂತ್ರಸ್ತರು ನಮ್ಮ ಕಚೇರಿಗೆ ಬಂದು ತಮ್ಮ ಅಳಲನ್ನು ತೋಡಿಕೊಳ್ಳುತ್ತಿದ್ದಾರೆ. ಅಧಿಕಾರಿಗಳು ಮಾಡಿದ ತಪ್ಪಿನಿಂದಾಗಿ ಅರ್ಹ ಬಡ ಕುಟುಂಬಗಳಿಗೆ ಸರ್ಕಾರದ ಮನೆಗಳು ಮಂಜೂರಾಗಿಲ್ಲ. ಸ್ಥಳೀಯವಾಗಿ ಪಂಚಾಯತಿ ಅಧಿಕಾರಿಗಳು ಶ್ರೀಮಂತ ಫಲಾನುಭವಿಗಳಿಂದ ಹಣ ಪಡೆದು ನಿಜವಾದ ಬಡಕುಟುಂಬಗಳಿಗೆ ಅನ್ಯಾಯವೆಸಗಿದ್ದಾರೆ. ಪ್ರವಾಹ ಹಾಗೂ ನಿರಂತರ ಮಳೆಯಿಂದಾಗಿ ಕೆಲ ಸಂತ್ರಸ್ತ ಕುಟುಂಬಗಳಿಗೆ ಇನ್ನೂ ಸೂರು ಸಿಕ್ಕಿಲ್ಲ. ಮುಂದಿನ ದಿನಗಳಲ್ಲಿ ಪರಿಹಾರ ಧನದಿಂದ ವಂಚಿತರಾದ ಸಂತ್ರಸ್ತ ಕುಟುಂಬಗಳಿಗೆ ಮನೆಗಳನ್ನು ನಿರ್ಮಿಸಿಕೊಡುವಂತೆ ಅಧಿಕಾರಿಗಳಿಗೆ ಸೂಚನೆ ನೀಡಿದರು.

ಮತ್ತೇ ಹಳೆಯ ಚಾಳಿಯನ್ನು ಮುಂದುವರಿಸಿ ಬಡವರಿಂದ ಹಣವನ್ನು ಪಡೆದರೇ ನಾನೇ ಸ್ವತ: ಅಂತಹ ಅಧಿಕಾರಿಗಳ ವಿರುದ್ಧ ಶಿಸ್ತು ಕ್ರಮ ಜರುಗಿಸಲಾಗುವುದು. ಕೆಲ ಅಧಿಕಾರಿಗಳು ಬಡವರಿಂದ ದುಡ್ಡು ತಿಂದು ನಮ್ಮ ಹೆಸರಿಗೆ ಕಳಂಕ ತರುವ ಕೆಲಸವನ್ನು ಮಾಡುತ್ತಿದ್ದಾರೆ. ಅಂತವರ ಮೇಲೆ ನಮ್ಮ ಹದ್ದಿನ ಕಣ್ಣು ಇದೆ ಎಂದು ಖಡಕ್ಕಾಗಿ ವಾರ್ನಿಂಗ ಮಾಡಿದರು.

ಇನ್ನೂ ಮುಂದೆ ಅರಭಾವಿ ಕ್ಷೇತ್ರದ ಪ್ರತಿ ಜಿಲ್ಲಾ ಪಂಚಾಯತಿ ವ್ಯಾಪ್ತಿಯಲ್ಲಿ ಸಾರ್ವಜನಿಕರ ಸಮಸ್ಯೆಗಳಿಗೆ ಸ್ಪಂದಿಸುವ ಕೆಲಸ ಮಾಡಲಾಗುವುದು. ಸರ್ಕಾರದ ವಿವಿಧ ಪಿಂಚಣಿ ಸೌಲಭ್ಯಗಳನ್ನು ಸ್ಥಳದಲ್ಲಿಯೇ ಅರ್ಹ ಫಲಾನುಭವಿಗಳಿಗೆ ನೀಡುವ ವ್ಯವಸ್ಥೆಯನ್ನು ಜಾರಿಗೆ ತರಲಾಗುವುದು. ತಹಶೀಲದಾರರು ಸೇರಿದಂತೆ ವಿವಿಧ ಅಧಿಕಾರಿಗಳನ್ನು ಸ್ಥಳದಲ್ಲಿಯೇ ಕರೆಯಿಸಿಕೊಂಡು ಅರ್ಹರಿಗೆ ಪಿಂಚಣಿ ಸೌಲಭ್ಯ ಒದಗಿಸಲಾಗವುದು ಇದರಿಂದ ಬಡ ನಾಗರೀಕರ ಕಚೇರಿ ಅಲೆದಾಟ ಸೇರಿದಂತೆ ಮಧ್ಯವರ್ತಿಗಳ ಹಾವಳಿಯೂ ಇನ್ನು ಮುಂದೆ ತಪ್ಪಲಿದೆ ಎಂದು ತಿಳಿಸಿದರು.

ಯಾರಿಗೂ ಹೆದರದೇ ಒಳ್ಳೆಯ ಕೆಲಸ ಮಾಡಿ. ಜನರ ಪ್ರೀತಿ ವಿಶ್ವಾಸ ಸಂಪಾದನೆ ಮಾಡಿ. ಬಡವರಿಗೆ ಸಹಾಯ ಮಾಡಿ. ಕೆಲ ಮಾಹಿತಿ ಹಕ್ಕು ಕಾರ್ಯಕರ್ತರ ಹಾವಳಿ ಹೆಚ್ಚಾಗಿದ್ದು, ನಿಮ್ಮ ಕೆಲಸವನ್ನು ನೀವು ಅಚ್ಚುಕಟ್ಟಾಗಿ ಮಾಡಿದರೇ ಯಾರಿಗೂ ಅಂಜಬೇಡಿ ಎಂದು ಶಾಸಕ ಬಾಲಚಂದ್ರ ಜಾರಕಿಹೊಳಿ ಅವರು ಇದೇ ಸಂದರ್ಭದಲ್ಲಿ ಅಧಿಕಾರಿಗಳಿಗೆ ಕಿವಿ ಮಾತು ಹೇಳಿದರು.

ಸಭೆಯಲ್ಲಿ ಮೂಡಲಗಿ ತಹಶೀಲದಾರ ಪ್ರಶಾಂತ ಚಿನಗೊಂಡ, ಗೋಕಾಕ ತಹಶೀಲದಾರ ಮಂಜುನಾಥ ಕೆ, ಮೂಡಲಗಿ ತಾ.ಪಂ ಇಓ ಎಫ್.ಜಿ.ಚಿನ್ನನವರ, ಗೋಕಾಕ ತಾ.ಪಂ ಇಓ ಮುರಳಿಧರ ದೇಶಪಾಂಡೆ, ಮೂಡಲಗಿ–ಗೋಕಾಕ ತಾಲೂಕಿನ ಪಿಡಿಓ, ಇಂಜಿನಿಯರ್, ಕಾರ್ಯದರ್ಶಿಗಳು ಉಪಸ್ಥಿತರಿದ್ದರು.

## ಸರ್ವೋತ್ತಮ ಸೇವಾ ಪ್ರಶಸ್ತಿಗೆ ನಾಮ ನಿರ್ದೇಶನ: ಅವಧಿ ವಿಸ್ತರಣೆ

ಕೊಪ್ಪಳ: 2023ನೇ ಸಾಲಿನ ರಾಜ್ಯ ಸರ್ಕಾರದ ಸರ್ವೋತ್ತಮ ಸೇವಾ ಪ್ರಶಸ್ತಿಗೆ ನಾಮ ನಿರ್ದೇಶನಗಳನ್ನು ಸಲ್ಲಿಸಲು ಅವಧಿ ವಿಸ್ತರಿಸಲಾಗಿದೆ.

ಸರ್ಕಾರದ ಸುತ್ತೋಲೆಯನ್ವಯ 2023ನೇ ಸಾಲಿನ ರಾಜ್ಯ ಮಟ್ಟ ಹಾಗೂ ಜಿಲ್ಲಾ ಮಟ್ಟದ "ಸರ್ವೋತ್ತಮ ಸೇವಾ ಪ್ರಶಸ್ತಿ"ಗೆ ನಾಮನಿರ್ದೇಶನವನ್ನು ಆನ್ಲೈನ್‌ನಲ್ಲಿ ಸಲ್ಲಿಸುವಂತೆ ಅವಧಿಯನ್ನು ಮೇ 15ರವರಗೆ ವಿಸ್ತರಿಸಲಾಗಿತ್ತು, ಆದರೆ, ಇನ್ನೂ ಹೆಚ್ಚಿನ ಸಂಖ್ಯೆಯ ಅಧಿಕಾರಿ/ನೌಕರರು ನಾಮನಿರ್ದೇಶನಗಳನ್ನು ಸಲ್ಲಿಸಲು ಅವಕಾಶ ಕಲ್ಪಿಸುವ ಉದ್ದೇಶದಿಂದ, ಈ ಅವಧಿಯನ್ನು ಜೂನ್ 15ರ ವರೆಗೆ ವಿಸ್ತರಿಸಲಾಗಿದೆ.

ನಂತರ ಯಾವುದೇ ಕಾರಣಕ್ಕೂ ಕಾಲಾವಧಿಯನ್ನು ವಿಸ್ತರಿಸಲಾಗುವುದಿಲ್ಲ ಎಂದು ಸಿಆಸುಇ (ಆಸು ತರಬೇತಿ ಮತ್ತು ಮಾಹಿತಿ ಹಕ್ಕು ಶಾಖೆ) ಸರ್ಕಾರದ ಅಧೀನ ಕಾರ್ಯದರ್ಶಿಗಳ ಕಾರ್ಯಾಲಯದ ಪ್ರಕಟಣೆ ತಿಳಿಸಿದೆ.

## ಎಸ್ಸೆಸ್ಸೆಲ್ಸಿ ಫಲಿತಾಂಶ: ಹಿರೀಕಾಸನಕಂಡಿ ಮೊರಾರ್ಜಿ ದೇಸಾಯಿ ವಸತಿ ಶಾಲೆ ಉತ್ತಮ ಸಾಧನೆ

ಕೊಪ್ಪಳ: ಹಿಂದುಳಿದ ವರ್ಗದ ಮೊರಾರ್ಜಿ ದೇಸಾಯಿ ವಸತಿ ಶಾಲೆ ಹಿರೇಕಾಸನಕಂಡಿ ಕೊಪ್ಪಳ ಶಾಲೆಯು 2022–23ನೇ ಸಾಲಿನ ಎಸ್ಸೆಸ್ಸೆಲ್ಸಿ ಫಲಿತಾಂಶ 100 ರಷ್ಟು ಆಗಿರುತ್ತದೆ ಎಂದು ವಸತಿ ಶಾಲೆ ಪ್ರಾಂಶುಪಾಲರು ತಿಳಿಸಿದ್ದಾರೆ.

ಎಸ್ಸೆಸ್ಸೆಲ್ಸಿ ಪರೀಕ್ಷೆಗೆ ವಸತಿ ಶಾಲೆಯ 42 ವಿದ್ಯಾರ್ಥಿಗಳು ಹಾಜರಾಗಿದ್ದು, ಅದರಲ್ಲಿ 37 ಅತ್ಯುನ್ನತ ಶ್ರೇಣಿ ಮತ್ತು 05 ಪ್ರಥಮ ಸ್ಥಾನ ಪಡೆಯುವ ಮೂಲಕ ಎಲ್ಲಾ 42 ವಿದ್ಯಾರ್ಥಿಗಳು ಉತ್ತೀರ್ಣರಾಗಿದ್ದಾರೆ.

ಇದರಲ್ಲಿ ಪ್ರಥಮ ಸ್ಥಾನ ಐಶ್ವರ್ಯ ಶೇ 97.6 (610/625), ದ್ವಿತೀಯ ಸ್ಥಾನ ಅಭಿಷೇಕ ಶೇ 97.28 (608/625) ಮತ್ತು ತೃತೀಯ ಸ್ಥಾನ 96.8 (605/625) ಅಂಕ ಪಡೆದು ಶಾಲೆಗೆ ಕೀರ್ತಿ ತಂದಿದ್ದಾರೆ.

ವಿದ್ಯಾರ್ಥಿಗಳ ಈ ಸಾಧನೆಗೆ ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯ ಉಪನಿರ್ದೇಶಕರಾದ ಗಂಗಾಧರ ದೊಡ್ಡಮನಿ ಮತ್ತು ವಸತಿ ಶಾಲೆಯ ಪ್ರಾಂಶುಪಾಲರಾದ ಮಂಜುನಾಥ ಬೇಳೂರು ಹಾಗೂ ಶಿಕ್ಷಕರು, ನಿಲಯಪಾಲಕರು ಮತ್ತು ಸರ್ವ ಸಿಬ್ಬಂದಿಗಳು ಹರ್ಷ ವ್ಯಕ್ತಪಡಿಸಿದ್ದಾರೆ ಎಂದು ಪ್ರಕಟಣೆ ತಿಳಿಸಿದೆ.

## ಬಡ್ಡಿ ಸಮೇತ ಪರಿಹಾರ ಕೊಡುವಂತೆ ಆದೇಶಿಸಿದ ಗ್ರಾಹಕರ ಆಯೋಗ

ಧಾರವಾಡ: ಧಾರವಾಡದ ಗಾಂಧಿನಗರದ ನಿವಾಸಿ ರೋಹಿಣಿ ಜಾಧವ ಎಂಬುವರು 2017ನೇ ಇಸ್ವಿಯಲ್ಲಿ ಎದುರುದಾರಾದ ಪೃಥ್ವಿ ಬಿಲ್ಡರ್ಸ್ ಕಡೆಯಿಂದ ತಡಸಿನಕೊಪ್ಪ ಗ್ರಾಮದ ಲೇಔಟ್ನ ಪ್ಲಾಟ್ ನಂ. 12ನ್ನು ರೂ.9,25,000/–ಗೆ ಖರೀದಿಸಿ ಅದರ ಪೈಕಿ ರೂ. 5,10,000/– ಹಣವನ್ನು ಮುಂಗಡವಾಗಿ ಕೊಟ್ಟಿದ್ದರು. ಈ ಬಗ್ಗೆ ಉಭಯತರ ಮಧ್ಯೆ ಖರೀದಿ ಕರಾರು ಒಪ್ಪಂದ ಪತ್ರ ಆಗಿತು. ಆದರೆ ಎದುರುದಾರರು 4–5 ವರ್ಷ ಕಳೆದರೂ ಲೇಔಟ್ ಅಭಿವೃಧ್ಧಿ ಮಾಡಿರಲ್ಲಿಲ್ಲ.

ದೂರುದಾರರಿಗೆ ಪ್ಲಾಟ್ ನಂ.12 ರ ಬಗ್ಗೆ ಖರೀದಿ ಪತ್ರ ನೊಂದಣಿ ಮಾಡಿಕೊಟ್ಟಿರಲಿಲ್ಲ. ಹಲವು ಬಾರಿ ದೂರುದಾರರು ಎದುರುದಾರರಿಗೆ ವಿನಂತಿಸಿದಾಗ 08/06/2022 ರಂದು ರೂ.2,50,000/– ಹಣ ವಾಪಸ್ಸು ಮಾಡಿದ್ದರು.

ಬಾಕಿ ಹಣ ರೂ.2,60,000/– ಗೆ ಎದುರುದಾರರು ಒಂದು ಚೆಕ್ಕನ್ನು ಕೊಟ್ಟಿದ್ದರು. ಆದರೆ ಆ ಚೆಕ್ಕು ಕೂಡ ಅಮಾನ್ಯವಾದ ಕಾರಣ ಎದುರುದಾರರ ವಿರುದ್ಧ ಧಾರವಾಡದ ಜೆ.ಎಂ.ಎಫ್.ಸಿ ಕೊರ್ಟ್‌ನಲ್ಲಿ ಚೆಕ್ಕ ಬೌನ್ಸ್ ಕೇಸನ್ನು ಹಾಕಿದ್ದರು.

ಆನಂತರ ಎದುರುದಾರರು ರೂ.2,60,000/– ಹಣವನ್ನು ದೂರುದಾರರಿಗೆ ಕೊಟ್ಟಿದ್ದರು. 2017 ರಿಂದ 08/06/2022 ರವರೆಗೆ ತನ್ನ ರೂ.5,10.000/– ಹಣವನ್ನು ಎದುರುದಾರ ಬಳಸಿಕೊಂಡು ಅದರ ಮೇಲೆ ತನಗೆ ಬಡ್ಡಿ ಅಥವಾ ಪರಿಹಾರ ಕೊಟ್ಟಿಲ್ಲ ಅಂಥ ಹೇಳಿ ಎದುರುದಾರರಿಂದ ತನಗೆ ಮೊಸವಾಗಿ ಸೇವಾ ನ್ಯೂನ್ಯತೆ ಆಗಿದೆ ಅಂತ ಎದುರುದಾರರ ಮೇಲೆ ಕ್ರಮ ಕೈಗೊಳ್ಳುವಂತೆ ದೂರುದಾರರು ಧಾರವಾಡ ಜಿಲ್ಲಾ ಗ್ರಾಹಕರ ಆಯೋಗಕ್ಕೆ ದೂರು ಸಲ್ಲಿಸಿದ್ದರು.

ಸದರಿ ದೂರಿನ ಬಗ್ಗೆ ಕೂಲಂಕುಷವಾಗಿ ವಿಚಾರಣೆ ನಡೆಸಿದ ಆಯೋಗದ ಅಧ್ಯಕ್ಷ ಈಶಪ್ಪ.ಭೂತೆ, ಸದಸ್ಯರಾದ ವಿಶಾಲಾಕ್ಷಿ.ಅ. ಬೋಳಶೆಟ್ಟಿ ಹಾಗೂ ಪ್ರಭು .ಸಿ, ಹಿರೇಮಠ ಸದಸ್ಯರು, 2017 ರಲ್ಲಿ ದೂರುದಾರರು ರೂ.5 ಲಕ್ಷ 10 ಸಾವಿರ ರೂ.ಮುಂಗಡ ಹಣಕೊಟ್ಟು ಸೈಟನ್ನು ಖರೀದಿಸಿ ಕರಾರು ಪತ್ರ ಮಾಡಿಕೊಂಡಿದ್ದು ಆ ಸೈಟನ್ನು ಕೊಡದೆ ಆ ಹಣವನ್ನು ಎದುರುದಾರರು ತನ್ನ ಸ್ವಂತಕ್ಕೆ ಉಪಯೋಗಿಸಿಕೊಂಡು ಅವರಿಗೆ ಮೋಸ ಮಾಡಿ ಸೇವಾ ನ್ಯೂನ್ಯತೆ ಎಸಗಿದ್ದಾರೆ ಅಂತಾ ಆಯೋಗ ಅಭಿಪ್ರಾಯಪಟ್ಟು ತೀಪು ನೀಡಿದೆ.

ಎದುರುದಾರಿಗೆ ಕೊಟ್ಟ ರೂ.5,10,000/– ಮೇಲೆ 2017 ರಿಂದ ಪೂರ್ತಿ ಹಣ ಸಂದಾಯ ವಾಗುವರೆಗೆ ಶೇ.8 ರಂತೆ ಬಡ್ಡಿಕೊಡಲು ಮತ್ತು ಎದುರುದಾರರ ತಪ್ಪಿನಿಂದ ದೂರುದಾರಿಗೆ ಆಗಿರುವ ಅನಾನುಕೂಲ ಮತ್ತು ಮಾನಸಿಕ ಹಿಂಸೆಗೆ ರೂ.50,000/– ಪರಿಹಾರ ಹಾಗೂ ರೂ. 5,000/– ಪ್ರಕರಣದ ಖರ್ಚು ಕೊಡುವಂತೆ ಆಯೋಗ ಆದೇಶಿಸಿದೆ. ಈ ಪ್ರಕರಣದ ವಿಶೇಷತೆ ಎಂದರೆ ದೂರುದಾರಳು ಆಯೋಗದ ಮುಂದೆ ತನ್ನ ಪ್ರಕರಣವನ್ನು ತಾನೇ ನಡೆಸಿ ಜಯಶೀಲರಾಗಿರುವುದು.

## ಅವ್ಯವಸ್ಥೆಯ ಆಗರವಾದ ಸಿರಿಗೇರಿ ಗ್ರಾಮ ಪಂಚಾಯಿತಿ

ಸಿರುಗುಪ್ಪ : ತಾಲೂಕಿನ ಸಿರಿಗೇರಿ ಗ್ರಾಮ ಪಂಚಾಯಿತಿ ಕಛೇರಿಯು ಸೂಕ್ತ ನಿರ್ವಹಣೆಯ ಕೊರತೆ ಹಾಗೂ ಅಧಿಕಾರಿಗಳ ನಿರ್ಲಕ್ಷ್ಯತೆಯಿಂದಾಗಿ ಅವ್ಯವಸ್ಥೆಯ ಆಗರವಾಗಿದೆ.

ಕಟ್ಟಡದ ಮುಂಭಾಗದಲ್ಲಿ ಬಿರುಕು ಗೊಂಡು ಶಿಥಿಲಾವ್ಯಸ್ಥೆಯಲ್ಲಿದ್ದು ಕುಸಿದು ಸಾರ್ವಜನಿಕರ ಮೇಲೆ ಬೀಳುವ ಸಂಭವವಿದೆ.

ಗ್ರಾ.ಪಂ. ಆವರಣದಲ್ಲಿನ ಸ್ವಚ್ಚತೆ ಮರೀಚಿಕೆಯಾಗಿದ್ದು ಎಲ್ಲೆಂದರಲ್ಲಿ ಕಸ, ಮದ್ಯದ ತ್ಯಾಜ್ಯಗಳು, ನೀರಿನ ಪಾಕೆಟ್, ಇನ್ನಿತರ ತ್ಯಾಜ್ಯಗಳಿಂದ ಕೂಡಿದ್ದು, ಆವರಣದಲ್ಲಿ ಬೆಂಕಿ ಹಾಕಿ ಸುಡುತ್ತಿರುವುದರಿಂದ ಗಿಡಮರಗಳು ಸುಟ್ಟುಕರ ಕಲಾಗುತ್ತಿವೆ.

ಕಳೆದೈದು ವರ್ಷಗಳಿಂದಲೂ ಆವರಣದಲ್ಲಿ ತೆರೆದಗುಂಡಿ ಯೊಂದು ವ್ಯರ್ಥವಾಗಿದ್ದು, ಅದನ್ನು ಮುಚ್ಚದೇ ಇರುವುದರಿಂದ ಕಛೇರಿಗೆ ಬರುವ ಮಕ್ಕಳು ಗುಂಡಿಗೆ ಬಿದ್ದರೆ ಪ್ರಾಣಾಪಾಯಗಳು ನಡೆಯುವ ಸಂಭವವಿದೆ.




ಕಛೇರಿಯಲ್ಲಿ ಅಧಿಕಾರಿಗಳಿಲ್ಲದಿದ್ದರೂ ವಿದ್ಯು ದೀಪಗಳು ಉರಿಯುತ್ತಿವೆ, ಫ್ಯಾನ್ ತಿರುಗುತ್ತಿರುವುದು ಕಂಡು ಬಂದಿದ್ದು ಅನಗತ್ಯ ದುಂದು ವೆಚ್ಚಕ್ಕೆ ಹಾದಿಯಾಗಿದೆ.

ಇನ್ನೂ ಕಛೇರಿಯಲ್ಲಿನ ಶೌಚಾಲಯದ ಕೊಠಡಿಗಳನ್ನು ಬೀಗಹಾಕಿಕೊಂಡು ಸಿಬ್ಬಂದಿಗಳು ಮಾತ್ರ ಬಳಕೆ ಮಾಡಿಕೊಳ್ಳುತ್ತಿದ್ದು, ಸಾರ್ವಜನಿಕರ ಉಪಯೋಗಕ್ಕೆ ಕೊಡದಿರುವುದರಿಂದ ಪಕ್ಕದಲ್ಲಿನ ಶಿಥಿಲ ಶೌಚಾಲಯದಲ್ಲೇ ಮಲ ಮೂತ್ರ ಮಾಡಬೇಕಾದ ಪರಿಸ್ಥಿತಿಯುಂಟಾಗಿದೆ.


ಕಛೇರಿಗೆ ಸಂಬಂದಿಸಿದ ಭಿತ್ತಿಪತ್ರಗಳನ್ನು ಅಂಟಿಸಲು ಪ್ರತ್ಯೇಕ ಬೋರ್ಡ್ ವ್ಯವಸ್ಥೆಯಿದ್ದರೂ ಸಾವಿರಾರು ರೂಪಾಯಿ ಖರ್ಚುಮಾಡಿ ಗೋಡೆಗಳಿಗೆ ಯೋಜನೆಗಳ ವಿವರಣೆಗೆಂದು ಬರೆಸಲಾದ ಅಕ್ಷರಗಳ ಮೇಲೆಯೇ ಭಿತ್ತಿಪತ್ರಗಳನ್ನು ಅಂಟಿಸಿರುವುದರಿಂದ ಬಣ್ಣದಿಂದ ಬರೆಸಿದ ಅಕ್ಷರಗಳೆಲ್ಲ ಭಿತ್ತಿ ಪತ್ರಗಳೊಂದಿಗೆ ಅಳಿಸಿ ಹೋಗುತ್ತಿವೆ.

ಗ್ರಾಮ ಪಂಚಾಯಿತಿಯ ಸುತ್ತು ಗೋಡೆಯು ಕೆಳಮಟ್ಟದಲ್ಲಿರುವುದರಿಂದ ಸುತ್ತಲಿನ ಸಣ್ಣಪುಟ್ಟ ಡಬ್ಬಿಗಳಲ್ಲಿನ ವ್ಯಾಪಾರಿಗಳು ತಮ್ಮತ್ಯಾಜ್ಯವನ್ನು ಆವರಣದೊಳಗೆ ಬೀಸಾಡುತ್ತಿದ್ದು, ಸಂಬಂದಿಸಿದವರ ಮೇಲೆ ಸೂಕ್ತ ಕ್ರಮ ಜರುಗಿಸ ಬೇಕಾಗಿದೆ.

ಕಛೇರಿಯಲ್ಲಿನ ಸಮಸ್ಯೆಗಳ ಬಗ್ಗೆ ಗಮನವಹಿಸದ ಅಭಿವೃದ್ಧಿ ಅಧಿಕಾರಿಗಳು ಇನ್ನೂಗ್ರಾಮದ ಸಮಸ್ಯೆಗಳನ್ನು ಪರಿಹರಿಸುವುದಾದರೂ ಹೇಗೆ ಎಂಬುಂದು ಗ್ರಾಮಸ್ಥರ ಪ್ರಶ್ನೆಯಾಗಿದ್ದು ಇನ್ನು ಮುಂದಾದರೂ ಸಂಬಂದಿಸಿದ ಮೇಲಾಧಿಕಾರಿಗಳು ಸೂಕ್ತ ಕ್ರಮ ಜರುಗಿಸಿ ಸಮಸ್ಯೆಗಳಿಗೆ ಮುಕ್ತಿ ಹಾಡಬೇಕಾಗಿದೆ.

## ಸೂಕ್ತ ತಡೆಗೋಡೆಯಿಲ್ಲದೇ ಆಸ್ಪತ್ರೆಯ ಆವರಣದಲ್ಲಿನ ಆಸ್ತಿ ಖದೀಮರ ಪಾಲು

ಸಿರುಗುಪ್ಪ: ತಾಲೂಕಿನ ಸಿರಿಗೇರಿ ಗ್ರಾಮದಲ್ಲಿರುವ ಪ್ರಾಥಮಿಕ ಆರೋಗ್ಯ ಕೇಂದ್ರಕ್ಕೆ ಸೂಕ್ತ ತಡೆಗೋಡೆಯಿಲ್ಲ ದಿರುವುದರಿಂದ ಅತಿಕ್ರಮ ಪ್ರವೇಶದಿಂದಾಗಿ ಆವರಣದಲ್ಲಿನ ಆಸ್ಪತ್ರೆಗೆ ಸಂಬಂದಿಸಿದ ಆಸ್ತಿಯು ಖದೀಮರ ಪಾಲಾಗುತ್ತಿದ್ದು ಸೂಕ್ತ ತಡೆಗೋಡೆ ನಿರ್ಮಾಣಕ್ಕೆ ಗ್ರಾಮಸ್ಥರು ಒತ್ತಾಯಿಸಿದರು.



ಒಂದೆಡೆ ತಳಮಟ್ಟದ ತಡೆಗೋಡೆ ಇನ್ನೊಂದೆಡೆ ತಡೆಗೋಡೆ ಯಿಲ್ಲದ ಆವರಣದಿಂದಾಗಿ ದನಕರು, ಕುರಿಮೇಕೆಗಳ ಪ್ರವೇಶದಿಂದಾಗಿ ಆವರಣದಲ್ಲಿ ನೆಡಲಾದ ಸಸಿಗಳು ಜಾನುವಾರುಗಳ ಪಾಲಾಗುತ್ತಿವೆ.

ಆವರಣದಲ್ಲಿ 1998ರಲ್ಲಿ ಪ್ರಾರಂಭವಾದಕಲ್ಲಿನ ಕಟ್ಟಡ ಕಾಮಗಾರಿ ಪೂರ್ಣಗೊಳ್ಳದೇ ಶಿಥಿಲಾವಸ್ಥೆಗೆ ತಲುಪಿದೆ. ಅನೇಕ ಕಟ್ಟಡಗಳು ಇದೇರೀತಿ ದುರಸ್ಥಿಯಲ್ಲಿದ್ದು ಆರೋಗ್ಯ ಕೇಂದ್ರದಲ್ಲಿನ ಸಿಬ್ಬಂದಿಗಳ ವಾಸಕ್ಕೆ ತೊಂದರೆಯಾಗಿದೆ.

ಈ ಭಾಗದ ಶಾನವಾಸಪುರ, ಕೊಂಚಿಗೇರಿ, ದಾಸಾಪುರ, ಸಿದ್ದರಾಂಪುರ, ಮುದ್ದಟನೂರು, ಗುಂಡಿಗನೂರು, ಹಾವಿನಾಳ್, ಮಾಳಾಪುರ, ಚನ್ನಪಟ್ಟಣ, ನಡವಿ, ಎಂ.ಸೂಗೂರು, ಮಣ್ಣೂರು, ರುದ್ರಪಾದ, ಉಡೇಗೋಳ, ನಿಟ್ಟೂರು ಸೇರಿದಂತೆ 10ಕ್ಕೂ ಅಧಿಕ ಗ್ರಾಮಗಳು ಹಾಗೂ ಕ್ಯಾಂಪಿನ ನಿವಾಸಿಗಳ ಆರೋಗ್ಯ ತಪಾಸಣೆಗೆ ಕೇಂದ್ರಕ್ಕೆ ಬರುತ್ತಿದ್ದು ಹೆರಿಗೆ ಸಂದರ್ಭದಲ್ಲಿ ರಾತ್ರಿತಂಗುವವರ ಬೈಕ್‌ಗಳ ಕಳ್ಳತನದ ಆರೋಪವೂ ಕೇಳಿಬಂದಿದೆ.

ಆಸ್ಪತ್ರೆಯ ಹೆಬ್ಬಾಗಿಲು ಮುಂದೆ ಕ್ಯಾಟಲ್ ಕ್ರಾಪ್ಸ್, ಹಿಂಭಾಗದಿಂದ ಬರುವವರಿಗೆ ತಿರುವಿನ ಬಾಗಿಲು ಅಳವಡಿಸ ಬೇಕೆಂಬುದು ಒತ್ತಾಯವಾಗಿದೆ.

ಇನ್ನು ಮುಂದಾದರೂ ಸಂಬಂದಿಸಿದ ಅಧಿಕಾರಿಗಳು ಈ ಸಮಸ್ಯೆಯ ಬಗ್ಗೆ ಗಮನವಹಿಸಿ ಬಹುದಿನಗಳಿಂದ ಪೂರ್ಣಗೊಳ್ಳದ ಕಾಮಗಾರಿ, ಹಾಗೂ ಸುತ್ತಲಿನ ತಡೆಗೋಡೆ ಬಗ್ಗೆ ಗಮನವಹಿಸ ಬೇಕೆಂದು ಗ್ರಾಮಸ್ಥರಾದ ಭವಾನಿ, ಮಹಾಂಕಾಳಿ ಒತ್ತಾಯಿಸಿದರು.

## 10 ತಿಂಗಳ ತೋಟಗಾರಿಕಾ ತರಬೇತಿಗಾಗಿ ಅರ್ಜಿ ಆಹ್ವಾನ

ಧಾರವಾಡ: ಧಾರವಾಡ ಜಿಲ್ಲೆಯ ರೈತ ಮಕ್ಕಳಿಗೆ 2023–24 ನೇ ಸಾಲಿಗೆ, 10 ತಿಂಗಳ ಅವಧಿಗೆ ಅಂದರೆ ಜೂನ್.1, 2023 ರಿಂದ ಮಾರ್ಚ್ 30, 2024 ರ ವರೆಗೆ ಗದಗ ತೋಟಗಾರಿಕೆ ತರಬೇತಿ ಕೇಂದ್ರದಲ್ಲಿ 5 ಮಹಿಳೆಯರಿಗೆ ಹಾಗೂ 10 ಪುರುಷರಿಗೆ ಸೇರಿ ಒಟ್ಟು–15 ಅಭ್ಯರ್ಥಿಗಳಿಗೆ ತೋಟಗಾರಿಕಾ ತರಬೇತಿ ನೀಡಲು ಅರ್ಜಿ ಆಹ್ವಾನಿಸಲಾಗಿದೆ.

ಅಭ್ಯರ್ಥಿಗಳು ಅರ್ಜಿಗಳನ್ನು ಧಾರವಾಡ ಜಿಲ್ಲೆಯ ತೋಟಗಾರಿಕೆ ಉಪನಿರ್ದೇಶಕರು, ಜಿಲ್ಲಾ ಪಂಚಾಯತ, ಧಾರವಾಡ ಇವರ ಕಛೇರಿಯಲ್ಲಿ ಸಲ್ಲಿಸಬೇಕು. ಅರ್ಜಿ ಶುಲ್ಕದ ಮೊತ್ತ ಸಾಮಾನ್ಯ ಅಭ್ಯರ್ಥಿಗಳಿಗೆ ರೂ. 30/– ಮತ್ತು ಪರಿಶಿಷ್ಟ ಜಾತಿ, ಪರಿಶಿಷ್ಟ ಪಂಗಡದ ಅಭ್ಯರ್ಥಿಗಳಿಗೆ ರೂ.15/– ಮೌಲ್ಯದ ಇಂಡಿಯನ್ ಪೋಸ್ಟಲ್ ಆರ್ಡರ್ ಅಥವಾ ಬ್ಯಾಂಕ್ ಡಿಮ್ಯಾಂಡ್ ಡ್ರಾಫ್ಟನ್ನು ತೋಟಗಾರಿಕೆ ಉಪನಿರ್ದೇಶಕರು (ಜಿಪಂ) ಧಾರವಾಡ ರವರ ಹೆಸರಿನಲ್ಲಿ ಪಡೆದು, ಅರ್ಜಿ ಜೊತೆಗೆ ಲಗತ್ತಿಸಬೇಕು.

ಅರ್ಜಿ ಫಾರಂಗಳನ್ನು ಹಿರಿಯ ಸಹಾಯಕ ತೋಟಗಾರಿಕೆ ನಿರ್ದೇಶಕರು (ರಾಜ್ಯವಲಯ) ಸ್ಟೇಷನ್ ರಸ್ತೆ, ಧಾರವಾಡ ರವರ ಕಛೇರಿಯಲ್ಲಿ ಅಥವಾ ಇಲಾಖಾ ವೆಬ್ಸೈಟ್ https://horticulturedir.karnataka.gov.in ನಲ್ಲಿ ಪಡೆದು, ಭರ್ತಿ ಮಾಡಿದ ಅರ್ಜಿ ಪೂರ್ಣ ಪ್ರಮಾಣದ ದಾಖಲಾತಿಗಳೊಂದಿಗೆ ಮೇ.22 ರೊಳಗಾಗಿ ಸಲ್ಲಿಸಬೇಕು.

ಹೆಚ್ಚಿನ ಮಾಹಿತಿಗಾಗಿ ಹಿರಿಯ ಸಹಾಯಕ ತೋಟಗಾರಿಕೆ ನಿರ್ದೇಶಕರು (ರಾಜ್ಯವಲಯ) ಧಾರವಾಡ ಇವರ ಕಛೇರಿ ದೂ.ಸಂ:0836–2957801 ಸಂಪರ್ಕಿಸಬೇಕೆಂದು ತೋಟಗಾರಿಕೆ ಉಪನಿರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ರೈತರಿಂದ ರೈತರಿಗೆ ಬಿತ್ತನೆ ಬೀಜ ವಿತರಣೆ; ಗುಣಮಟ್ಟ ಪರಿಶೀಲನೆಗೆ ಕಳುಹಿಸಿ

ಧಾರವಾಡ: ಪ್ರತಿ ಹಂಗಾಮಿನಲ್ಲಿ ರೈತರು ಗುಣಮಟ್ಟದ ಬಿತ್ತನೆ ಬೀಜಗಳನ್ನು ಬಳಸುವ ಅವಶ್ಯಕತೆ ಇರುತ್ತದೆ. ಸ್ವಕೀಯ ಪರಾಗಸ್ಪರ್ಶ ಜಾತಿಯ ಬೆಳೆಗಳ ಬಿತ್ತನೆ ಬೀಜಗಳನ್ನು ರೈತರು ರೈತರಿಂದಲೇ ಪಡೆಯಬಹುದಾಗಿದೆ.

ರೈತರು ತಮ್ಮ ದಾಸ್ತಾನಿನಲ್ಲಿರುವ ಉತ್ತಮ ಗುಣಮಟ್ಟದ ಮತ್ತು ಬಿತ್ತನೆಗೆ ಯೋಗ್ಯವಾದ ಬೆಳೆಗಳ, ತಳಿಗಳ ಬೀಜದ ಮಾದರಿಯನ್ನು ಧಾರವಾಡ ಬೀಜ ಪರೀಕ್ಷಾ ಪ್ರಯೋಗಾಲಯಕ್ಕೆ ಪರೀಕ್ಷೆಗಾಗಿ ಕಳುಹಿಸಬಹುದಾಗಿದೆ.

ಆದ್ದರಿಂದ ರೈತರು ಪ್ರತಿ ಬೀಜ ಮಾದರಿಗೆ 5 ರೂಪಾಯಿ ಶುಲ್ಕವನ್ನು ಭರಿಸಿ, ತಮ್ಮ ಹತ್ತಿರದ ರೈತ ಸಂಪರ್ಕ ಕೇಂದ್ರದ ಮುಖಾಂತರ ಬಿತ್ತನೆ ಗುಣಮಟ್ಟದ ವಿಶ್ಲೇಷಣೆಗಾಗಿ ಈ ಪ್ರಯೋಗಾಲಯಕ್ಕೆ ಕಳುಹಿಸಿಕೊಡಬಹುದಾಗಿದೆ.

ಹೆಚ್ಚಿನ ಮಾಹಿತಿಗಾಗಿ ಹತ್ತಿರದ ರೈತ ಸಂಪರ್ಕ ಕೇಂದ್ರ ಅಥವಾ ಹತ್ತಿರದ ಕೃಷಿ ಇಲಾಖೆ ಕಛೇರಿಯನ್ನು ಸಂಪರ್ಕಿಸಬಹುದೆಂದು ಧಾರವಾಡ ಬೀಜ ಪರೀಕ್ಷಾ ಪ್ರಯೋಗಾಲಯದ ಸಹಾಯಕ ಕೃಷಿ ನಿರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಕಲಿಕೆ ಕೇವಲ ಪುಸ್ತಕದಿಂದ ಮಾತ್ರ ಬರುವುದಿಲ್ಲ




ಧಾರವಾಡ: ಕಲಿಕೆ ಕೇವಲ ಪುಸ್ತಕದಿಂದ ಮಾತ್ರ ಬರುವುದಿಲ್ಲ. ಬೇರೆ ಬೇರೆ ಕೌಶಲ್ಯಗಳಿಂದ ಹಾಗೂ ಪಠ್ಯೇತರ ಚಟುವಟಿಕೆಗಳಿಂದ ಕಲಿಕೆ ಬರುತ್ತದೆ ಎಂದು ಜಿಲ್ಲಾ ಪಂಚಾಯತಿ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಸ್ವರೂಪ.ಟಿ.ಕೆ ಹೇಳಿದರು.

ರಾಜ್ಯ ಬಾಲ ಭವನ ಸೊಸೈಟಿ ಬೆಂಗಳೂರು, ಜಿಲ್ಲಾ ಪಂಚಾಯತ, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ ಹಾಗೂ ಜಿಲ್ಲಾ ಬಾಲಭವನ ಧಾರವಾಡ ವತಿಯಿಂದ ನಗರದ ಬಾಲಭವನದಲ್ಲಿ ನಡೆದ ಜಿಲ್ಲಾ ಮಟ್ಟದ ಮಕ್ಕಳ ಬೇಸಿಗೆ ಶಿಬಿರದ ಕಾರ್ಯಕ್ರಮವನ್ನು ಉದ್ಘಾಟಿಸಿ ಮಾತನಾಡಿದರು.

ಪಠ್ಯ ಪುಸ್ತಕ ಎಷ್ಟು ಉಪಯುಕ್ತವಾಗಿವೆಯೋ ಅಗಷ್ಟೇ ಪಠ್ಯೇತರ ಚಟುವಟಿಕೆಗಳು ಉಪಯುಕ್ತವಾಗಿವೆ. ಈ ಚಟುವಟಿಕೆಗಳ ಕಲಿಕೆಯು ಮಕ್ಕಳ ಬೌದ್ಧಿಕ ಮಟ್ಟವನ್ನು ಪರಿಪೂರ್ಣ ಮಾಡುವಲ್ಲಿ ಸಹಕಾರಿಯಾಗಿದ್ದು, ಇಂತಹ ಬೇಸಿಗೆ ಶಿಬಿರ ಮಹತ್ವದ್ದಾಗಿದೆ ಎಂದು ಹೇಳಿದರು.

ಕಾರ್ಯಕ್ರಮದ ಅಧ್ಯಕ್ಷತೆಯನ್ನು ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯ ಉಪನಿರ್ದೇಶಕಿ ಡಾ.ಎಚ್.ಎಚ್. ಕುಕನೂರ ಅವರು ವಹಿಸಿದ್ದರು.

ಮಕ್ಕಳ ಸಾಹಿತಿಗಳು ಹಾಗೂ ಕರ್ನಾಟಕ ಬಾಲವಿಕಾಸ ಅಕಾಡೆಮಿ ಮಾಜಿ ಜಿಲ್ಲಾಧ್ಯಕ್ಷ ಶಂಕರ ಹಲಗತ್ತಿ ಹಾಗೂ ಮಕ್ಕಳ ಸಾಹಿತಿ ನಿಂಗಣ್ಣ ಕುಂಟಿ ಅವರು ಮುಖ್ಯ ಅತಿಥಿಗಳಾಗಿ ಭಾಗವಹಿಸಿದ್ದರು.

ಕಾರ್ಯಕ್ರಮದಲ್ಲಿ ವಿಜಯಲಕ್ಷ್ಮಿ ಮೇತ್ರಿ, ಮದನ ಬಿ.ಜಿ. ಮೈತ್ರಾ ಬನ್ನಿಕೊಪ್ಪ, ಶ್ರೀದೇವಿ ಪತ್ತಾರ ಹಾಗೂ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ ಅಧಿಕಾರಿಗಳು ಹಾಗೂ ಸಿಬ್ಬಂದಿಗಳು ಉಪಸ್ಥಿತರಿದ್ದರು. ಬಸವರಾಜ ಗುಡ್ಡಪ್ಪನವರ ನಿರೂಪಿಸಿದರು, ಉಮಾ ಹೂಗಾರ ವಂದಿಸಿದರು.

## ಮೇ.20ರಂದು ಆರ್‌ವೈಎಂಇಸಿಯಲ್ಲಿ ಪದವಿ ದಿನಾಚರಣೆ

ಬಳ್ಳಾರಿ: ನಗರದ ಪ್ರತಿಷ್ಠಿತ ಶಿಕ್ಷಣ ಸಂಸ್ಥೆಯಾದ ರಾವ್ ಬಹದ್ದೂರ್.ವೈ. ಮಹಾಬಲೇಶ್ವರಪ್ಪ ತಾಂತ್ರಿಕ ಮಹಾ ವಿದ್ಯಾಲಯದಲ್ಲಿ ಮೇ.20ರಂದು ಬೆಳಿಗ್ಗೆ 11.00ಕ್ಕೆ ಜರುಗುವ ಪದವಿ ದಿನಾಚರಣೆ ಸಮಾರಂಭಕ್ಕೆ ಮುಖ್ಯ ಅತಿಥಿಗಳಾಗಿ ಡಾ॥ಬಸವರಾಜ್ ಗದಗೇ, ವಿಶ್ವೇಶ್ವರಾಯ ತಾಂಂತ್ರೀಕ ವಿಶ್ವವಿದ್ಯಾಲಯದ ರೀಜನಲ್ ಡೈರೆಕ್ಟರ್–ಕಲಬುರಗಿ ವಲಯ, ಇವರು ಭಾಗವಹಿಸಲಿದ್ದಾರೆ.



ಹಾಗೂ ವೀರಶೈವ ವಿದ್ಯಾವರ್ಧಕ ಸಂಘದ ಅಧ್ಯಕ್ಷ ಆರ್.ರಾಮನಗೌಡ, ವೀರಶೈವ ವಿದ್ಯಾವರ್ಧಕ ಸಂಘದ ಉಪಾಧ್ಯಕ್ಷ ಹಾಗೂ ಕಾಲೇಜಿನ ಆಡಳಿತ ಮಂಡಳಿಯ ಅಧ್ಯಕ್ಷರಾದ ಅಲ್ಲಂಚನ್ನಪ್ಪ, ಕಾರ್ಯದರ್ಶಿ ಗುರುಸಿದ್ದಸ್ವಾಮಿ, ಸಹಕಾರ್ಯದರ್ಶಿ ಜೆ. ಶಾಂತ ವೀರನಗೌಡ, ಕೋಶಾಧಿಕಾರಿ ಗೋನಾಳು ರಾಜಶೇಖರ್‌ಗೌಡ, ಆರ್.ವೈ.ಎಮ್,ಇ.ಸಿ ಆಡಳಿತ ಮಂಡಳಿಯ ಸದಸ್ಯ ಜಿ.ಎಂ. ಮಲ್ಲಿ ಕಾರ್ಜುನರೆಡ್ಡಿ, ರೂಪನಗುಡಿ ಬಸವರಾಜ, ಜಾನೆ ಕುಂಟೆಣಟಿಜಜ–ಜಿಟಿಜಜ ಪೋಂಪನಗೌಡ, ಕೊರ್ಲಗುಂದಿ ಬಸವನಗೌಡ, ಹಲಕುಂದಿ ಸತೀಶ್‌ಕುಮಾರ್ ಘನಉಪಸ್ಥಿತಿಯಲ್ಲಿ ಉದ್ಘಾಟನೆ ಸಮಾರಂಭವು ಜರುಗುತ್ತದೆ. ಪ್ರಾಂಶುಪಾಲರಾದ ಡಾ॥ ಟಿ. ಹನುಮಂತರೆಡ್ಡಿ, ಉಪ ಪ್ರಾಂಶುಪಾಲರಾದ, ಡಾ॥ ಸವಿತ ಸೊನೊಳಿ ಹಾಗೂ ಶಿಕ್ಷಕವೃಂದ, ವಿದ್ಯಾರ್ಥಿ ವೃಂದದವರು ಭಾಗವಹಿಸಲಿದ್ದಾರೆ. ಮುಖ್ಯ ಸಂಯೋಜಕರಾದ ಡಾ॥ ಶ್ರೀಪತಿ.ಬಿ ಡೀನ್–ಪರೀಕ್ಷಾ ವಿಭಾಗ ಇವರು ಪತ್ರಿಕಾ ಪ್ರಕಟಣೆಗಾಗಿ ತಿಳಿಸಿರುತ್ತಾರೆ.

## ರವೀಂದ್ರನಾಥ ಠಾಗೂರ್ ಜಯಂತಿ ಆಚರಣೆ

ಬಳ್ಳಾರಿ : ಭಾರತ ದೇಶದಕ್ಕೆ ಮೊಟ್ಟ ಮೊದಲು 1913ರಲ್ಲಿ ಸಾಹಿತ್ಯ ಕ್ಷೇತ್ರದಲ್ಲಿ ಗೀತಾಂಜಲಿ ಕೃತಿಗೆ ನೋಬೆಲ್ ಪ್ರಶಸ್ತಿಯನ್ನು ಪಡೆದವರು ರವೀಂದ್ರನಾಥ ಠಾಗೂರ್ ಎಂದು ಕರ್ನಾಟಕ ರಾಜ್ಯ ಕ್ರಿಯಾಶೀಲ ಶಿಕ್ಷಕರ ವೇದಿಕೆ ಬಳ್ಳಾರಿ ಜಿಲ್ಲಾ ಘಟಕದ ಅಧ್ಯಕ್ಷ ರವಿಚೇಳ್ಳಗುರ್ಕಿ ಹೇಳಿದರು.

ತಾಲ್ಲೂಕಿನ ಸಂಜೀವ ರಾಯನಕೋಟೆಯ ಸರ್ಕಾರಿ ಹಿರಿಯ ಪ್ರಾಥಮಿಕ ಶಾಲೆಯಲ್ಲಿ ಹಮ್ಮಿಕೊಂಡಿದ್ದ ರಾಷ್ಟ್ರಕವಿ ರವೀಂದ್ರನಾಥ ಠಾಗೂರ್‌ರವರ ಜಯಂತಿಯಲ್ಲಿ ಪಾಲ್ಗೊಂಡು ಪೂಜೆ ನೆರವೇರಿಸಿ ಮಾತನಾಡಿದ ಅವರು, ಬಂಗಾಳದಲ್ಲಿ ಶಾಂತಿನಿ ಕೇತನ ಶಾಲೆಯನ್ನು ಆರಂಭಿಸಿ ಬಡಮಕ್ಕಳಿಗೆ ಶಿಕ್ಷಣ ನೀಡಿದ ಶಿಕ್ಷಣ ತಜ್ಞ, ತತ್ವಜ್ಞಾನಿ, ಲೇಖಕ, ಸಾಹಿತಿ ಹಾಗೂ ಹೆಸರಾಂತ ಕವಿ ಜೊತೆಗೆ ಜನಗಣಮನ ರಾಷ್ಟ್ರಗೀತೆಯ ಜನಕ ರವೀಂದ್ರನಾಥರು ಎಂದರು.ಶಿಕ್ಷಕರಾದ ರಾಮಾಂಜಿನೇಯ, ಕೆರಾಳಪ್ಪ ಜೂಲ್, ಸುಂಕಪ್ಪ, ಜೂಲ್ ರಮೇಶ, ಹುಲುಗಪ್ಪ,ಆಶಾ ಕಾರ್ಯಕರ್ತೆ ಸುಶೀಲಾ ಹಾಗೂ ಶಾಲಾ ಮಕ್ಕಳು ಉಪಸ್ಥಿತರಿದ್ದರು.




## ಕೈಮಗ್ಗ ಮತ್ತು ಜವಳಿ ಇಲಾಖೆ ರಾಜ್ಯಮಟ್ಟದ ಪ್ರಶಸ್ತಿಗಾಗಿ ಕೈಮಗ್ಗ ನೇಕಾರರಿಂದ ಅರ್ಜಿ ಆಹ್ವಾನ

ಧಾರವಾಡ: ಕೈಮಗ್ಗ ಮತ್ತು ಜವಳಿ ಇಲಾಖೆಯಿಂದ ಹತ್ತಿ ಮತ್ತು ಉಣ್ಣೆ ಕ್ಷೇತ್ರ, ವಲಯದ ಕೈಮಗ್ಗ ನೇಕಾರರಿಗೆ ತಮ್ಮ ವಿಶಿಷ್ಟ ಉತ್ಪನ್ನಗಳ ಉತ್ಪಾದನೆಯನ್ನು ಪ್ರೋತ್ಸಾಹಿಸುವ ಹಿನ್ನಲೆಯಲ್ಲಿ ರಾಜ್ಯ ಮಟ್ಟದ ಪ್ರಶಸ್ತಿಗೆ ಅರ್ಜಿ ಆಹ್ವಾನಿಸಲಾಗಿದೆ.

ಜಿಲ್ಲಾ ವ್ಯಾಪ್ತಿಯ ಸಂಘಟಿತ ಅಥವಾ ಅಸಂಘಟಿತ ಕೈಮಗ್ಗ ನೇಕಾರರು ತಮ್ಮ ವಿಶಿಷ್ಟ, ಕಲಾತ್ಮಕ ಹಾಗೂ ವಿಶೇಷ ಕೈಮಗ್ಗ ಉತ್ಪನ್ನಗಳ ಉತ್ಪಾದನೆಯಲ್ಲಿ ತೊಡಗಿಕೊಂಡಿದ್ದಲ್ಲಿ ತಮ್ಮ ಉತ್ಪನ್ನದ ಮಾದರಿಯೊಂದಿಗೆ 2023–24 ನೇ ಸಾಲಿಗೆ ಕೈಮಗ್ಗ ನೇಕಾರರ ರಾಜ್ಯ ಮಟ್ಟದ ಪ್ರಶಸ್ತಿಗಾಗಿ ಮೇ.25 ರೊಳಗಾಗಿ ಅರ್ಜಿ ಸಲ್ಲಿಸಬೇಕು.

ಹೆಚ್ಚಿನ ಮಾಹಿತಿಗಾಗಿ ಕೈಮಗ್ಗ ಮತ್ತು ಜವಳಿ ಇಲಾಖೆ, ಉಪನಿರ್ದೇಶಕರ ಕಚೇರಿ, ಮಿನಿವಿಧಾನಸೌಧ ಆವರಣ, ಧಾರವಾಡ. ಕಚೇರಿ ದೂ.ಸಂ:0836–2448834 ಸಂಪರ್ಕಿಸಬಹುದೆಂದು ಕೈಮಗ್ಗ ಮತ್ತು ಜವಳಿ ಇಲಾಖೆಯ ಉಪನಿರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಪ್ರತಿಕ್ರಿಯೆ ನೀಡಲು ನಿರಾಕರಿಸಿದ ಡಿ.ಕೆ.ಶಿವಕುಮಾರ್

ನವದೆಹಲಿ: ಕರ್ನಾಟಕ ನೂತನ ಸಿಎಂ ಆಯ್ಕೆ ವಿಚಾರ ಕಗ್ಗಂಟಾಗಿದ್ದು, ಮುಖ್ಯಮಂತ್ರಿ ಸ್ಥಾನಕ್ಕಾಗಿ ಮಾಜಿ ಸಿಎಂ ಸಿದ್ದರಾಮಯ್ಯ ಹಾಗೂ ಕೆಪಿಸಿಸಿ ಅಧ್ಯಕ್ಷ ಡಿ.ಕೆ.ಶಿವಕುಮಾರ್ ಇಬ್ಬರು ನಾಯಕರು ಬಿಗಿ ಪಟ್ಟು ಹಿಡಿದಿದ್ದು, ಹಗ್ಗಜಗ್ಗಾಟ ಮುಂದುವರೆದಿದೆ.



ಈ ನಡುವೆ ನವದೆಹಲಿಯಲ್ಲಿ ಎಐಸಿಸಿ ಅಧ್ಯಕ್ಷ ಮಲ್ಲಿಕಾರ್ಜುನ ಖರ್ಗೆ ಅವರನ್ನು ಭೇಟಿಯಾದ ಡಿಕೆ.ಶಿವಕುಮಾರ್, ಸಿಎಂ ಆಯ್ಕೆ ವಿಚಾರವಾಗಿ ಚರ್ಚೆ ನಡೆಸಿದರು. ಖರ್ಗೆ ನಿವಾಸದಿಂದ ಹೊರ ಬಂದ ಡಿ.ಕೆ.ಶಿವಕುಮಾರ್ ಮಾಧ್ಯಮಗಳ ಯಾವುದೇ ಪ್ರಶ್ನೆಗೆ ಉತ್ತರ ನೀಡಲು ನಿರಾಕರಿಸಿದರು.

ನಡೆದ ಚರ್ಚೆಯಾದರೂ ಏನು? ಒಂದು ಪ್ರತಿಕ್ರಿಯೆ ನೀಡುವಂತೆ ಸುದ್ದಿಗಾರರು ಒತ್ತಾಯಿಸುತ್ತಿದ್ದಂತೆ ಯಾವುದೇ ಪ್ರತಿಕ್ರಿಯೆ ನಾನು ನೀಡಲ್ಲ, ನೀವು ಬರಿ ಬೋಗಸ್ ಸುದ್ದಿ ಹಾಕುತ್ತಿದ್ದೀರಾ. ಯಾವುದೂ ಹೇಳಿದ ಸುದ್ದಿಯನ್ನು ಹಾಕಿ ಗಾಸಿಪ್ ಕ್ರಿಯೇಟ್ ಮಾಡುತ್ತಿದ್ದೀರಾ. ಎಲ್ಲವೂ ಸುಳ್ಳು ಎಂದು ಗರಂ ಆದರು.

# ಕೂಡಲಿ ಶೃಂಗೇರಿ ಮಠದಲ್ಲಿ ಉತ್ತರಾಧಿಕಾರಿ ಸಮಾರಂಭ



ಹುಬ್ಬಳ್ಳಿ: ಶಿವಮೊಗ್ಗ ಜಿಲ್ಲೆಯ ಕೂಡಲಿ ಶ್ರೀಮಜ್ಜಗದ್ಗುರು ಕೂಡಲಿ ಶೃಂಗೇರಿ ಮಹಾಸಂಸ್ಥಾನನಮ್ ವಿದ್ಯಾಭಿನವ ವಿದ್ಯಾರಣ್ಯ ಭಾರತೀ ಸ್ವಾಮೀಜಿಗಳ ವತಿಯಿಂದ ಬ್ರಹ್ಮಚಾರಿ ದತ್ತರಾಜ ದೇಶಪಾಂಡೆ ಅವರ ಸಂನ್ಯಾಸಪೂರ್ವಕ ಶಿಷ್ಯ ಪರಿಗ್ರಹಣ ಸಮಾರಂಭ ಅಂಗವಾಗಿ ವಿವಿಧ ಧಾರ್ಮಿಕ ಕಾರ್ಯಕ್ರಮಗಳನ್ನು ಇಂದಿನಿಂದ ಇದೇ ದಿ. 22ರ ವರೆಗೆ ಹಮ್ಮಿಕೊಳ್ಳಲಾಗಿದೆ ಎಂದು ಕೂಡಲಿ ಮಠದ ಕಾರ್ಯದರ್ಶಿ ದತ್ತಮೂರ್ತಿ ಕುಲಕರ್ಣಿ ಹೇಳಿದರು.

ನಗರದಲ್ಲಿ ಮಾತನಾಡಿದ ಅವರು, ಮೇ 18 ರಂದು ವೈಶಾಕ ಕೃಷ್ಣ ಚತುರ್ದಶಿ ಅಂಗವಾಗಿ ಬೆಳಿಗ್ಗೆ 9 ಗಂಟೆಯಿಂದ 12.30 ರ ವರೆಗೆ ಗಣಪತಿ ಪೂಜಾ, ಸಂಕಲ್ಪ, ಕಲಶಸ್ಥಾಪನೆ, ವೇದ ಪಾರಾಯಣಾದಿಗಳು, ಪಂಚಗವ್ಯ ಪ್ರಾಶನ, ಋಗ್ವೇದ, ಪವಮಾನ ಹಾಗೂ ಕೂಷ್ಮಾಂಡ ಹೋಮಗಳು ನಡೆಯುತ್ತವೆ.

ಮೇ 19 ರಂದು ಬೆಳಿಗ್ಗೆ 9 ಗಂಟೆಗೆ ವೈಶಾಖ ಕೃಷ್ಣ ಅಮಾವಾಸ್ಯೆ ವೇದ ಪಾರಾಯಣ ಹಾಗೂ ದೈವ ಋಷಿ ದಿವ್ಯ ಮನುಷ್ಯ ಶ್ರಾದ್ಧಗಳು, ಮೇ 20 ರಂದು ವೇದ ಪಾರಾಯಣ ಹಾಗೂ ಭೂತ ಪಿತೃ ಮಾತೃ ಆತ್ಮ ಶ್ರಾದ್ಧ, ಮೇ 21 ವೇದ ಪಾರಾಯಣ ಹಾಗೂ ಅನುಜ್ಞಾ ಪ್ರಾರ್ಥನೆ, ಪುಣ್ಯಾಹವಾಚನ, ವಪನ, ಸಂಕಲ್ಪ ನಡೆಯಲಿದೆ ಎಂದು ಹೇಳಿದರು.

ಮೇ 22 ರಂದು ಬೆಳಿಗ್ಗೆ 7 ಗಂಟೆಗೆ ವಿರಾಜಾ ಹೋಮ, ಪುರುಷೋತ್ತಮ ಹೋಮ, ಉಪದೇಶ, ಗುರುವಂದನ ಸೇ–ರಿದಂತೆ ಅನೇಕ ಧಾರ್ಮಿಕ ಸಮಾರಂಭ ನಡೆಯಲಿವೆ ಎಂದು ಹೇಳಿದರು.

ಮಧ್ಯಾಹ್ನ 1ಗಂಟೆಗೆ ಸಭಾ ಕಾರ್ಯಕ್ರಮದಲ್ಲಿ ಸರ್ವಜ್ಞಪೀಠ ಕಾಂಚೀಕಾಮಕೋಟಿ ಪೀಠದ ಮಜ್ಜಗದ್ಗುರು ಶಂಕರಾಚಾರ್ಯ ವಿಜಯೇಂದ್ರ ಸರಸ್ವತಿ ಸ್ವಾಮೀಜಿ, ಮಜ್ಜಗದ್ಗುರು ಶಂಕರಾಚಾರ್ಯ ಸ್ವಯಂಪ್ರಕಾಶ ಸಚ್ಚಿದಾನಂದ ಸರಸ್ವತಿ ಸ್ವಾಮೀಜಿ, ಮಜ್ಜಗದ್ಗುರು ಶಂಕರಾಚಾರ್ಯ ವಿದ್ಯಾಭಿನವ ಕೃಷ್ಣಾನಂದ ತೀರ್ಥ ಸ್ವಾಮೀಜಿ, ವಿದ್ವಾಂಸರುಗಳಾದ ರಾಜೇಶ್ವರ ಶಾಸ್ತ್ರಿಗಳು, ನಾಗೇಶ ಶಾಸ್ತ್ರಿಗಳು, ಮಧುಸೂದನ ಶಾಸ್ತ್ರಿಗಳು ಹಂಪಿಹೋಳಿ, ನಿತ್ಯಾನಂದ ದೇಸಾಯಿ, ವಿನಾಯಕ ತಾಪಸ, ರಾಮಭಟ್ಟ ಗುರ್ಲಹೊಸುರ, ಹನಮಂತಭಟ್ಟ ಗುಡಿ, ಮಹೇಶ ಜೋಶಿ, ಕೇಂದ್ರ ಸಚಿವ ಪ್ರಹ್ಲಾದ ಜೋಶಿ, ನಂದಕುಮಾರ ಸೇ–ರಿದಂತೆ ಸುಮಾರು 10 ಸಾವಿರ ಜನರು ಭಾಗವಹಿಸಲಿದ್ದಾರೆ ಎಂದು ಹೇಳಿದರು.

ಮಠದ ಮುದ್ರಧಿಕಾರಿ ನಿತ್ಯಾನಂದ ದೇಶಾಯಿ, ಕಾನೂನು ಸಲಹೆಗಾರ ಲಕ್ಷ್ಮಣ ಕುಲಕರ್ಣಿ,ಪ್ರಚಾರ ಸಮಿತಿ ಸದಸ್ಯ ಸಂಜೀವ ಜೋಶಿ, ಪವನ ಜೋಶಿ ಪತ್ರಿಕಾಗೋಷ್ಠಿಯಲ್ಲಿದ್ದರು.

# ಮಹಾರಾಷ್ಟ್ರದಲ್ಲಿ ಶಾಂತಿ ಕದಡಲು ಬಿಜೆಪಿ ಯತ್ನ: ಶಿವಸೇನಾ ಆರೋಪ

ಮುಂಬೈ: ಮಹಾರಾಷ್ಟ್ರದಲ್ಲಿ ಸಾಮಾಜಿಕ ಶಾಂತಿ ಕದಡಲು ಮತ್ತು ಮತದಾರರ ಧ್ರುವೀಕರಣಕ್ಕಾಗಿ ಗಲಭೆಗಳ ಪ್ರಯೋಗಾಲಯ ಸೃಷ್ಟಿಸಲು ಬಿಜೆಪಿ ಹಾಗೂ ಬೆಂಬಲಿಗರು ಯತ್ನಿಸುತ್ತಿದೆ ಎಂದು ಶಿವಸೇನಾ (ಉದ್ಧವ್ ಠಾಕ್ರೆ ಬಣ) ಆರೋಪಿಸಿದೆ.

ಪಕ್ಷದ ಮುಖವಾಣಿ 'ಸಾಮ್ನಾ'ದಲ್ಲಿ ಈ ಕುರಿತು ಉಲ್ಲೇಖ ಮಾಡಲಾಗಿದ್ದು, ಸರ್ಕಾರ ರಚಿಸಲು ಶಿವಸೇನಾ ಪಕ್ಷವನ್ನು ಒಡೆದಂತೆಯೇ ಸಮಾಜವನ್ನು ವಿಭಜಿಸುವ ಮೂಲಕ ಚುನಾವಣೆ ಎದುರಿಸಲು ಬಿಜೆಪಿ ಬಯಸುತ್ತಿದೆ ಎಂದು ಆರೋಪಿಸಿದೆ.

ಕಳೆದ ವರ್ಷ ಬಿಜೆಪಿ ಬೆಂಬಲದೊಂದಿಗೆ ಏಕನಾಥ ಶಿಂದೆ ಸಿಎಂ ಆಗಿದ್ದರು.

ಸಂವಿಧಾನ, ರಾಷ್ಟ್ರೀಯ ಏಕತೆ ಮತ್ತು ಧಾರ್ಮಿಕ ಸಹಬಾಳ್ವೆಯನ್ನು ಕಡೆಗಣಿಸಿ ಅಧಿಕಾರಕ್ಕಾಗಿ ಏನನ್ನೂ ಮಾಡುವವರ ಬಗ್ಗೆ ರಾಜ್ಯದ ಜನತೆ ಎಚ್ಚರ ವಹಿಸಬೇಕು ಎಂದು ಹೇಳಿದೆ.

ಅಹ್ಮದ್‌ನಗರ ಜಿಲ್ಲೆಯ ಅಕೋಲಾ ನಗರ ಮತ್ತು ಶೆವ್‌ಗಾಂವ್ ಗ್ರಾಮದಲ್ಲಿ ನಡೆದ ಕೋಮು ಘರ್ಷಣೆಯಲ್ಲಿ ಒಬ್ಬರು ಮೃತಪಟ್ಟಿದ್ದು, 13 ಮಂದಿ ಗಾಯಗೊಂಡಿದ್ದರು.

ಈ ಬಗ್ಗೆಯೂ ಉಲ್ಲೇಖ ಮಾಡಲಾಗಿದ್ದು, ಕೋಮು ಸಂಘರ್ಷ ಹರಡುವ ಮೂಲಕ ಮತದಾರರ ಧ್ರುವೀಕರಣಕ್ಕೆ ಯತ್ನಿಸುತ್ತಿದೆ ಎಂದು ಆರೋಪಿಸಲಾಗಿದೆ.

# ಶಿವಮೊಗ್ಗ ವಿದ್ಯಾರ್ಥಿನಿ ಕಿಡ್ನಾಪ್ ಪ್ರಕರಣಕ್ಕೆ ಬಿಗ್ ಟ್ವಿಸ್ಟ್

## ಮತಾಂತರವಾಗಲು ಕಥೆ ಕಟ್ಟಿದ್ದ ಯುವತಿ ಪೋಷಕರ ಸುಪರ್ದಿಗೆ

ಶಿವಮೊಗ್ಗ: ಉನ್ನತ ವ್ಯಾಸಾಂಗ ಮಾಡುತ್ತಿದ್ದ ಯುವತಿಯೊಬ್ಬಳನ್ನು ಕಿಡ್ನಾಪ್ ಮಾಡಿ ಹಣಕ್ಕೆ ಬೇಡಿಕೆ ಇಡಲಾಗಿದೆ ಎನ್ನಲಾಗಿದ್ದ ಪ್ರಕರಣಕ್ಕೆ ಬಿಗ್ ಟ್ವಿಸ್ಟ್ ಸಿಕ್ಕಿದೆ. ಪೊಲೀಸರು ಯುವತಿಯನ್ನು ಪತ್ತೆ ಹಚ್ಚಿದ್ದು, ಆಕೆಯನ್ನು ಯಾರು ಕಿಡ್ನಾಪ್ ಮಾಡಿಲ್ಲ ಎನ್ನುವುದು ಬಯಲಾಗಿದೆ.

ವಿದ್ಯಾರ್ಥಿನಿ ಬೇರೆ ಧರ್ಮಕ್ಕೆ ಮತಾಂತರಗೊಳ್ಳಲು ಹೋಗಿ, ಕಿಡ್ನಾಪ್ ಕಥೆ ಸೃಷ್ಟಿಸಿದ್ದಾಳೆ ಎಂದು ತಿಳಿದುಬಂದಿದೆ. ಆಕೆ ಕ್ರಿಶ್ಚಿಯನ್ ಧರ್ಮಕ್ಕೆಮತಾಂತರವಾಗಲು ಪ್ರಯತ್ನಿಸಿದ್ದಳು. ಸದ್ಯ ಯುವತಿಯನ್ನು ರಕ್ಷಿಸಿರುವ ಪೊಲೀಸರು ಪೋಷಕರ ಸುಪರ್ದಿಗೆ ಒಪ್ಪಿಸಿದ್ದಾರೆ.

ಕ್ರಿಶ್ಚಿಯನ್ ಶಾಲೆಯಲ್ಲಿ ವ್ಯಾಸಂಗ ಮಾಡುತ್ತಿರುವ ಸಮಯದಲ್ಲಿ ಕ್ರೈಸ್ತ ಸಂನ್ಯಾಸಿಗಳ ( ಮಿಷನರಿ) ಪ್ರಭಾವಕ್ಕೆ ಒಳಗಾಗಿ, ತಾನೂ ಅವರಂತೆ ಸಮಾಜ ಸೇವೆ ಮಾಡಬೇಕೆಂದುಕೊಂಡಿದ್ದ ಚನ್ನಗಿ–ರಿಯ ಯುವತಿ ನಾಲ್ಕು ವರ್ಷಗಳ ನಂತರ ಮನೆ ಬಿಟ್ಟು ಮುಂಬೈಗೆ ತೆರಳಲು ಸಿದ್ಧವಾಗಿದ್ದಳು. ಕಿಡ್ನಾಪ್ ಆಗಿರೋದಾಗಿ ತಂದೆಗೆ ಮೆಸೇಜ್ ಕಳಿಸಿ ಒತ್ತೆ ಹಣ ಇಪ್ಪತ್ತು ಲಕ್ಷಕ್ಕೆ ಡಿಮ್ಯಾಂಡ್ ಮಾಡಿದ್ದಳು. ಆದ–'ರೆ ಶಿವಮೊಗ್ಗ ಪೊಲೀಸರು ಈ ಪ್ರಕರಣವನ್ನ ಒಂದೇ ದಿನದಲ್ಲಿ ಬೇಧಿಸಿದ್ದಾರೆ.

ಕೇವಲ ಇಪ್ಪತ್ತು ವರ್ಷದ ಯುವತಿ ಮೂಲತಃ ದಾವಣಗೆರೆಯ ಚನ್ನಗಿ–ರಿಯ ನಲ್ಲೂರು ಗ್ರಾಮದವಳು. ಚನ್ನಗಿರಿಯ ನವಚೇತನ ಕ್ರಿಶ್ಚಿಯನ್ ಶಾಲೆಯಲ್ಲಿ ಪ್ರೌಢಶಾಲೆ ವ್ಯಾಸಂಗ ಮಾಡಿದ್ದಳು. ಆಗ ಸಮಾಜ ಸೇವೆಯಲ್ಲಿ ನಿರತರಾಗಿದ್ದ ಕ್ರಿಶ್ಚಿಯನ್ ಮಿಷನರಿಗಳನ್ನ ನೋಡಿ ಪ್ರಭಾವಿತಳಾಗಿದ್ದಳು. ಶಾಲೆಯಲ್ಲಿ ಉತ್ತಮ ಅಂಕಗಳೊಂದಿಗೆ ಶಿವಮೊಗ್ಗದ ಆದಿಚುಂಚನಗಿ–ರಿಯಲ್ಲಿ ಪಿಯುಸಿ ವ್ಯಾಸಂಗ ಮಾಡಿ ಕೋವಿಡ್ ಸಮಯದಲ್ಲಿ ಮೆಡಿಕಲ್ ಸೀಟ್ ಸಿಗದ ಕಾರಣ ಶಿವಮೊಗ್ಗ ನಗರದ ನಂಜಪ್ಪ ಆಸ್ಪತ್ರೆಯಲ್ಲಿ ಪಿಸಿಯೋ ಥೆರಪಿ ಕೋರ್ಸ್‌ಗೆ ಸೇರಿದ್ದಳು.



ನರ್ಸಿಂಗ್ ಕಾಲೇಜಿನಲ್ಲೂ ಕೇರಳ ಮೂಲದ ಕ್ರಿಶ್ಚಿಯನ್ ವಿದ್ಯಾರ್ಥಿನಿಯರ ಸಂಪರ್ಕದಿಂದ ತೀವ್ರ ಪ್ರಭಾವಿತಳಾಗಿದ್ದಳು. ಇದೇ ಕಾರಣಕ್ಕೆ ತಾನೂ ಮುಂಬೈ ಹೋಗಿ ಮತಾಂತರಗೊಳ್ಳಲು ನಿರ್ಧ–ರಿಸಿದ್ದಳೆಂದು ತನಿಖೆಯಲ್ಲಿ ಬೆಳಕಿಗೆ ಬಂದಿದೆ. ಕಾಲೇಜಿನಲ್ಲಿ ಕೆಲ ಕೇರಳದ ಕ್ರಿಶ್ಚಿಯನ್ ಸ್ನೇಹಿತೆಯರ ಜೊತೆ ಸ್ನೇಹಕ್ಕೆ ಬಂದ ನಂತರ ಧರ್ಮದ ಮೇಲಿನ ವ್ಯಾಮೋಹ ಇನ್ನಷ್ಟು ಹೆಚ್ಚಾಗಿತ್ತು.

ದಿನಾಂಕ 14ರಂದು ಮನೆಯಿಂದ ಹೊರಟು ಮುಂಬೈ ತಲುಪಿ ಅಲ್ಲಿ ಕ್ಯಾಥೋಲಿಕ್ ಚರ್ಚ್‌ವೊಂದರಲ್ಲಿ ದೀಕ್ಷೆ ಪಡೆದು ತಾನೂ ಕೂಡ ಸಂನ್ಯಾಸಿಯಾಗಲು ಆಕೆ ಬಯಸಿದ್ದಳು. ಈ ಕಾರಣ–ಕ್ಕೆ ಶಿವಮೊಗ್ಗದಿಂದ ನೇರವಾಗಿ ಮುಂಬೈಗೆ ಬಸ್ ಟಿಕೆಟ್ ಸಿಗದ ಕಾರಣ ಹುಬ್ಬಳ್ಳಿಗೆ ಬಂದು ಅಲ್ಲಿಂದ ವಿಆರ್‌ಎಲ್ ಬಸ್ ಮೂಲಕ ಮುಂಬೈ ಸೇರುವ ಯೋಚನೆಯಲ್ಲಿದ್ದಳು.

ಆದರೆ ಮುಂಬೈ ತಲುಪಿದ ಮೇಲೆ ಅಲ್ಲಿರಲು ಹಣ ಇರದ ಕಾರಣ, ಆಕೆಗೆ ಹಣದ ಭರವಸೆ ಯಾರೂ ನೀಡದ ಕಾರಣ ತನ್ನ ತಂದೆಗೆ ಟೆಕ್ಸ್ಟ್ ಮೆಸೇಜ್ ಮಾಡಿ ಕಿಡ್ನಾಪ್ ಆಗಿದ್ದಾಳೆ.

ಒತ್ತೆ ಹಣ ಇಪ್ಪತ್ತು ಲಕ್ಷ ನೀಡಿದರೆ ಮಾತ್ರ ಬಿಡಲಾಗುತ್ತೆ. ಪೊಲೀಸರಿಗೆ ಮಾಹಿತಿ ನೀಡಿದರೆ ಡೆಡ್‌ಬಾಡಿ ಸಿಗುತ್ತೆ ಎಂದು ಹೆದರಿಸಿದ್ದಳು.

ಯಾರೋ ಅನಾಮಧೇಯ ಕಿಡ್ನಾಪರ್ ಇರಬೇಕೆಂದುಕೊಂಡ ಆಕೆಯ ಪೋಷಕರು ಶಿವಮೊಗ್ಗದ ಜಯನಗರ ಪೊಲೀಸ್ ಠಾಣೆಯಲ್ಲಿ ದೂರು ದಾಖಲಿಸಿದ್ದರು. ಪ್ರಕರಣ ದಾಖಲಾದ ನಂತರ ಶಿವಮೊಗ್ಗ ಎಸ್‌ಪಿ ಮಿಥುನ್ ಕುಮಾರ್ ಜಿಕೆ, ರೌಡಿ ನಿಗ್ರಹ ದಳದ ವಿಶೇಷ ತಂಡವನ್ನ ರಚಿಸಿ ಯುವತಿಯ ಜಾಡು ಹಿಡಿಯಲು ಆದ–'ಶಿಸಿದರು. ಈ ಮಧ್ಯೆ ಆಕೆ ತನ್ನ ಅಕೌಂಟಿನಿಂದ ಐದು ಸಾವಿರ ರೂಪಾಯಿ ಹಣವನ್ನ ಎಟಿ–ಎಂನಿಂದ ವಿತ್‌ಡ್ರಾ ಮಾಡಿರೋದು ಅನುಮಾನಕ್ಕೆ ಕಾರಣವಾಗಿತ್ತು.

ಇವೆಲ್ಲಾ ಸಾಕ್ಷ್ಯಗಳ ಮೂಲಕ ಮೊಬೈಲ್ ಸಿಗ್ನಲ್ ಆಧಾರಿಸಿ ಹುಬ್ಬಳಿ ಬಸ್ ನಿಲ್ದಾಣದಲ್ಲಿ ಯುವತಿಯನ್ನು ಪೊಲೀಸರು ಪತ್ತೆಹಚ್ಚಿ ವಾಪಸ್ ಶಿವಮೊಗ್ಗಕ್ಕೆ ಕರೆತಂದಿದ್ದಾರೆ. ಹೀಗೆ ಎರಡು ದಿನಗಳಿಂದ ಶಿವಮೊಗ್ಗದಲ್ಲಿ ಕುತೂಹಲ ಮೂಡಿಸಿದ್ದ ಕಿಡ್ನಾಪ್ ಪ್ರಕರಣವನ್ನ ಪೊಲೀಸರು ಬೇಧಿಸಿದ್ದಾರೆ. ಯುವತಿಯನ್ನ ಆಪ್ತ ಸಮಾಲೋಚನೆಗೆ ಕಳುಹಿಸಿ ತಿಳಿ ಹೇಳಿ ಪೋಷಕರೊಂದಿಗೆ ಕಳಿಸಿಕೊಟ್ಟಿದ್ದಾರೆ.

## ಯಲಬುರ್ಗಾ: ಚುನಾವಣಾ ಅಭ್ಯರ್ಥಿಗಳು ಲೆಕ್ಕ ಸಮನ್ವಯ ಮಾಡಿಕೊಳ್ಳಿ

ಕೊಪ್ಪಳ: ಕರ್ನಾಟಕ ವಿಧಾನಸಭೆ ಸಾರ್ವತ್ರಿಕ ಚುನಾವಣೆ–2023ರ ಹಿನ್ನಲೆಯಲ್ಲಿ ಯಲಬುರ್ಗಾ ಮತಕ್ಷೇತ್ರದ ಚುನಾವಣಾ ಅಭ್ಯರ್ಥಿಗಳು ಲೆಕ್ಕ ಸಮನ್ವಯ ಮಾಡಿಕೊಳ್ಳುವಂತೆ 63–ಯಲಬುರ್ಗಾ ವಿಧಾನಸಭಾ ಕ್ಷೇತ್ರ ಚುನಾವಣಾಧಿಕಾರಿಗಳು ತಿಳಿಸಿದ್ದಾರೆ.

ಜನತಾ ಪ್ರಾತಿನಿಧ್ಯ 1951ರ 77 ರಲ್ಲಿ ವಿವರಿಸಲಾದಂತೆ, ವಿಧಾನಸಭೆ ಸಾರ್ವತ್ರಿಕ ಚುನಾವಣೆ –2023ರ ಚುನಾವಣೆಯಲ್ಲಿ ಸ್ಪರ್ಧಾಕಣದಲ್ಲಿರುವ ಅಭ್ಯರ್ಥಿಗಳು ಫಲಿತಾಂಶ ಘೋಷಣೆಯ ದಿನಾಂಕದ 26ನೇ ದಿನದಂದು ಅಭ್ಯರ್ಥಿಗಳು ಚುನಾವಣಾ ವೆಚ್ಚದ ಅಂತಿಮ ಲೆಕ್ಕಪತ್ರಗಳನ್ನು ನಿಗಧಿತ ನಮೂನೆಗಳಲ್ಲಿ (ಈಗಾಗಲೆ ಉಲ್ಲೇಖಿತ ಪತ್ರದೊಂದಿಗೆ ನೀಡಿರುವ) ಅಫಿಡಾವಿಟ್ ಸೇ–ರಿದಂತೆ ಭಾಗ 1 ರಿಂದ 4, ಅನೂಸೂಚಿಗಳು 1–11 ಮತ್ತು ಎ.ಬಿ.ಸಿ ವಹಿಗಳನ್ನು ಭರ್ತಿಮಾಡಿ ಮೂಲ ಅಧಿಕೃತ ಓಚರಗಳನ್ನು ದಿನಾಂಕ ಜೂನ್ 08 ರಂದು ನಡೆಯುವ ಅಂತಿಮ ಲೆಕ್ಕಪತ್ರ ಸಮನ್ವಯ ಸಭೆಯಲ್ಲಿ ಅಭ್ಯರ್ಥಿಯಾಗಲಿ ಅಥವಾ ಅಧಿಕೃತ ವೆಚ್ಚದ ಏಜೆಂಟರ ಮೂಲಕ ಮುದ್ದಾಂ ಒಂದು ಪ್ರತಿ ಝರಾಕ್ಸ್ ಹಾಗೂ ಮೂಲ ಪ್ರತಿಯನ್ನು ಸಲ್ಲಿಸುವಂತೆ ಅಂತಿಮ ಲೆಕ್ಕಪತ್ರಗಳ ಸಮನ್ವಯ ಸಭೆಗೆ ಹಾಜರಾಗುವ ಪೂರ್ವದಲ್ಲಿ ಸಂಬಂಧಿಸಿದ ಚುನಾವಣಾ ಅಭ್ಯರ್ಥಿ ಅಧಿಕೃತ ವೆಚ್ಚದ ಏಜೆಂಟರು ಮೇ 24 ರಂದು ಚುನಾವಣಾಧಿಕಾರಿಗಳು 63–ಯಲಬುರ್ಗಾ ವಿಧಾನಸಭಾ ಕ್ಷೇತ್ರ, ಇವರ ಕಚೇರಿಗೆ ಹಾಜರಾಗಿ ಲೆಕ್ಕ ಸಮನ್ವಯಕ್ಕೆ ಪೂರ್ವ ಪರಿಶೀಲನಾ ಕಾರ್ಯವನ್ನು ಅಧಿಕೃತ ಚುನಾವಣಾ ವೆಚ್ಚದ ನಮೂನೆಗಳೊಂದಿಗೆ ಮೂಲ ಓಚರಗಳೊಂದಿಗೆ ಲೆಕ್ಕ ಸಮನ್ವಯ ಮಾಡಿಕೊಳ್ಳಲು ಯಲಬುರ್ಗಾ ವಿಧಾನಸಭಾ ಕ್ಷೇತ್ರ ಚುನಾವಣಾಧಿಕಾರಿಗಳ ಕಾರ್ಯಾಲಯದ ಪ್ರಕಟಣೆ ತಿಳಿಸಿದೆ.

# ಲಿಂಗಾಯತ ಮಠಗಳಲ್ಲಿ ಲಿಂಗ, ವಿಭೂತಿ ಕಣ್ಮರೆಯಾಗಿವೆ: ಚಿಂತಕ ಪ್ರೊ.ಲಂಗೋಟಿ ವಿಷಾದ

ಮುದ್ದೇಬಿಹಾಳ: ಲಿಂಗಾಯತ ಮಠಗಳಲ್ಲಿ ಇರಬೇಕಾದ ಇಷ್ಟಲಿಂಗ, ವಿಭೂತಿ, ರುದ್ರಾಕ್ಷಿಗಳೇ ಕಣ್ಮರೆಯಾಗಿವೆ, ಮಠಗಳ ಟ್ರೆಜೋರಿಗಳಲ್ಲಿ ಬೆಳ್ಳಿ, ಬಂಗಾರ ತುಂಬಿಕೊಂಡು ತನ್ನ ಮೂಲ ಆಶಯಗಳನ್ನು ಲಿಂಗಾಯತ ಮಠಗಳು ಮರೆತಿವೆ ಎಂದು ಇಲಕಲ್ಲದ ಶರಣ ಸಿದ್ಧಾಂತ ವಿದ್ಯಾಪೀಠದ ಸಂಚಾಲಕ ಪ್ರೊ.ಸಿದ್ದಣ್ಣ ಲಂಗೋಟಿ ಹೇಳಿದರು. ಅವರು ಮಂಗಳವಾರ ಸಂಜೆ ಪಟ್ಟಣದ ಎಂ.ಜಿ.ವಿ.ಸಿ ಮಹಾವಿದ್ಯಾಲಯದಲ್ಲಿ ಇಲಕಲ್ಲ ಶ್ರೀ ವಿಜಯ ಮಹಾಂತೇಶ್ವರ ಸಂಸ್ಥಾನ ಮಠದ ಶರಣ ಸಿದ್ಧಾಂತ ವಿದ್ಯಾಪೀಠದ ಆಶ್ರಯದಲ್ಲಿ ಹಮ್ಮಿಕೊಂಡಿರುವ ನಾಲ್ಕು ದಿನಗಳ " 52 ನೇ ಶಿವಾನುಭವ ತರಬೇತಿ ಶಿಬಿರದಲ್ಲಿ ಮೊದಲ ದಿನದ ಅನುಭಾವ ನೀಡುತ್ತ



ಮಾತನಾಡಿದರು. ಶಿವಾನುಭವ ಗೋಷ್ಠಿಯ ಶಿಬಿರಗಳು ಭಕ್ತರನ್ನು ಸದ್ಭಕ್ತರನ್ನಾಗಿ ರೂಪಿಸುತ್ತವೆ. ನಮ್ಮಲ್ಲಿ ಭಾವ, ಅರಿವು, ಆಚಾರಗಳ ಬಗ್ಗೆ ಹೆಚ್ಚಿನ ಜ್ಞಾನ ಮೂಡಿಸುತ್ತವೆ. ವಚನಗಳಲ್ಲಿ ಸಮಾಜವನ್ನು ತಿದ್ದುವ, ಸರಿದಾರಿಗೆ ತರುವ, ಸರ್ವರೂ ಸನ್ಮಾರ್ಗದಲ್ಲಿ ನಡೆಯುವಂತೆ ಮಾಡುವ ದೊಡ್ಡದಾದ ಜ್ಞಾನದ ನಿಧಿ ಅಡಗಿದೆ. ಜಗತ್ತಿನ 50 ಭಾಷೆಗಳಲ್ಲಿ ವಚನಗಳು ಅನುವಾದ ವಾಗುತ್ತಿರುವುದು ಹೆಮ್ಮೆಯಾಗುತ್ತದೆ. ಶರಣರ ಕಾಲದ ಮುಂಚೆ ಇದ್ದ ವ್ಯವಸ್ಥೆಯಲ್ಲಿ ಭಯದ ವಾತಾವರಣವಿತ್ತು. ಆ ಭಯವನ್ನು ಶರಣರು ವಚನಗಳ ಮೂಲಕ ದೂರ ಮಾಡಿದರು. ಶರಣರ ವಚನಗಳನ್ನು ಕೇವಲ ಬೋಧನೆಗೆ ಸಿಮೀತಗೊಳಿಸದೇ, ಅಥಣಿಯ ಶಿವಯೋಗಿಗಳು, ಇಲಕಲ್ಲದ ಚಿತ್ತರಗಿ ಮಠದ ಡಾ. ಮಹಾಂತಪ್ಪನವರು, ಧಾರವಾಡದ ಮುರುಘಾಮಠದ ಮೃತ್ಯುಂ–ಜಯ ಅಪ್ಪನವರು ಆಚರಣೆಗೆ ತಂದಿದ್ದಾರೆ ಎಂದವರು ಹೇಳಿದರು.

ಗಣ್ಯ ವರ್ತಕರಾದ ಬಸವರಾಜ ಮೋಟಗಿ ಗೋಷ್ಠಿಯನ್ನು ಉದ್ಘಾಟಿಸಿದರು. ಇದಕ್ಕೂ ಮುಂಚೆ ಮಹಾವಿದ್ಯಾಲಯದ ಆವರಣದಲ್ಲಿ ಷಟ್ ಸ್ಥಲ ಧ್ವಜಾರೋಹಣವನ್ನು ಸಂಗೀತಾ ಅರವಿಂದ ಭೋಸಲೆ ನೆರವೇರಿಸಿದರು.

ದಿವ ಸಾನಿಧ್ಯ ವಹಿಸಿದ್ದ ಸಿಂದಗಿಯ ಡಾ.ಪ್ರಭು ಸಾರಂಗದೇವ ಶಿವಾಚಾರ್ಯರು ಮಾತನಾಡಿ, ಸರಳ, ಸಂತೃಪ್ತಿಯ ಬದುಕಿಗೆ ಬೇಕಾದ ಶರಣರ ವಚನಗಳ ಅನುಷ್ಠಾನವನ್ನು ನಾವು ಮರೆಯುತ್ತ ನಡೆದಿದ್ದೇವೆ, ಅದನ್ನು ನೆನಪಿಸುವುದೇ ಶಿವಾನುಭವ ಗೋಷ್ಠಿಯ ಉದ್ದೇಶವಾಗಿದೆ. ಬದಲಾಗುತ್ತಿರುವ ದಿನಮಾನಕ್ಕೆ ತಕ್ಕಂತೆ ಯುವಕರು ಶರಣ–ರ ವಚನಗಳನ್ನು ಕಲಿಯದೇ ಹಾಳಾಗುತ್ತಿದ್ದಾರೆ ಎಂದವರು ಹೇಳಿದರು.

ಅಧ್ಯಕ್ಷತೆ ವಹಿಸಿದ್ದ ಎಸ್.ಜಿ.ವಿ.ಸಿ.ಟ್ರಸ್ಟ ಅಧ್ಯಕ್ಷ ಡಾ.ಸತೀಶ ಜಿಗಜಿನ್ನಿ ಮಾತನಾಡಿದರು. ಸಭೆಯಲ್ಲಿ ಇಂಗಳೇಶ್ವರ ವಚನ ಶಿಲಾ ಮಂಟಪದ ಚನ್ನಬಸವ ಸ್ವಾಮೀಜಿಗಳು, ತಂಗಡಗಿಯ ಅನ್ನದಾನಿ ಭಾರತಿ ಸ್ವಾಮಿಗಳು ಮಾತನಾಡಿದರು. ವೇದಿಕೆಯಲ್ಲಿ ಇಲಕಲ್ಲದ ಚಿತ್ತರಗಿ ಸಂಸ್ಥಾನಮಠದ ಗುರು ಮಹಾಂತ ಸ್ವಾಮೀಜಿಗಳು, ಶಿರೂರದ ಡಾ.ಬಸವಲಿಂಗ ಸ್ವಾಮೀಜಿಗಳು, ಲಿಂಗಸೂರದ ಅನುಭವ ಮಂಟಪದ ಸಿದ್ದಲಿಂಗ ಸ್ವಾಮಿಗಳು, ಮನಗೂಳಿ ವೀರತೇಶಾನಂದ ಸ್ವಾಮಿಗಳು, ಮಹಾಂತಪ್ಪ ನಾವದಗಿ, ವೀರುಪಾಕ್ಷಪ್ಪ ತಡಸದ, ಡಾ. ಎಸ್.ಬಿ.ನಾಗೂರ, ಚನ್ನಪ್ಪ ಕಂಠಿ, ಸಿದ್ದಯ್ಯ ಕಲ್ಯಾಣಮಠ, ಸಂಗಣ್ಣ ಚಿನಿವಾರ, ಬಸವರಾಜ ನಾಲತವಾಡ ಮತ್ತಿತರರು ಇದ್ದರು.

# ಜಮೀರ್‌ಖಾನ್‌ಗೆ ಡಿಸಿಎಂ, ನಾಡಗೌಡರಿಗೆ ಮಂತ್ರಿ ಸ್ಥಾನ ನೀಡಿ

ತಾಳಿಕೋಟೆ: ಮುಂಬರುವ ಕಾಂಗ್ರೆಸ್ ಸರಕಾರದಲ್ಲಿ ಸಚಿವ ಸಂಪುಟದಲ್ಲಿ ಮುಸ್ಲಿಂ ಸಮಾಜಕ್ಕೆ ಪ್ರಾತಿನಿಧ್ಯ ಕಲ್ಪಿಸಲು ಶಾಸಕ ಜಮೀರ್‌ಅಹ್ಮದ್ ಖಾನ್ ಅವರಿಗೆ ಡಿಸಿಎಂ ಹುದ್ದೆ, ಮುದ್ದೇಬಿಹಾಳ ಮತಕ್ಷೇತ್ರದ ಶಾಸಕ ಸಿ.ಎಸ್.ನಾಡಗೌಡ(ಅಪ್ಪಾಜಿ) ಅವ–ರಿಗೆ ಕ್ಯಾಬಿನೇಟ್ ದರ್ಜೆಯ ಮಂತ್ರಿ ಸ್ಥಾನ ನೀಡುವಂತೆ ತಾಳಿಕೋಟೆ ಮುಸ್ಲಿಂ ಸಮಾಜದ ಪರವಾಗಿ ಪಕ್ಷದ ವರಿಷ್ಠ–ರಿಗೆ ಒತ್ತಾಯಿಸುತ್ತಿದ್ದೇವೆಂದು ಜಿಲ್ಲಾ ವಕ್ಫ ಸಮಿತಿ ಮಾಜಿ ಉಪಾಧ್ಯಕ್ಷ ಸೈಯದಶಕೀಲಅಹ್ಮದ ಖಾಜಿ ಅವರು ಹೇಳಿದರು.



ಈ ಕುರಿತು ಬುಧವಾರರಂದು ಪಟ್ಟಣದ ಪ್ರವಾಸಿ ಮಂದಿರದಲ್ಲಿ ಕರೆಯಲಾದ ಪತ್ರಿಕಾಗೋಷ್ಠಿಯಲ್ಲಿ ಮಾತನಾಡುತ್ತಿದ್ದ ಅವರು ಶಾಸಕ ಸಿ.ಎಸ್.ನಾಡಗೌಡ(ಅಪ್ಪಾಜಿ) ಅವರು 6 ಭಾರಿ ಶಾಸಕರಾಗಿ ಆಯ್ಕೆಯಾಗಿದ್ದಾರೆ ಕಾಂಗ್ರೆಸ್ ಪಕ್ಷದ ಮುಂಚೂಣಿ ನಾಯಕರಾಗಿ ಪಕ್ಷ ಸಂಘಟನೆಗೆ ಶ್ರಮಿಸಿದಂತಹ ವ್ಯಕ್ತಿಯಾಗಿದ್ದಾರೆ ಎಲ್ಲ ಸಮಾಜದವರನ್ನು ಒಗ್ಗೂಡಿಸಿಕೊಂಡು ಹೋಗುವಂತಹ ವ್ಯಕ್ತಿಯಾಗಿದ್ದಾರೆ ಮತ್ತು ಅನುಭವಿ ರಾಜಕಾರಣಿಯಾಗಿದ್ದಾರೆ ಅವರಿಗೆ ಈ ಭಾರಿ ಸರ್ಕಾರದಲ್ಲಿ ಕ್ಯಾಬಿನೆಟ್ ದರ್ಜೆಯ ಮಂತ್ರಿ ಸ್ಥಾನ ಮಾನ ನೀಡಬೇಕು ಮತ್ತು ರಾಜ್ಯದಲ್ಲಿ ಮುಸ್ಲಿಂ ಸಮುದಾಯ ಸತತವಾಗಿ ಕಾಂಗ್ರೆಸ್ ಪಕ್ಷವನ್ನು ಬೆಂಬಲಿಸುತ್ತ ಬಂದಿದೆ. ಆದರೆ ಮುಸ್ಲಿಂ ಜನಾಂಗಕ್ಕೆ ಈವರೆಗೂ ಸೂಕ್ತ ಪ್ರಾತಿನಿಧ್ಯ ಹಿಂದಿನವ–ರಿಂದ ಸಿಕ್ಕಿಲ್ಲ. ಈ ಹಿನ್ನೆಲೆಯಲ್ಲಿ ಜಮೀರ್‌ಅಹ್ಮದ್ ಖಾನ್ ಅವರಿಗೆ ಉಪ ಮುಖ್ಯಮಂತ್ರಿ ಮಾಡಬೇಕೆಂದು ಒತ್ತಾಯಿಸುತ್ತೇವೆಂದರು.

ಇನ್ನೋರ್ವ ದಿ.ತಾಳಿಕೋಟಿ ಮುಸ್ಲಿ ಕೋ–ಆಪ್ ಬ್ಯಾಂಕ್ ಅಧ್ಯಕ್ಷ ಇಬ್ರಾಹಿಂ ಮನ್ಸೂರ ಅವರು ಮಾತನಾಡಿ ಮುದ್ದೇಬಿಹಾಳ ವಿಧಾನಸಭಾ ಮತಕ್ಷೇತ್ರದ ಸಜ್ಜನ ರಾಜಕಾರಣಿ, 6ನೇ ಬಾರಿ ಶಾಸಕರಾಗಿ ಆಯ್ಕೆಯಾಗಿರುವ ನಾಡಗೌಡರಿಗೆ ಕಾಂಗ್ರೆಸ್ ಪಕ್ಷದ ವ–ರಿಷ್ಠರು ಸಚಿವ ಸಂಪುಟದಲ್ಲಿ ಸ್ಥಾನಮಾನ ಕಲ್ಪಿಸಬೇಕು.

ಈ ಹಿಂದೆ 1989ರಲ್ಲಿ ಕಾರ್ಮಿಕ ಸಚಿವರಾಗಿ ಕಾರ್ಯನಿರ್ವಹಿಸಿದ ಅನುಭವ ವಿದೆ ಮತ್ತು ಕಳೆದ ಭಾರಿ ಕಾಂಗ್ರೆಸ್ ಸರ್ಕಾರದಲ್ಲಿ ದೇಹಲಿ ವಿಶೇಷ ಪ್ರತಿನಿಧಿಯಾಗಿ ಕೆಲಸ ಮಾಡಿದ್ದಾರೆ ಸುಮಾರು 40 ವರ್ಷಗಳ ಕಾಲ ಕಾಂಗ್ರೆಸ್ ಪಕ್ಷದಲ್ಲಿ ದುಡಿದಿರುವ ಶಾಸಕ ನಾಡಗೌಡ(ಅಪ್ಪಾಜಿ) ಅವರಿಗೆ ಮಂತ್ರಿ ಸ್ಥಾನ ನೀಡಬೇಕು ಮತ್ತು ರಾಜ್ಯದಲ್ಲಿ ಮುಸ್ಲಿಂ ಸಮಾಜವು ಸ್ವಾತಂತ್ರ್ಯದ ನಂತರದಿಂದಲೂ ಕಾಂಗ್ರೆಸ್ ಪಕ್ಷವನ್ನು ಬೆಂಬಲಿಸುತ್ತಾ ಬಂದ ಸಮಾಜವಾಗಿದೆ ಆದರೆ ಇಲ್ಲಿಯವರೆಗೆ ಮುಸ್ಲಿಂ ಸಮಾಜದ ಶಾಸಕರಿಗೆ ಯಾವುದೇ ರೀತಿಯ ಸ್ಥಾನ ಮಾನಗಳು ಸಿಕ್ಕಿಲ್ಲಾ ಈ ಭಾರಿಯ ಕಾಂಗ್ರೆಸ್ ಸರ್ಕಾರದಲ್ಲಿ ಜಮೀರ್‌ಅಹ್ಮದ ಖಾನ್ ಅವರಿಗೆ ಉಪಮುಖ್ಯಮಂತ್ರಿ ಮಾಡಬೇಕೆಂದು ಒತ್ತಾಯಿಸುತ್ತಿದ್ದೇವೆ ಈ ಕುರಿತು ಮತಕ್ಷೇತ್ರದ ಮುಸ್ಲಿಂ ಮುಖಂಡರುಗಳು ಶೀಘ್ರದಲ್ಲಿಯೇ ನಿಯೋಗದೊಂದಿಗೆ ಕಾಂಗ್ರೆಸ್ ವರಿಷ್ಠರನ್ನು ಬೆಟ್ಟಿಯಾಗಿ ಒತ್ತಾಯಿಸಲಿದ್ದೇವೆಂದರು.

ಈ ಸಮಯದಲ್ಲಿ ಬ್ಲಾಕ್ ಕಾಂಗ್ರೆಸ್ ಅಧ್ಯಕ್ಷ ಎಂ.ಕೆ.ಚೋರಗಸ್ತಿ, ಅಬ್ದುಲ್‌ಗನಿಸಾಬ ಲಾಹೋ–ರಿ,ಅಲ್ಪ ಸಂಖ್ಯಾತ ತಾಲೂಕಾ ಅಧ್ಯಕ್ಷ ಶಬ್ಬೀರ ಲಾಹೋರಿ, ಎ.ಡಿ.ಏಕೀನ್, ಅಬ್ದುಲ್‌ಸತ್ತಾರ ಅವಟಿ, ಹಸನಸಾಬ ಮನಗೂಳಿ, ಮಹಿಬೂಬಶಾ ಮಕಾಂದಾರ, ಅಬ್ದುಲ್‌ರಜಾಕ ಮಮದಾಪೂರ, ಹಸನಸಾಬ ಮನಗೂಳಿ, ಸದ್ದಾಂ ಹೊನ್ನುಟಗಿ, ರಫೀಕ್ ಬೇಪಾರಿ, ನಯೀಮ ಮಮದಾಪೂರ, ಖಾಲಿದ ಅವಟಿ, ಮೊದಲಾದವರು ಇದ್ದರು.

## ಉತ್ತರ ಕರ್ನಾಟಕದವರಿಗೆ ಉಪಮುಖ್ಯಮಂತ್ರಿ ಸ್ಥಾನ ನೀಡಲಿ



ರಾಯಚೂರು: ಮುಖ್ಯಮಂತ್ರಿ ಆಯ್ಕೆ ವಿಚಾರ ಕಗ್ಗಂಟಾಗಿರುವ ಬೆನ್ನಲ್ಲೇ ಉಪಮುಖ್ಯಮಂತ್ರಿ, ಸಚಿವ ಸ್ಥಾನಕ್ಕಾಗಿಯೂ ಲಾಭಿ ಆರಂಭವಾಗಿದೆ. ಉತ್ತರ ಕರ್ನಾಟಕ ಭಾಗದವರನ್ನು ಡಿಸಿಎಂ ಮಾಡಲಿ ಎಂದು ಶಾಂತಮಲ್ಲ ಶಿವಾಚಾರ್ಯ ಸ್ವಾಮೀಜಿ ಒತ್ತಾಯಿಸಿದ್ದಾರೆ.

ರಾಯಚೂರಿನಲ್ಲಿ ಮಾತನಾಡಿದ ಸ್ವಾಮೀಜಿ, ರಾಜ್ಯದ ಜನರು ಕಾಂಗ್ರೆಸ್ ಪಕ್ಷಕ್ಕೆ ಸ್ಪಷ್ಟ ಬಹುಮತ ನೀಡಿದ್ದಾರೆ. ಕಾಂಗ್ರೆಸ್ ಪಕ್ಷ ಮುಂದಿನ 5 ವರ್ಷ ಉತ್ತಮ ಆಡಳಿತ ನೀಡಲಿ.

ಕ್ರೀಯಾಶೀಲ ವ್ಯಕ್ತಿ ಈಶ್ವರ ಖಂಡ್ರೆಗೆ ಡಿಸಿಎಂ ಸ್ಥಾನ ನೀಡಬೇಕು. ನಾವು ಯಾವುದೇ ಜಾತಿ ಆಧಾರದ ಮೇಲೆ ಸ್ಥಾನಮಾನ ಕೇಳುತ್ತಿಲ್ಲ. ಅರ್ಹತೆಯ ಆಧಾರದ ಮೇಲೆ ಕೇಳುತ್ತಿದ್ದೇವೆ ಎಂದಿದ್ದಾರೆ.

ಹಾಗೇಯೇ ಶಾಸಕ ಹಂಪನಗೌಡ ಬಾದರ್ಲಿಗೆ ಸಚಿವ ಸ್ಥಾನ ನೀಡಲಿ. ಕಾಂಗ್ರೆಸ್ ಅಧಿಕಾರಕ್ಕೆ ಬರಲು ಈ ಭಾಗದ ಜನರ ಕೊಡುಗೆ ಇದೆ ಎಂದು ಹೇಳಿದರು.

# ರಾಜು ಪವಾರ್‌ಗೆ "ಮಹಾರಾಷ್ಟ್ರ ಪ್ರೈಡ್ ಆಫ್ ಸ್ಟಾರ್" ಪ್ರಶಸ್ತಿ ಪ್ರಧಾನ

ಬೆಳಗಾವಿ: ರಾಜು ಪವಾರ್ ಡ್ಯಾನ್ಸ್ ಅಕಾಡೆಮಿ ಬೆಳಗಾವಿಯ ಶ್ರೀ ರಾಜು ಪಾಂಡುರಂಗ ಪವಾರ್ ಅವರು ಯುನಿವರ್ಸಲ್ ಟ್ಯಾಲೆಂಟ್ ಬುಕ್ ಆಫ್ ರೆಕಾರ್ಡ್ಸ್‌ನಿಂದ "ಮಹಾರಾಷ್ಟ್ರ ಪ್ರೈಡ್ ಆಫ್ ಸ್ಟಾರ್ ಅವಾರ್ಡ್ 2023" ಗೌರವವನ್ನು ಸ್ವೀಕರಿಸಿದ್ದಾರೆ.



ಪ್ರಸ್ತುತ ಸ್ಟಾರ್ ಪ್ರವಾಹದಲ್ಲಿ 'ಸ್ವಾಭಿಮಾನ್' ಧಾರಾವಾಹಿಯಲ್ಲಿ ನಾಯಕನಾಗಿ ನಟಿಸುತ್ತಿರುವ ಖ್ಯಾತ ಮರಾಠಿ ಕಲಾವಿದ ಡಾ.ಮಿಲಿಂದ್ ದಾಸ್ತಾನೆ. ರಾಜು ಪವಾರ್ ಅವರಿಗೆ ಕಾಶಿನಾಥ ಘಾಣೇಕರ ಸಭಾಂಗಣದಲ್ಲಿ ಪ್ರಶಸ್ತಿ ಪ್ರದಾನ ಮಾಡಲಾಯಿತು. ಕಾರ್ಯಕ್ರಮವನ್ನು ಸಂಸ್ಥೆಯ ಸಂಸ್ಥಾಪಕ ಹಾಗೂ ಪ್ರಧಾನ ಸಂಪಾದಕ ಪ್ರೊ. ಡಾ. ಬಿ. ಎನ್. ಖಾರತ್ ಮತ್ತು ರಾಷ್ಟ್ರೀಯ ತೀರ್ಪುಗಾರರ ಸದಸ್ಯ ಎ. ಆರ್. ಅಖಾಡೆ ಮಾಡಿದರು. ಚಿತ್ರ ನಿರ್ಮಾಪಕ ಡಾ. ದೀಪಕ್ ಚೌಧರಿ ಅಧ್ಯಕ್ಷತೆ ವಹಿಸಿದ್ದರು. ಮಹಾರಾಷ್ಟ್ರ ಆರೋಗ್ಯ ಸೇವೆಗಳ ನಿರ್ದೇಶಕ ಡಾ. ಸ್ವಪ್ನಿಲ್ ಲೇಲೆ, ಸಂಸ್ಕೃತಿ ಗೋಡ್ಸೆ, ಪುಣೆ, ಶಿವಾಂಗಿ ಅಖಾಡೆ, ರತ್ನಗಿರಿ, ಪ್ರತಿಭಾ ಶಿರ್ಕೆ ಠಾಣೆ ಮುಖ್ಯ ಅತಿಥಿಗಳಾಗಿ ಉಪಸ್ಥಿತರಿದ್ದರು.

ರಾಜು ಪವಾರ್ ಡ್ಯಾನ್ಸ್ ಅಕಾಡೆಮಿಯ ರಾಜು ಪವಾರ್ ಕಳೆದ ಮೂವತ್ತು ವರ್ಷಗಳಿಂದ ನೃತ್ಯ ಕ್ಷೇತ್ರದಲ್ಲಿ ಅಗ್ರಗಣ್ಯರಾಗಿದ್ದಾರೆ, ಅವರು ಬೆಳಗಾವಿಯಂತಹ ನಗರದಲ್ಲಿ ನೃತ್ಯ ಕಲೆಯನ್ನು ಉಳಿಸಿ ನೃತ್ಯ ಕಾರ್ಯಕ್ರಮಗಳನ್ನು ಆಯೋಜಿಸುವ ಮೂಲಕ ಹಲವಾರು ಸಿನಿ ಕಲಾವಿದರನ್ನು ಬೆಳಗಾವಿಗೆ ಕರೆಸಿಕೊಂಡು ಅಮೂಲ್ಯವಾದ ಕೆಲಸವನ್ನು ಮಾಡಿದ್ದಾರೆ. ಬೆಳಗಾವಿಯ ಪ್ರೇಕ್ಷಕ–ರಿಗೆ ತಮ್ಮ ಪ್ರತಿಭೆಯ ರುಚಿಯನ್ನು ನೀಡುತ್ತಿದ್ದಾರೆ. ಅವರಿಗೆ ಈ ಪ್ರಶಸ್ತಿ ಬಂದಿರುವುದು ಹೆಮ್ಮೆಯ ಸಂಗತಿ. ಹೀಗಾಗಿ ಬೆಳಗಾವಿ ಕ್ಷೇತ್ರದಿಂದ ಅವರನ್ನು ಅಭಿನಂದಿಸಲಾಯಿತು.

# ವಾತಾವರಣಕ್ಕೆ ತಕ್ಕಂತೆ ಆಹಾರ ಪದ್ಧತಿ ರೂಢಿಸಿಕೊಳ್ಳಿ: ಎಸ್. ವಿ. ಅಂಗಡಿ

ಬಾಗಲಕೋಟೆ : ವಾತಾವರಣ–ಕ್ಕೆ ತಕ್ಕಂತೆ ಆಹಾರ ಪದ್ಧತಿ ರೂಢಿಸಿಕೊಂಡರೇ ಆರೋಗ್ಯದಲ್ಲಿ ಏರುಪೇರು ಆಗುವುದಿಲ್ಲ ವೆಂದು ವೈದ್ಯಾಧಿಕಾರಿ ಸಿದ್ದಮ್ಮ ಅಂಗಡಿ ತಿಳಿಸಿದರು.

ಹುನಗುಂದ ತಾಲೂಕಿನ ರಕ್ಕಸಗಿ ಗ್ರಾಮ ಪಂಚಾಯತಿ ವ್ಯಾಪ್ತಿಯ ಬೇವಿನಮಟ್ಟಿ ಗ್ರಾಮದಲ್ಲಿ ಬದು ನಿರ್ಮಾಣ ಕಾಮಗಾರಿ ನಡೆಯುತ್ತಿದ್ದು, ನರೇಗಾ ಕೂಲಿ ಕಾರ್ಮಿಕ–ರಿಗೆ ಜಲಸಂಜೀವಿನಿ ಅಭಿಯಾನ ಹಾಗೂ ಆರೋಗ್ಯ ತಪಾಸಣಾ ಶಿಬಿರ ಹಮ್ಮಿಕೊಳ್ಳಲಾಗಿತ್ತು.



ಈ ವೇಳೆ ಮಾತನಾಡಿದ ಅವರು, ಬೇಸಿಗೆ ದಿನಗಳಲ್ಲಿ ಎತ್ತಿ ಹೆಚ್ಚು ನೀರು ಕುಡಿಯರಿ, ದೇಹ ತಪ್ಪಾಗಿಡುವ ಆಹಾರ ಸೇವಿಸುವುದರಿಂದ ಆರೋಗ್ಯ ಉತ್ತಮವಾಗಿರುತ್ತದೆ ಎಂದು ತಿಳಿಸಿದರು. ವಯೋವೃದ್ಧರು ಪ್ರತಿ ತಿಂಗಳು ಆರೋಗ್ಯ ತಪಾಸಣಾ ಮಾಡಿಸಿಕೊಳ್ಳಿ, ಆರೋಗ್ಯ ತಪಾಸಣಾ ಶಿಬಿರಗಳ ಸದುಪಯೋಗ ಪಡಿಸಿಕೊಳ್ಳಿ ಎಂದು ತಿಳಿಸಿದರು.

ಬಳಿಕ ಮಾತನಾಡಿದ ಕ್ಷೇತ್ರ ಆರೋಗ್ಯ ಶಿಕ್ಷಣಾಧಿಕಾರಿ ನಾಗವೇಣಿ ನಾಯಕ್, ಆರೋಗ್ಯದಲ್ಲಿ ಸಣ್ಣ ಪುಟ್ಟ ಬದಲಾವಣೆ ಆದಾಗ ಕೂಡಲೇ ವೈದ್ಯರನ್ನು ಸಂಪರ್ಕಿಸಿ, ತೀವ್ರಗತಿಯಲ್ಲಿ ಆರೋಗ್ಯದಲ್ಲಿ ವೈದ್ಯರು ಏನು ಮಾಡಲು ಸಾಧ್ಯವಿಲ್ಲವೆಂದೂ ತಿಳಿಸಿದರು. ಧೂಮಪಾನ, ಮದ್ಯಪಾನ, ತಂಬಾಕು ಸೇವನೆಯಿಂದ ದೇಹ ನಾಶವಾಗುತ್ತದೆ. ಇದ–ರಿಂದ ನೀವು ಅಷ್ಟೇ ಅಲ್ಲದೇ ಇಡಿ ಕುಟುಂಬ ಕಣ್ಣೀರಿನಲ್ಲಿ ಕೈ ತೊಳೆಯಬೇಕಾಗುತ್ತದೆ ಎಂದು ತಿಳಿಸಿದರು.

ಇನ್ನು ಎನ್.ಸಿ.ಡಿ ಕೌನ್ಸಲರ್ ಯಮನಪ್ಪ ಮಾದರ ಮಾತನಾಡಿ, ಮನಸ್ಸು ಶಾಂತವಾಗಿಟ್ಟುಕೊಳ್ಳಿ, ಇದರಿಂದ ಬಿಪಿ, ಶುಗರ್ ಗಳು ಬರುವುದಿಲ್ಲ, ಅತಿಯಾದ ಉಪ್ಪು, ಸಕ್ಕರೆ ಸೇವನೆಯಿಂದ ಆರೋಗ್ಯ ತೀವ್ರ ಪರಿಣಾಮ ಬೀರುತ್ತದೆ ಜಾಗೃತಿ ವಹಿಸಿ ಎಂದು ತಿಳಿಸಿದರು.

ಈ ಸಂದರ್ಭದಲ್ಲಿ ತಾಲ್ಲೂಕ ಐಇಸಿ ಸಂಯೋಜಕ ಬಸವರಾಜ ಕೊಪ್ಪದ, ಗ್ರಾಮ ಪಂಚಾಯತಿ ಕಾರ್ಯದರ್ಶಿ ಪರಸಪ್ಪ ಭೀಮನ್ನವರ, ವೈದ್ಯಾಧಿಕಾರಿ ಎಸ್. ವಿ. ಅಂಗಡಿ, ಕ್ಷೇತ್ರ ಆರೋಗ್ಯ ಶಿಕ್ಷಣಾಧಿಕಾರಿ ನಾಗವೇಣಿ ನಾಯಕ್, ಬಿಲ್ ಕಲೆಕ್ಟರ್ ರಾಜಶೇಖರ್ ಬೇವೂರ್, ಬಿಎಫ್ ಟಿ ಸಂಗಪ್ಪ ಮೇಲಿನಮನಿ, ಫಾರ್ಮಸಿ ಅಧಿಕಾರಿ ವೆಂಕಟೇಶ್ ಭಾವಿಕಟ್ಟಿ, ಎನ್. ಸಿ. ಡಿ ಕೌನ್ಸಲರ್ ಯಮನಪ್ಪ ಮಾದರ, ಸಿ. ಎಚ್. ಓ ಜ್ಯೋತಿ, ಆರೋಗ್ಯ ಇಲಾಖೆ ಸಿಬ್ಬಂದಿ ವರ್ಗ , ಆಶಾ ಕಾರ್ಯಕರ್ತೆಯರು, ಕಾಯಕ ಬಂಧುಗಳು ಉಪಸ್ಥಿತರಿದ್ದರು.

# ಶಾಸಕ ಸತೀಶ ಜಾರಕಿಹೊಳಿಗೆ ಡಿಸಿಎಂ ಹುದ್ದೆ ನೀಡುವಂತೆ ಒತ್ತಾಯ

ಬೆಳಗಾವಿ: ಈ ಭಾಗದ ಪ್ರಭಾವಿ ನಾಯಕ ,ಜನಪರ ಕಾಳಜಿ ಇರುವ ಹೆಮ್ಮೆಯ ಶಾಸಕರಾದ ಸತೀಶ ಜಾರಕಿಹೊಳಿ ಅವರಿಗೆ ರಾಜ್ಯದ ಉಪಮುಖ್ಯಮಂತ್ರಿ ಹುದ್ದೆ ನೀಡುವಂತೆ ಸತೀಶ ಅಭಿಮಾನಿ ಬಳಗ ಹಾಗೂ ವಿವಿಧ ಸಮುದಾಯಗಳಿಂದ ಕಾಂಗ್ರೆಸ್ ಹೈಕಮಾಂಡ ಒತ್ತಾಯಿಸಿದರು.

ಇಲ್ಲಿನ ರಾಣಿ ಚನ್ನಮ್ಮ ವೃತ್ತದಲ್ಲಿ ವಿವಿಧ ಸಮಾಜದ ಮುಖಂಡರು ಪ್ರತಿಭಟನೆ ಮೂಲಕ ಕಾಂಗ್ರೆಸ್ ಹೈಕಮಾಂಡ್‌ಗೆ ಒತ್ತಾಯಿಸಿದರು. ಸಮುದಾಯ ಆದ–ರ ಮೇಲೆ ದಲಿತ ನಾಯಕರಾದ ಸತೀಶ ಜಾರಕಿಹೊಳಿ ಅವರಿಗೆ ಪ್ರತಿಷ್ಠಿತ ಹುದ್ದೆ ನೀಡುವಂತೆ ಮನವಿ ಮಾಡಿಕೊಂಡರು.

ಬೆಳಗಾವಿ, ಬಾಗಲಕೋಟ, ಹುಬ್ಬಳ್ಳಿ ಸೇರಿದಂತೆ ರಾಜ್ಯಾದ್ಯಂತ ಸತೀಶ ಜಾರಕಿಹೊಳಿ ಅವರು ಕಾಲಿಗೆ ಚಕ್ರ ಕಟ್ಟಿಕೊಂಡು ಪಕ್ಷ ಸಂಘಟನೆ ಮಾಡಿ, ಕಾಂಗ್ರೆಸ್ ಅಧಿಕಾರಕ್ಕೆ ತರುವಲ್ಲಿ ಹಗಲಿರುಳು ಶ್ರಮಿಸಿದ್ದಾರೆ.

ಹೀಗಾಗಿ ಕಾಂಗ್ರೆಸ್ ಹೈಕಮಾಂಡ್ ಸತೀಶ ಜಾರಕಿಹೊಳಿ ಅವರಿಗೆ ರಾಜ್ಯದ ಉಪಮುಖ್ಯಮಂತ್ರಿ ಹುದ್ದೆ ನೀಡಿ,



ಪಕ್ಷದ ಗೌರವ ಹೆಚ್ಚಿಕೊಳ್ಳಬೇಕು ಎಂದು ಆಗ್ರಹಿಸಿದರು. ಈ ವೇಳೆ ಸುರೇಶ ಗೌವನ್ನವರ ದಲಿತರಿಗೆ ಮುಖ್ಯಮಂತ್ರಿ ಹುದ್ದೆ ಕೈತಪ್ಪಿರುವುದರಿಂದ ಈಗ ಉಪ ಮುಖ್ಯಮಂತ್ರಿ ಹುದ್ದೆ ನೀಡಬೇಕು. ಪಕ್ಷವನ್ನು ಅಧಿಕಾರಕ್ಕೆ ತರಲು ಶ್ರಮಿಸಿರುವ ಸತೀಶ ಜಾರಕಿಹೊಳಿ ಅವರನ್ನೇ ಈ ಹುದ್ದೆಗೆ ನೇಮಕ ಮಾಡಬೇಕು.ಕಾಂಗ್ರೆಸ್ ಹೈಕಮಾಂಡ್ ತಕ್ಷಣವೇ ಈ ಕುರಿತು ನಿರ್ಧಾರ ಪ್ರಕಟಿಸಬೇಕು' ಎಂದು ಆಗ್ರಹಿಸಿದರು. ಬೆಳಗಾವಿ ಜಿಲ್ಲೆಯಲ್ಲಿ ಅತೀ ಹೆಚ್ಚು ಕಾಂಗ್ರೆಸ್ ಗೆಲ್ಲುವು ಕಂಡಿದೆ, ಅದಕ್ಕೆ ಕಾರಣ ಸತೀಶ ಜಾರಕಿಹೊಳಿ ಅವರು, ಪಕ್ಷಕ್ಕೆ ದೊಡ್ಡ ಶಕ್ತಿ ಕೊಟ್ಟಿರುವ ಅವರಿಗೆ ಉನ್ನತ ಹುದ್ದೆ ನೀಡಬೇಕು ಎಂದರು.

ಈ ಸಂದರ್ಭದಲ್ಲಿ ಮೆಥೋಡಿಸ್ಟ್ ಚರ್ಚ್ ಪಾದ್ರಿ ಶಾಂತಪ್ಪಾ ಅಂಕಲಗಿ, ಸುರೇಶ ಗೌವನ್ನವರ, ಬಸವರಾಜ ಡುಮ್ಮನಾಯಕ, ಮುಸ್ತಾಕ ಜಮಾದಾರ, ಲಗಮಣ್ಣ ಮಾಳಂಜಿ, ಆನಂದ ಸಿರೋರ,ಎಸ್ ಡಿ ಮಲ್ಲನ್ನವರ, ಪ್ರಭಾಕರ ಹುಲಿಕವಿ ಹಾಗೂ ಇತರರು ಇದ್ದರು.

# ತಂದೆಗೆ ಗೆಲುವು, ಮಗನಿಗೆ ಸೋಲು

## ದಯಪಾಲಿಸಿದ ರಾಮನಗರದ ಮುಸ್ಲಿಂ ಮತಗಳು

ರಾಮನಗರ: 2023ರ ಸಾರ್ವತ್ರಿಕ ವಿಧಾನಸಭಾ ಚುನಾವಣೆಗೆ ತೆರೆ ಬಿದ್ದಿದ್ದು, ಮತ ಸಮರದಲ್ಲಿ ಕಾಂಗ್ರೆಸ್ 135 ಸ್ಥಾನ ಪಡೆದು ಗೆದ್ದುಬೀಗಿದ್ದು. ಮುಖ್ಯಮಂತ್ರಿ ಸ್ಥಾನಕ್ಕೆ ಹಗ್ಗಜಗ್ಗಾಟ ನಡೆದು ಅಂತಿಮವಾಗಿ ಸಿಎಂ ಸ್ಥಾನದ ಚಂಡು ದೆಹಲಿ ಅಂಗಳದಲ್ಲಿದೆ ಮುಖ್ಯಮಂತ್ರಿ ಯಾರು ಎಂಬುದು ಇನ್ನೂ ಇತ್ಯರ್ಥವಾಗಿಲ್ಲ.

ಇತ್ತ ಕ್ಷೇತ್ರದಲ್ಲಿ ಗೆಲುವು ಮತ್ತು ಸೋಲಿನ ಲೆಕ್ಕಾಚಾರ ಆರಂಭವಾಗಿದ್ದು. ಪ್ರತಿ ಕ್ಷೇತ್ರದಲ್ಲೂ ಅಭ್ಯರ್ಥಿಗಳು ತಮ್ಮ ಸೋಲಿಗೆ ಕಾರಣವಾದ ಅಂಶಗಳ ಬಗ್ಗೆ ಪರಿಶೀಲನೆ ಮುಂದಾಗಿದ್ದಾರೆ. ಅಕ್ಕಪಕ್ಕದ ಕ್ಷೇತರದಲ್ಲಿ ಅಪ್ಪ ಮತ್ತು ಮಗ ಸ್ಪರ್ಧೆ ಮಾಡುವ ಮೂಲಕ ಎಲ್ಲರ ಗಮನ ಸೆಳೆದಿದ್ದ ರಾಮನಗರ ಹಾಗೂ ಚನ್ನಪಟ್ಟಣ ವಿಧಾನಸಭಾ ಕ್ಷೇತ್ರಗಳಲ್ಲಿ ಒಬ್ಬರಿಗೆ ಸಿಹಿ, ಮತ್ತೊಬ್ಬರಿಗೆ ಕಹಿ ಅನುಭವವಾಗಿದೆ.

ಮಾಜಿ ಮುಖ್ಯಮಂತ್ರಿ ಎಚ್.ಡಿ.ಕುಮಾರಸ್ವಾಮಿ ಅವರು ಬೊಂಬೆನಾಡು ಖ್ಯಾತಿಯ ಚನ್ನಪಟ್ಟಣ ಕ್ಷೇತ್ರದಿಂದ ಸ್ಪರ್ಧೆ ಮಾಡಿ ಸುಮಾರು 15



ಸಾವಿರ ಮತಗಳ ಅತರದಲ್ಲಿ ಎರಡನೇ ಬಾರಿಗೆ ಗೆಲುವನ್ನು ಸಾಧಿಸಿದ್ದರು. ಇನ್ನೂ ಮಾಜಿ ಸಿಎಂ ಹೆಚ್.ಡಿ.ಕುಮಾರಸ್ವಾಮಿ ಗೆಲುವಿನಲ್ಲಿ ತಾಲ್ಲೂಕಿನ ಅಲ್ಪಸಂಖ್ಯಾತ ಮುಸ್ಲಿಂ ಮತಗಳು ನಿರ್ಣಾಯಕವಾಗಿ ಪಾತ್ರ ವಹಿಸಿವೆ.

ಮಾಜಿ ಸಿಎಂ ಹೆಚ್.ಡಿ.ಕುಮಾರಸ್ವಾಮಿ ಅವರ ಕರ್ಮ ಭೂಮಿ ರಾಮನಗರ ಕ್ಷೇತ್ರದಿಂದ ತಮ್ಮ ಪುತ್ರ ನಿಖಿಲ್ ಕುಮಾರಸ್ವಾಮಿ ಅವರನ್ನು ಕಣಕ್ಕಿಳಿಸಿ ಅದೃಷ್ಟ ಪರೀಕ್ಷೆಗೆ ಮುಂದಾಗಿದ್ದರು. ಕ್ಷೇತ್ರದಲ್ಲಿ ನಿಖಿಲ್ ಕುಮಾರಸ್ವಾಮಿ ಸುಮಾರು 11 ಸಾವಿರ ಮತಗಳ ಅಂತರದಲ್ಲಿ ಸೋಲು ಕಂಡರು. ನಿಖಿಲ್ ಕುಮಾರಸ್ವಾಮಿ ಸೋಲಿಗೆ ಅಲ್ಪಸಂಖ್ಯಾತ ಮುಸ್ಲಿಂ ಮತಗಳು ಕಾರಣವಾಗಿವೆ ಎನ್ನಲಾಗಿದೆ.


ಚನ್ನಪಟ್ಟಣ ಕ್ಷೇತ್ರದಲ್ಲಿ ಸುಮಾರು 17 ಸಾವಿರಕ್ಕೂ ಹೆಚ್ಚು ಮತಗಳು ಮಾಜಿ ಮುಖ್ಯಮಂತ್ರಿ ಹೆಚ್.ಡಿ.ಕುಮಾರಸ್ವಾಮಿ ಪರ ಚಲಾವಣೆ ಮಾಡುವ ಮೂಲಕ ಗೆಲುವಿನ ಸಿಹಿ ನೀಡಿದರು. ರಾಮನಗರ ಕ್ಷೇತ್ರದಿಂದ ಸ್ಪರ್ಧೆ ಮಾಡಿದ್ದ ನಿಖಿಲ್ ಕುಮಾರಸ್ವಾಮಿ ಅವರ ವಿರುದ್ಧ ಸುಮಾರು 18 ಸಾವಿರಕ್ಕೂ ಹೆಚ್ಚೂ ಮುಸ್ಲಿಂ ಮತಗಳು ಚಲಾವಣೆಯಾದ ಹಿನ್ನಲೆಯಲ್ಲಿ ನಿಖಿಲ್ ಕುಮಾರಸ್ವಾಮಿ 11 ಸಾವಿರ ಮತಗಳ ಅಂತರದಲ್ಲಿ ಸೋಲುಂಡರು.

ರಾಮನಗರ ವಿಧಾನ ಸಭಾ ಕ್ಷೇತ್ರದಲ್ಲಿ ಒಟ್ಟು 2,16,061 ಮತದಾರರಲ್ಲಿ 1,81,695 ಮತದಾರರು ತಮ್ಮ ಹಕ್ಕು ಚಲಾಯಿಸಿದರು. ಕ್ಷೇತ್ರದಲ್ಲಿ ಸರಸರಿ 84.89% ಮತದಾನ ದಾಖಲಾಗಿದೆ. ಕಾಂಗ್ರೆಸ್ ಪಕ್ಷದ ಅಭ್ಯರ್ಥಿ ಹೆಚ್.ಎ.ಇಕ್ಬಾಲ್ ಹುಸೇನ್ 87,690 ಮತ ಪಡೆದರೆ ಜೆಡಿಎಸ್ ಅಭ್ಯರ್ಥಿ ನಿಖಿಲ್ ಕುಮಾರಸ್ವಾಮಿ 76,975 ಮತ ಪಡೆದರು. ನಿಖಿಲ್ ವಿರುದ್ಧ ಇಕ್ಬಾಲ್ ಹುಸೇನ್ ಗೆಲುವು ಕಂಡಿದ್ದಾರೆ.

# ನಿಯಂತ್ರಣ ತಪ್ಪಿ ಪ್ರಪಾತಕ್ಕೆ ಬಿದ್ದ ಕಾರು: ನಾಲ್ವರಿಗೆ ಗಂಭೀರ ಗಾಯ

ಚಿಕ್ಕಮಗಳೂರು: ಚಿಕ್ಕಮಗಳೂರು ತಾಲೂಕಿನ ಕವಿಕಲ್ ಗಂಡಿ ಬಳಿ ಬುಧವಾರ ಕಾರೊಂದು ಚಾಲಕನ ನಿಯಂತ್ರಣ ತಪ್ಪಿ ಪ್ರಪಾತಕ್ಕೆ ಬಿದ್ದಿದ್ದು, ಘಟನೆಯಲ್ಲಿ ನಾಲ್ವರು ಗಂಭೀರವಾಗಿ ಗಾಯಗೊಂಡಿದ್ದಾರೆ.

ಮೈಸೂರಿನ ಕೆಆರ್ ನಗರದಿಂದ



ದತ್ತಪೀಠಕ್ಕೆ ತೆರಳುತ್ತಿದ್ದ ಪ್ರವಾಸಿಗರ ಕಾರು ಪ್ರಪಾತಕ್ಕೆ ಬಿದ್ದಿದೆ.

ಘಟನೆಯಲ್ಲಿ ಕಾರಿನಲ್ಲಿದ್ದ ಸೀತಾರಾಮ್, ಸುಗುಣ, ಶ್ರೇಯಸ್, ಶುಭಾ ಅವರು ಗಾಯಗೊಂಡಿದ್ದಾರೆ.

ಚಿಕ್ಕಮಗಳೂರು ಪ್ರವಾಸ ಮುಗಿಸಿಕೊಂಡು ವಾಪಸ್ ಬರುತ್ತಿದ್ದ ವೇಳೆ ಈ ಅಪಘಾತ ಸಂಭವಿಸಿದ್ದು, ಗಾಯಾಳುಗಳನ್ನು ಚಿಕ್ಕಮಗಳೂರು ನಗರದ ಖಾಸಗಿ ಆಸ್ಪತ್ರೆಗೆ ದಾಖಲಿಸಲಾಗಿದೆ.

# ಮಾದಕ ವಸ್ತುಗಳ ಕಳ್ಳಸಾಗಣೆ ಜಾಲ: ಆರು ರಾಜ್ಯಗಳಲ್ಲಿ ಶೋಧ

ನವದೆಹಲಿ: ಮಾದಕ ವಸ್ತುಗಳ ಕಳ್ಳಸಾಗಣೆ ಜಾಲ, ಉಗ್ರರು ಹಾಗೂ ಗ್ಯಾಂಗ್‌ಸ್ಟರ್‌ಗಳ ನಡುವಿನ ನಂಟು ಕುರಿತ ಪ್ರಕರಣಗಳಿಗೆ ಸಂಬಂಧಿಸಿ ರಾಷ್ಟ್ರೀಯ ತನಿಖಾ ಸಂಸ್ಥೆ (ಎನ್‌ಐಎ) ಅಧಿಕಾರಿಗಳು ಆರು ರಾಜ್ಯಗಳ 100ಕ್ಕೂ ಹೆಚ್ಚು ಸ್ಥಳಗಳಲ್ಲಿ ಶೋಧ ಕೈಗೊಂಡಿದ್ದಾರೆ ಎಂದು ಅಧಿಕಾರಿಗಳು ಬುಧವಾರ ತಿಳಿಸಿದ್ದಾರೆ.

ಹರಿಯಾಣ, ಪಂಜಾಬ್, ಉತ್ತರ ಪ್ರದೇಶ, ರಾಜಸ್ಥಾನ, ಮಧ್ಯಪ್ರದೇಶ ಹಾಗೂ ಉತ್ತರಾಖಂಡದಲ್ಲಿ ಶೋಧ ನಡೆಸಿದ್ದಾರೆ.

ಉಗ್ರ ಸಂಘಟನೆಗಳು ಹಾಗೂ ಅವರ ಬಗ್ಗೆ ಸಹಾನುಭೂತಿ ಹೊಂದಿರುವ ವಿದೇಶಿದಲ್ಲಿನ ಗುಂಪುಗಳ ಸದಸ್ಯರು ಉತ್ತರದ ರಾಜ್ಯಗಳಲ್ಲಿ ಸಕ್ರಿಯರಾಗಿದ್ದಾರೆ. ಕೆಲವರನ್ನು ಗುರಿಯಾಗಿಸಿ ಹತ್ಯೆ ಮಾಡುವುದು ಹಾಗೂ ಹಿಂಸಾಚಾರದಲ್ಲಿ ತೊಡಗಿರುವ ಕುರಿತು ಎನ್‌ಐಎ ಕಳೆದ ವರ್ಷ ಮೂರು ಪ್ರಕರಣಗಳನ್ನು ದಾಖಲಿಸಿತ್ತು. ಈ ಪ್ರಕರಣಗಳ ಹಿನ್ನೆಲೆಯಲ್ಲಿ ಶೋಧ ಕೈಗೊಳ್ಳಲಾಗಿದೆ.

ಈ ಜಾಲವು ಉಗ್ರರಿಗೆ ಬೇಕಾದ ಶಸ್ತ್ರಾಸ್ತ್ರಗಳು, ಸ್ಫೋಟಕಗಳು, ಕಚ್ಚಾ ಬಾಂಬ್‌ಗಳನ್ನು ಕೂಡ ಕಳ್ಳಸಾಗಣೆ ಮಾಡುತ್ತಿತ್ತು. ಶಸ್ತ್ರಾಸ್ತ್ರಗಳ ಉತ್ಪಾದಕರು, ಪೂರೈಕೆದಾರರು ಹಾಗೂ ಸ್ಫೋಟಕಗಳನ್ನು ಕಳ್ಳಸಾಗಣೆ ಮಾಡುವವರ ಜಾಲದ ಮೂಲಕ ಈ ಕಾರ್ಯ ನಡೆಯುತ್ತಿತ್ತು ಎಂಬ ಮಾಹಿತಿಯೂ ಎನ್‌ಐಎ ತನಿಖೆ ವೇಳೆ ಬಹಿರಂಗಗೊಂಡಿತ್ತು.

ಕೆನಡಾ ಮೂಲದ ಅರ್ಷ್ ದಲ್ಲಾನನ್ನು ಕಳೆದ ಜನವರಿಯಲ್ಲಿ ಗೃಹ ಸಚಿವಾಲಯವು 'ಉಗ್ರ' ಎಂಬುದಾಗಿ ಘೋಷಿಸಿತ್ತು.

# ಜನರ ಪ್ರೀತಿಯಿಂದ ಗೆಲುವು: ಬಾಲಚಂದ್ರ ಜಾರಕಿಹೊಳಿ

ಮೂಡಲಗಿ: 'ಅರಭಾವಿ ವಿಧಾನಸಭಾ ಚುನಾವಣೆಯಲ್ಲಿ ಸರ್ವ ಸಮಾಜಗಳ ಜನರು ಪ್ರೀತಿ, ವಿಶ್ವಾಸದಿಂದಾಗಿ ದಾಖಲೆಯ ಮತಗಳ ಗೆಲವು ಸಾಧಿಸಲು ಸಾಧ್ಯವಾಗಿದೆ. ಇದು ಕಾರ್ಯಕರ್ತರು, ಮುಖಂಡರ ವಿಜಯವಾಗಿದೆ' ಎಂದು ಶಾಸಕ ಮತ್ತು ಕೆಎಂಎಫ್ ಅಧ್ಯಕ್ಷ ಬಾಲಚಂದ್ರ ಜಾರಕಿಹೊಳಿ ಹೇಳಿದರು.

ತಾಲ್ಲೂಕಿನ ನಾಗನೂರದಲ್ಲಿ ಮಹಾಲಿಂಗೇಶ್ವರ ಮಠದ ಆವರಣದಲ್ಲಿ ಸೋಮವಾರ ಜರುಗಿದ ಅಭಿನಂದನಾ ಸಮಾರಂಭದಲ್ಲಿ ಮಾತನಾಡಿದ ಅವರು, ಪ್ರಚಾರವನ್ನು ಮಾಡದೆ ನನ್ನನ್ನು ಗೆಲ್ಲಿಸಿದ್ದು ಕ್ಷೇತ್ರದ ಜನರ ಪ್ರೀತಿ, ವಿಶ್ವಾಸ ಕಾರಣವಾಗಿದೆ ಎಂದರು.



ಅರಭಾವಿ ಕ್ಷೇತ್ರದಲ್ಲಿಯ ಹಾಲುಮತ, ಉಪ್ಪಾರ, ವೀರಶೈವ, ಲಿಂಗಾಯತರು, ರಡ್ಡಿ, ಮುಸ್ಲಿಂ, ಮರಾಠಾ, ಕ್ಷತ್ರೀಯ, ವಿಶ್ವಕರ್ಮ, ತಳವಾರ, ದಲಿತರು ಸೇರಿದಂತೆ ಎಲ್ಲ ಸಮಾಜದವರು ನನ್ನನ್ನು ಬೆಂಬಲಿಸಿದ್ದಾರೆ. ನನ್ನ ಅಧಿಕಾರಾವಧಿಯಲ್ಲಿ ಎಲ್ಲ ಸಮಾಜಗಳ ಏಳ್ಗೆಗಾಗಿ ಶ್ರಮಿಸುವೆ ಎಂದರು.

ಕ್ಷೇತ್ರದ ಕೆಲವು ಗ್ರಾಮಗಳಲ್ಲಿ ಅವಶ್ಯವಿರುವ ಶೌಚಾಲಯಗಳ ನಿರ್ಮಾಣ ಮತ್ತು ಒಳಚರಂಡಿ ನಿರ್ಮಾಣಕ್ಕೆ ಆದ್ಯತೆ ನೀಡುವೆ. ಕ್ಷೇತ್ರದ ಆಯಾ ಪಂಚಾಯ್ತಿ ವ್ಯಾಪ್ತಿಯಲ್ಲಿ ಸಂಚರಿಸಿ ಅಲ್ಲಿ ಸಮಸ್ಯೆಗಳಿಗೆ ಪರಿಹಾರಕ್ಕೆ ಸಂಬಂಧಿಸಿದ ಅಧಿಕಾರಗಳನ್ನು ಸ್ಥಳಕ್ಕೆ ಕರೆಯಿಸಿ ಇತ್ಯರ್ಥಗೊಳಿಸುವೆ ಎಂದರು.

ವೇದಿಕೆಯಲ್ಲಿ ಘಟಪ್ರಭಾ ಜೆಜಿ ಆಸ್ಪತ್ರೆ ಅಧ್ಯಕ್ಷ ಬಿ.ಆರ್. ಪಾಟೀಲ(ನಾಗನೂರ), ಯುವ ಧುರೀಣ ಸರ್ವೋತ್ತಮ ಜಾರಕಿಹೊಳಿ, ಟಿಎಪಿಸಿಎಂ–ಎಸ್ ಅಧ್ಯಕ್ಷ ಅಶೋಕ ನಾಯಿಕ, ಉಪಾಧ್ಯಕ್ಷ ವಿಠ್ಠಲ ಪಾಟೀಲ, ಜಿಲ್ಲಾ ಪಂಚಾಯ್ತಿ ಮಾಜಿ ಸದಸ್ಯ ಡಾ.ರಾಜೇಂದ್ರ ಸಣ್ಣಕ್ಕಿ, ಬಿಡಿಸಿಸಿ ಬ್ಯಾಂಕ್ ಉಪಾಧ್ಯಕ್ಷ ಸುಭಾಸ ಢವಳೇಶ್ವರ, ನಿರ್ದೇಶಕ ನೀಲಕಂಠ ಕಪ್ಪಲಗುದ್ದಿ, ಸುಭಾಸ ಕುರಬೇಟ, ಪಿಎಲ್‌ಡಿ ಬ್ಯಾಂಕ್ ಅಧ್ಯಕ್ಷ ಅಪ್ಪಯ್ಯ ಬಡ್ನಿಂಗಗೋಳ, ಪ್ರಭಾ ಶುಗರ್ಸ್ ಉಪಾಧ್ಯಕ್ಷ ರಾಮಣ್ಣ ಮಹಾರಡ್ಡಿ, ನಿರ್ದೇಶಕರಾದ ಲಕ್ಷ್ಮಣ ಗಣಪ್ಪಗೋಳ, ಮಾಳಪ್ಪ ಜಾಗನೂರ, ಶಿವಲಿಂಗ ಪೂಜೇರಿ, ಶಿದ್ಲಿಂಗ ಕಂಬಳಿ, ಎಂ.ಆರ್. ಭೋವಿ, ಅರಭಾವಿ ಮಂಡಲ ಬಿಜೆಪಿ ಅಧ್ಯಕ್ಷ ಮಹಾದೇವ ಶೆಕ್ಕಿ, ಮಂಡಲ ವಿಸ್ತಾರಕ ವೆಂಕಟ ಲಾಳೆ, ಅಶೋಕ ಖಂಡ್ರಟ್ಟಿ, ಸಿ.ಎಲ್. ಬೆಳಗಲಿ, ಎಸ್.ಎಲ್. ಹೊಸಮನಿ, ಡಾ.ಎಸ್.ಎಸ್. ಪಾಟೀಲ, ಮೂಡಲಗಿ ಪುರಸಭೆ ಅಧ್ಯಕ್ಷ ಹನಮಂತ ಗುಡ್ಲಮನಿ, ಬಸವರಾಜ ಮಾಳೇದವರ, ರಂಗಪ್ಪ ಇಟ್ಟನ್ನವರ, ಪರಮೇಶ್ವರ ಹೊಸಮನಿ, ವಿಠ್ಠಲ ಸವದತ್ತಿ, ಗೋವಿಂದ ಕೊಪ್ಪದ ಇದ್ದರು.

# ಬಡ ಕುಟುಂಬಗಳ ಆರ್ಥಿಕ ಸಿತ್ಥಿ ಸುಧಾರಿಸುವಲ್ಲಿ ನರೇಗಾ ಮಹತ್ವದ ಪಾತ್ರ

ಚಿಕ್ಕೋಡಿ: ಗ್ರಾಮೀಣ ಭಾಗದ ಜನರ ಜೀವನಕ್ಕೆ ಆರ್ಥಿಕ ಭದ್ರತೆ ಹೆಚ್ಚಿಸಲು ಅಕುಶಲ ಕಾರ್ಮಿಕರಿಗೆ ವರ್ಷದಲ್ಲಿ ನೂರು ದಿನಗಳ ಕೆಲಸ ಒದಗಿಸುವ ಗುರಿಯನ್ನು ಮಹಾತ್ಮ ಗಾಂಧಿ ನರೇಗಾ ಯೋಜನೆ ಹೊಂದಿದೆ.

ಒಂದು ಕುಟುಂಬದ ವಯಸ್ಕರ ಸದಸ್ಯರು ಸ್ವಯಂ ಪ್ರೇರಿತರಾಗಿ ನೊಂದಣಿಯಾದರೆ ಅಂತಹವರಿಗೆ ನೂರು ದಿನಗಳ ಉದ್ಯೋಗ ನೀಡಲಾಗುವುದು. ಬಡ ಕುಟುಂಬಗಳ ಆರ್ಥಿಕ ಸಿತ್ಥಿಯನ್ನು ಸುಧಾರಿಸುವಲ್ಲಿ ನರೇಗಾ ಯೋಜನೆ ಮಹತ್ವದ ಪಾತ್ರ ವಹಿಸಿದೆ ಎಂದು ಜಿಲ್ಲಾ ಪಂಚಾಯತಿಯ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳಾದ ಹರ್ಷಲ್ ಭೋಯರ್



ಹೇಳಿದರು.

ಚಿಂಚಣಿ ಗ್ರಾಮ ಪಂಚಾಯತಿಯ ನರೇಗಾ ಯೋಜನೆಯ ಕೂಲಿ ಕಾರ್ಮಿಕರ ಸ್ಥಳಕ್ಕೆ ಬೇಟಿ ನೀಡಿ ಮಾತನಾಡಿದ ಅವರು ಎಪ್ರೀಲ ಒಂದನೇ ದಿನಾಂಕದಿಂದ ಕೂಲಿಕಾರರಿಗೆ 316 ರೂ ಕೂಲಿ ಹೆಚ್ಚಳವಾಗಿದ್ದು ಗ್ರಾಮೀಣ ಜನರು ಹೆಚ್ಚು ಈ ಯೋಜನೆಯಲ್ಲಿ ಪಾಲಗೊಳ್ಳಬೇಕು ಹಾಗೂ ಗ್ರಾಮೀಣ ಮಟ್ಟದಲ್ಲಿ ಉತ್ತಮವಾದ ಆಸ್ತಿ ಸೃಜನೆ ಮಾಡಬೇಕು ಎಂದು ತಿಳಿಸಿದರು

ಎಲ್ಲಾ ಗ್ರಾಮ ಪಂಚಾಯತಿಗಳಲ್ಲಿ ಕೆಲಸ ಕೇಳಿಬಂದ ಕೂಲಿ ಕಾರ್ಮಿಕರಿಗೆ ಕಡ್ಡಾಯವಾಗಿ ಕೆಲಸ ನೀಡಬೇಕು ಎಂದು ಗ್ರಾಮ ಪಂಚಾಯತಿ ಅಭಿವೃದ್ಧಿ ಅಧಿಕಾರಿಗಳಿಗೆ ಸೂಚಿಸಲಾಗಿದೆ. ನರೇಗಾ ಯೋಜನೆಯಡಿಯಲ್ಲಿ ಕೂಲಿ ಕಾರ್ಮಿಕರಿಗೆ ಕೂಲಿ ಕೆಲಸ ನೀಡದಿದ್ದರೆ ಸಂಬಂಧಿಸಿದ ಅಧಿಕಾರಿಗಳ ಮೇಲೆ ಶಿಸ್ತು ಕ್ರಮ ಕೈಗೊಳ್ಳಲಾಗುವುದೆಂದು ಹೇಳಿದರು.

ತಾಲೂಕ ಪಂಚಾಯತಿ ಕಾರ್ಯನಿರ್ವಾಹಕ ಅಧಿಕಾರಿಗಳಾದ ನಿಂಗಪ್ಪ ಮಸಳಿ, ಸಹಾಯಕ ನಿರ್ದೇಶಕರಾದ ಶಿವಾನಂದ ಶಿರಗಾಂವಿ, ಪಿ.ಡಿ.ಓ ಕೆ.ಎ.ಮೋಮಿನ, ಐಇಸಿ ಸಂಯೋಜಕರಾದ ರಂಜೀತ ಕಾಂಬಳೆ, ತಾಂತ್ರಿಕ ಸಂಯೋಜಕರಾದ ಮುದ್ದಶೀರಖಾನ ಪಠಾಣ, ತಾಂತ್ರಿಕ ಸಹಾಯಕರಾದ ಕಾಂಚನಾ ಪಾಟೇಕರ, ಬಿ.ಎಫ್.ಟಿ ರಾಮಚಂದ್ರ ಕಟ್ಟಿಕರ ಹಾಗೂ ಗ್ರಾಮ ಪಂಚಾಯತಿ ಸಿಬ್ಬಂದಿಗಳು ಉಪಸ್ಥಿತರಿದ್ದರು.

# ಆಟೋಗೆ ಲಾರಿ ಡಿಕ್ಕಿ: ಸ್ಥಳದಲ್ಲೇ 5ಸಾವು

ಅಮರಾವತಿ: ಆಂಧ್ರಪ್ರದೇಶದ ಪಲ್ನಾಡು ಜಿಲ್ಲೆಯ ದಾಚೆಪಲ್ಲಿ ಮಂಡಲದಲ್ಲಿ ಇಂದು ಬೆಳಿಗ್ಗೆ ವೇಗವಾಗಿ ಬಂದ ಲಾರಿಯೊಂದು ಆಟೋರಿಕ್ಷಾಕ್ಕೆ ಡಿಕ್ಕಿ ಹೊಡೆದ ಪರಿಣಾಮ ಸ್ಥಳದಲ್ಲೇ ಐವರು ಮೃತಪಟ್ಟಿದ್ದು, ಏಳು ಮಂದಿ ಗಂಭೀರವಾಗಿ ಗಾಯಗೊಂಡಿದ್ದಾರೆ.

ಘಟನೆ ಸಂಬಂಧ ಪ್ರಕರಣ ದಾಖಲಿಸಿಕೊಂಡು ತನಿಖೆ ನಡೆಸುತ್ತಿರುವುದಾಗಿ ಪೊಲೀಸರು ತಿಳಿಸಿದ್ದಾರೆ.

ಆಟೋರಿಕ್ಷಾದಲ್ಲಿ 12 ಮಂದಿ ಕಾರ್ಮಿಕರು ರಾಮಾಲಯದ ಕಡೆಗೆ ಪ್ರಯಾಣಿಸುತ್ತಿದ್ದಾಗ ವೇಗವಾಗಿ ಬಂದ ಲಾರಿ ಡಿಕ್ಕಿ ಹೊಡೆದಿದೆ. ಪರಿಣಾಮ ಐವರು ಕಾರ್ಮಿಕರು ಸ್ಥಳದಲ್ಲೇ ಮೃತಪಟ್ಟಿದ್ದಾರೆ. ಗಾಯಾಳುಗಳನ್ನು ಗುರಜಾಲ ಮತ್ತು ಮಿರ್ಯಾಲಗೂಡ ಆಸ್ಪತ್ರೆಗೆ ರವಾನಿಸಲಾಗಿದೆ ಎಂದು ಪೊಲೀಸರು ತಿಳಿಸಿದ್ದಾರೆ.

ಡಿಕ್ಕಿಯ ರಭಸಕ್ಕೆ ಮೃತದೇಹಗಳು 50 ಮೀಟರ್



ದೂರದಲ್ಲಿ ಬಿದ್ದಿದ್ದವು ಎಂದು ಪ್ರತ್ಯಕ್ಷದರ್ಶಿಯೊಬ್ಬರು ತಿಳಿಸಿದ್ದಾರೆ.

ಆಟೋಗೆ ಡಿಕ್ಕಿ ಹೊಡೆದ ಬಳಿಕ ಲಾರಿ ಚಾಲಕ ವಾಹನ ನಿಲ್ಲಿಸದೆ ಸ್ಥಳದಿಂದ ಪರಾರಿಯಾಗಿದ್ದು, ಆತನ ವಿರುದ್ಧ ಪ್ರಕರಣ ದಾಖಲಿಸಲಾಗಿದೆ ಎಂದು ಪೊಲೀಸರು ತಿಳಿಸಿದ್ದಾರೆ.

# ರಾಮದುರ್ಗ ಕ್ಷೇತ್ರದಲ್ಲಿ ಬಿಜೆಪಿ ಅತೃಪ್ತರಿಂದ ಕಾಂಗ್ರೆಸ್ ಗೆಲುವು ?

ರಾಮದುರ್ಗ: ರಾಮದುರ್ಗ ಕ್ಷೇತ್ರದಲ್ಲಿ ಬಿಜೆಪಿ ಅತೃಪ್ತ ಗುಂಪಿನ ಬಲದಿಂದಲೇ ಕಾಂಗ್ರೆಸ್ ಅಭ್ಯರ್ಥಿ ಅಶೋಕ ಪಟ್ಟಣ ಗೆಲುವು ಸಾಧಿಸಿದರೇ?

–ಕ್ಷೇತ್ರದ ತುಂಬೆಲ್ಲ ಇಂಥದ್ದೊಂದು ಚರ್ಚೆ ನಡೆದಿದೆ. 2018ರ ಚುನಾವಣೆಯಲ್ಲಿ ಬಿಜೆಪಿಯಿಂದ ಸ್ಪರ್ಧಿಸಿದ್ದ ಮಹಾದೇವಪ್ಪ ಯಾದವಾಡ ವಿರುದ್ಧ ಸೋತಿದ್ದ ಅಶೋಕ ಪಟ್ಟಣ, ಈ ಬಾರಿ 11,730 ಮತಗಳ ಅಂತರದಿಂದ ಗೆಲುವು ಸಾಧಿಸಿದ್ದಾರೆ.

ಬಿಜೆಪಿ ಟಿಕೆಟ್ ಕೈತಪ್ಪಿದ್ದರಿಂದ ಮುನಿಸಿಕೊಂಡಿದ್ದ ಮಹಾದೇವಪ್ಪ ಪಕ್ಷೇತರರಾಗಿ ಕಣಕ್ಕಿಳಿದಿದ್ದರು. ಪಕ್ಷದ ನಾಯಕರು ಮನವೊಲಿಸಿದ್ದರಿಂದ ಉಮೇದುವಾರಿಕೆ ಹಿಂದಕ್ಕೆ



ಪಡೆದರು. ಆದರೆ, ಬಿಜೆಪಿ ಅಭ್ಯರ್ಥಿ ಪರವಾಗಿ ಪ್ರಚಾರ ಮಾಡಲು ಕ್ಷೇತ್ರದಲ್ಲಿ ಕಾಣಿಸಿಕೊಳ್ಳದಿರುವುದು ಮತ್ತು ಅವರ ಬಹುತೇಕ ಬೆಂಬಲಿಗರು ಕಾಂಗ್ರೆಸ್ ಪರವಾಗಿ ಕೆಲಸ ಮಾಡಿರುವುದು ಇಂತಹ ಸಂಶಯಗಳಿಗೆ ಕಾರಣವಾಗಿದೆ.

ಒಳಪೆಟ್ಟಿನಿಂದ ಕೈತಪ್ಪಿದ ಸ್ಥಾನ: ಹಾಲಿ ಶಾಸಕ ಮಹಾದೇವಪ್ಪ ಯಾದವಾಡ ಈ ಬಾರಿಯೂ ಬಿಜೆಪಿ ಟಿಕೆಟ್ ಆಕಾಂಕ್ಷಿಯಾಗಿದ್ದರು. ತಮ್ಮ ಸಾಂಪ್ರದಾಯಿಕ ಎದುರಾಳಿಯಾಗಿದ್ದ ಪಟ್ಟಣ ಎದುರು ಗೆಲುವಿನ ಓಟ ಮುಂದುವರಿಸಲು ಕಸರತ್ತು ನಡೆಸಿದ್ದರು. ಆದರೆ, ಬಿಜೆಪಿ ಹೈಕಮಾಂಡ್ ಚಿಕ್ಕರೇವಣ್ಣ ಅವರಿಗೆ ಟಿಕೆಟ್ ಕೊಟ್ಟಿತು. ಇದರಿಂದ ಅಸಮಾಧಾನಗೊಂಡು ಬಂಡಾಯದ ಬಾವುಟ ಹಾರಿಸಿದ್ದ ಮಹಾದೇವಪ್ಪ ಅವರ ಮನವೊಲಿಸುವಲ್ಲಿ ಬಿಜೆಪಿ ನಾಯಕರು ಮೇಲ್ನೋಟಕ್ಕೆ ಸಫಲವಾಗಿದ್ದರು. ಆದರೆ, ಬಿಜೆಪಿಗೆ ಒಳಪೆಟ್ಟು ಬಿತ್ತು. ಹಾಲಿ–ಮಾಜಿ ಶಾಸಕರ ದೋಸ್ತಿಯಿಂದಾಗಿಯೇ ಕಾಂಗ್ರೆಸ್ ಗೆದ್ದಿತು ಎಂದು ವಿಶ್ಲೇಷಿಸಲಾಗುತ್ತಿದೆ.

ಕಾಂಗ್ರೆಸ್ ನಾಯಕ ರಾಹುಲ್ ಗಾಂಧಿ ಭೇಟಿ ಪಕ್ಷಕ್ಕೆ ಬಲ ತಂದಿತು. ಪಟ್ಟಣ ಶಾಸಕರಾಗಿದ್ದ ಎರಡು ಅವಧಿಗಳಲ್ಲಿ ಕೈಗೊಂಡ ಅಭಿವೃದ್ಧಿ ಕೆಲಸಗಳು ಗೆಲುವಿಗೆ ಸಹಕಾರಿಯಾದವು ಎಂಬುದು ಮೂಲಗಳ ಮಾಹಿತಿ.

ಕೈಹಿಡಿಯದ ಸಾಮಾಜಿಕ ಸೇವೆ: 2019ರಲ್ಲಿ ಮಲಪ್ರಭಾ ನದಿ ಪ್ರವಾಹದಿಂದ ರಾಮದುರ್ಗ ತತ್ತರಿಸಿತ್ತು. ಮಾರನೇ ವರ್ಷ ಕೊರೊನಾ ಹಾವಳಿಯಿಂದ ಸಾಕಷ್ಟು ನೋವು ಅನುಭವಿಸಿದ್ದರು. ಆ ಎರಡೂ ಸಂಕಷ್ಟ ಸಮಯದಲ್ಲಿ ರಾಮದುರ್ಗ ಕ್ಷೇತ್ರದ ಜನರಿಗೆ ಚಿಕ್ಕರೇವಣ್ಣ ನೆರವಾಗಿದ್ದರು. ಹಾಗಾಗಿ ಸಾಮಾಜಿಕ ಸೇವೆ ನಿಶ್ಚಿತವಾಗಿಯೂ ಕೈಹಿಡಿಯುತ್ತದೆ ಎಂಬ ವಿಶ್ವಾಸದಲ್ಲಿದ್ದರು. ಆದರೆ, ಬಿಜೆಪಿಯಲ್ಲಿ ಉಂಟಾದ ಒಡಕಿನಿಂದಾಗಿ ಅವರು ಗೆಲುವು ದಕ್ಕಲಿಲ್ಲ.


# ಹೆಚ್ಚು ಮತಗಳ ಅಂತರದಿಂದ ಗೆಲುವು ಸಾಧಿಸಿದ ಬೆಳಗಾವಿಯ ಐವರು ಶಾಸಕರು

ಬೆಳಗಾವಿ: ಈ ಬಾರಿ ವಿಧಾನಸಭೆ ಚುನಾವಣೆಯಲ್ಲಿ ಅತ್ಯಂತ ಹೆಚ್ಚು ಮತಗಳ ಅಂತರದಿಂದ ಗೆಲುವು ಸಾಧಿಸಿದ, ರಾಜ್ಯದ 10 ಶಾಸಕರಲ್ಲಿ ಜಿಲ್ಲೆಯವರೇ ಐವರಿದ್ದಾರೆ. ಈ ಮೂಲಕ ಬೆಳಗಾವಿ ಮತ್ತೆ ತನ್ನ ರಾಜಕೀಯ ಪಾರಮ್ಯ ಪ್ರದರ್ಶನ ಮಾಡಿದೆ.

ಚಿಕ್ಕೋಡಿ–ಸದಲಗಾ ಕ್ಷೇತ್ರದ ಶಾಸಕ ಗಣೇಶ ಹುಕ್ಕೇರಿ 78,509 ಮತಗಳ ಅಂತರದಿಂದ ಗೆಲುವು ಸಾಧಿಸುವ ಮೂಲಕ ಜಿಲ್ಲೆಯಲ್ಲಿ ಅತಿ ಹೆಚ್ಚು ಅಂತರದಿಂದ ಗೆದ್ದವರು ಎಂಬ ಕೀರ್ತಿಗೆ ಪಾತ್ರವಾಗಿದ್ದಾರೆ.

ಗಣೇಶ ಹುಕ್ಕೇರಿ ಒಟ್ಟು 1,28,349 ಮತಗಳನ್ನು ಪಡೆದಿದ್ದಾರೆ. ಸತತ ಮೂರನೇ ಬಾರಿಗೆ ಗೆದ್ದಿವರು ಅವರು ಪ್ರತಿ ಬಾರಿಯೂ ಲಕ್ಷಕ್ಕೂ ಹೆಚ್ಚು ಮತ ಪಡೆದಿದ್ದರು ಎಂಬುದು ಗಮನಾರ್ಹ.

ಎರಡನೇ ಸ್ಥಾನದಲ್ಲಿ ಅಥಣಿ ಶಾಸಕ ಲಕ್ಷ್ಮಣ ಸವದಿ ಇದ್ದಾರೆ. ಅವರು 1,31,404 ಮತಗಳನ್ನು ಪಡೆದು 76,122 ಮತಗಳ ಅಂತರದಿಂದ ಗೆದ್ದರು. ಪಕ್ಷಾಂತರ ಕಾರಣದಿಂದಲೇ ಅಥಣಿ ಕ್ಷೇತ್ರವು ಇಡೀ ರಾಜ್ಯ ತಮ್ಮತ್ತ ತಿರುಗಿ ನೋಡುವಂತೆ ಆಗಿತ್ತು. ಲಕ್ಷ್ಮಣ ಸವದಿ ಅವರನ್ನು ಸೋಲಿಸಲು ರಮೇಶ ಜಾರಕಿಹೊಳಿ ಸೇರಿದಂತೆ ಬಿಜೆಪಿಯ ಅವರ ಸ್ನೇಹಿತರೇ ಸಾಕಷ್ಟು ಯತ್ನ ನಡೆಸಿದ್ದರು. ಆದರೆ,



ದೊಡ್ಡ ಪ್ರಮಾಣದ ಅಂತರದಿಂದ ಗೆಲ್ಲುವ ಮೂಲಕ ಸವದಿ ಅವರು ರಾಜ್ಯದ ಗಮನ ಸೆಳೆದರು.

ನಂತರದ ಸ್ಥಾನದಲ್ಲಿ ಬಾಲಚಂದ್ರ ಜಾರಕಿಹೊಳಿ ಇದ್ದಾರೆ. 71,540 ಮತಗಳ ಅಂತರದಿಂದ ಗೆದ್ದ ಅವರು ತಮ್ಮ ನಾಗಾಲೋಟ ಮುಂದುವರಿಸಿದ್ದಾರೆ. ಪ್ರತಿ ವರ್ಷದಂತೆ ಈ ವರ್ಷವೂ ಬಾಲಚಂದ್ರ ಅವರು ದೊಡ್ಡ ಸಂಖ್ಯೆಯ (1,14,242) ಮತಗಳನ್ನು ಪಡೆದು, ಅರಭಾವಿ ಕ್ಷೇತ್ರದ ವಿರೋಧ ಅಭ್ಯರ್ಥಿಗಳು ಹುಬ್ಬೇರಿಸುವಂತೆ ಮಾಡಿದರು.

ಯಮಕನಮರಡಿಯಲ್ಲಿ ಶಾಸಕ ಸತೀಶ ಜಾರಕಿಹೊಳಿ ನಾಲ್ಕನೇ ಬಾರಿ ಗೆದ್ದಿದ್ದು 57,211 ಮತಗಳ ಅಂತರ ಕಾಯ್ದುಕೊಂಡಿದ್ದಾರೆ. 1,00,290 ಮತಗಳನ್ನು ಅವರು ಬಾಚಿದ್ದಾರೆ.

ಇದೇ ಸತೀಶ ಅವರು 2018ರ ಚುನಾವಣೆಯಲ್ಲಿ ಕೇವಲ 2,800 ಮತಗಳ ಅಂತರದಿಂದ ಗೆದ್ದಿದ್ದರು. ಆಗ ಪ್ರತಿಸ್ಪರ್ಧಿ ಆಗಿದ್ದ ಮಾರುತಿ ಅಷ್ಟಗಿ ಅವರು ಬಿಜೆಪಿಯಿಂದ ನೇರಾನೇರ ಪೈಪೋಟಿ ನೀಡಿದ್ದರು. ಆದರೆ, ಈ ಬಾರಿ ಮಾರುತಿ ಅವರಿಗೆ ಟಿಕೆಟ್ ನೀಡದ ಕಾರಣ ಅವರು ಜೆಡಿಎಸ್ ಸೇರಿ ಕಣಕ್ಕಿಳಿದರು. ಈ ರಾಜಕೀಯ ತಂತ್ರಗಾರಿಕೆ ಕಾರಣ ಸತೀಶ ಅವರಿಗೆ ಅತ್ಯಂತ ಹೆಚ್ಚು ಅಂತರದ ಗೆಲುವು ಸಿಕ್ಕಿತು.

ಇಡೀ ರಾಜ್ಯವೇ ತಿರುಗಿ ನೋಡವಂಥ ಗೆಲುವು ಸಾಧಿಸಿದ್ದು ಬೆಳಗಾವಿ ಗ್ರಾಮೀಣ ಕ್ಷೇತ್ರದ ಶಾಸಕಿ ಲಕ್ಷ್ಮೀ ಹೆಬ್ಬಾಳಕರ. 1,07,619 ಮತಗಳನ್ನು ಪಡೆದ ಅವರು, 56,016 ಮತಗಳ ಅಂತರ ಕಾಯ್ದುಕೊಳ್ಳುವ ಮೂಲಕ ಜಿಲ್ಲೆಯ ಜನರನ್ನೂ ನಿಬ್ಬೆರಗಾಗಿಸಿದರು.

ಲಕ್ಷ್ಮೀ ಅವರನ್ನು ಸೋಲಿಸಲು ಶಾಸಕ ರಮೇಶ ಜಾರಕಿಹೊಳಿ, ಮಾಜಿ ಶಾಸಕ ಸಂಜಯ ಪಾಟೀಲ ಸೇರಿದಂತೆ ಹಲವು ಬಿಜೆಪಿ ನಾಯಕರು ಇನ್ನಿಲ್ಲದ ಯತ್ನ ಮಾಡಿದರು.

ದಿನದಿನವೂ ಹೊಸಹೊಸ ತಂತ್ರಗಳನ್ನು ಹೂಡಿದರು. ರಾಜಹಂಸಗಡ ಕೋಟೆ ಮೇಲಿನ ಶಿವಾಜಿ ಮೂರ್ತಿಯ ರಾಜಕಾರಣ ರಾಜ್ಯದ ಗಮನ ಸೆಳೆಯಿತು. ಒಂದೆಡೆ ಬಿಜೆಪಿ, ಇನ್ನೊಂದೆಡೆ ಎಂಇಎಸ್ ಅಭ್ಯರ್ಥಿಗಳು ಸಾಕಷ್ಟು ಪ್ರಯತ್ನ ನಡೆಸಿದರು.

ಇದೆಲ್ಲದರ ಆಚೆಗೂ ಮತದಾರ ಮತ್ರ ಲಕ್ಷ್ಮೀ ಅವರಿಗೆ ದೊಡ್ಡ ಗೆಲುವು ತಂದುಕೊಟ್ಟರು.

ಮತ್ತೆ ಶಕ್ತಿಕೇಂದ್ರ: ಬೆಳಗಾವಿ ಜಿಲ್ಲೆಯ ರಾಜಕಾರಣವೇ ಹಾಗೆ. ಯಾರು ಗೆದ್ದರೂ ಯಾರು ಸೋತರೂ ತಾನು ರಾಜಕೀಯ ಶಕ್ತಿ ಕೇಂದ್ರ ಎಂಬುದನ್ನು ಸಾಬೀತು ಮಾಡುತ್ತಲೇ ಇರುತ್ತದೆ. ಪಕ್ಷ ಯಾವುದೇ ಅಧಿಕಾರಕ್ಕೆ ಬರಲಿ ಅದರ ಸೂತ್ರದ ದಾರ ಕೂಡ ಬೆಳಗಾವಿ ಜಿಲ್ಲೆಯಲ್ಲೇ ಇರುವುದು ವಿಶೇಷ.

ಅತಿ ಕಡಿಮೆ ಅಂತರದಿಂದ ಗೆದ್ದವರು ಶಶಿಕಲಾ ಜೊಲ್ಲೆ (ಅಂತರ 7292) ದುರ್ಯೋಧನ ಐಹೊಳೆ (2570) ಬಾಸಾಹೇಬ ಪಾಟೀಲ (2993) ಆಸೀಫ್ (ರಾಜು) ಸೇಠ್ (4231) ಮಹಾಂತೇಶ ಕೌಜಲಗಿ (2778).

# ಲವ್ ಮ್ಯಾರೇಜ್ ಅದವರಲ್ಲೇ ಡೈವೋರ್ಸ್ ಹೆಚ್ಚು




ನವದೆಹಲಿ: ಇಬ್ಬರು ಪರಸ್ಪರ ಒಪ್ಪಿ, ಮುಂದಿನ ಭವಿಷ್ಯವನ್ನು ಒಟ್ಟಿಗೆ ಕಳೆಯುವ ನಿರ್ಧಾರಕ್ಕೆ ಬಂದ್ಮೇಲೆ ಮದುವೆಯಾಗ್ತಾರೆ. ಮದುವೆಗೂ ಮುನ್ನ ಸಾಕಷ್ಟು ಪ್ರಯತ್ನ, ಪರಿಶ್ರಮವಿರುತ್ತದೆ. ಆದ್ರೆ ಮದುವೆ ಮೂಲಕ ಒಂದಾಗುವ ಎರಡು ಕುಟುಂಬಗಳು ಕಾಗದದ ಮೇಲೆ ಒಂದು ಸಹಿ ಹಾಕುವ ಮೂಲಕ ದೂರವಾಗುತ್ತವೆ.

ಎಲ್ಲಾ ಬಂಧಗಳು ಕಳಚಿ ಬೀಳುತ್ತವೆ. ದಾಂಪತ್ಯ ಮುರಿದು ಬೀಳಲು ನಾನಾ ಕಾರಣಗಳನ್ನು ನಾವು ನೋಡ್ಬಹುದು. ಇಬ್ಬರ ಮಧ್ಯೆ ಹೊಂದಾಣಿಕೆ ಸಾಧ್ಯವಿಲ್ಲ ಎಂದಾಗ, ಒಂದು ಕಡೆಯಿಂದ ಹಿಂಸೆಗಳು ಕಾಣಿಸಿಕೊಂಡಾಗ, ಇಬ್ಬರ ಮಧ್ಯೆ ನಂಬಿಕೆ ಸತ್ತಾಗ ಹೀಗೆ ಅನೇಕ ಕಾರಣಕ್ಕೆ ದಾಂಪತ್ಯದಲ್ಲಿ ಬಿರುಕು ಕಾಣಿಸಿಕೊಳ್ಳುತ್ತದೆ. ಇತ್ತೀಚಿನ ವರ್ಷಗಳಲ್ಲಂತೂ ಸಣ್ಣಪುಟ್ಟ ಕಾರಣಕ್ಕೆ ದಂಪತಿಗಳು ಡಿವೋರ್ಸ್ ಪಡೆದುಕೊಳ್ಳುವುದು ಸಾಮಾನ್ಯವಾಗಿದೆ. ಅದರಲ್ಲೂ ಸುಪ್ರೀಂಕೋರ್ಟ್ ಇತ್ತೀಚೆಗೆ ಶಾಕಿಂಗ್ ವಿಚಾರವೊಂದನ್ನು ಬಹಿರಂಗಪಡಿಸಿದೆ. ಹೆಚ್ಚಿನ ವಿಚ್ಛೇದನಗಳು ಪ್ರೇಮವಿವಾಹಗಳಿಂದ ಉದ್ಭವಿಸುತ್ತವೆ ಎಂದು ಸುಪ್ರೀಂಕೋರ್ಟ್ ಅಭಿಪ್ರಾಯಪಟ್ಟಿದೆ. ವೈವಾಹಿಕ ವಿವಾದಕ್ಕೆ ಸಂಬಂಧಿಸಿದ ವರ್ಗಾವಣೆ ಅರ್ಜಿಯ ವಿಚಾರಣೆಯ ಸಂದರ್ಭದಲ್ಲಿ, ಪ್ರಕರಣದ ವಕೀಲರು ವಿವಾಹವು ಪ್ರೇಮ ವಿವಾಹ, ಡಿವೋರ್ಸ್‌ಗೆ ಮುಖ್ಯ ಕಾರಣ ಎಂದು ಉಲ್ಲೇಖಿಸಿದ್ದಾರೆ.

BELAGAVI VARADI KANNADA DAILY MORNING : Editor, Printer, Publisher & Owned By : **Satish Basavani Gudagenatti,** Basavani House No.53, Ashray Colony, Sarathi Nagar, Tv Center - 590019, TQ & DIST Belagavi, Karnataka.
Printed At : LAXMI PRINTERS, No.627. Auto Nagar - 590016.TQ & DIST Belagavi, Karnataka Mob : 9900332089